23 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 23 | ಸಂಚಿಕೆ 311 | ನವದೆಹಲಿ | ಬೆಲೆ ₹ 10 | ಮೇ 17, 2026, ಭಾನುವಾರ



## ನಿತ್ಯ ಪಂಚಾಂಗ 17.05.2026 ಭಾನುವಾರ



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ಉತ್ತರಾಯಣ–ವಸಂತ ಋತು, ಚಾಂದ್ರಮಾನ, ಚೈತ್ರ–ವೈಶಾಖ ಮಾಸ

ವೈಶಾಖ ಬಹುಳ, ಪಾಡ್ಯ, ವಿಶಾಖ ನಕ್ಷತ್ರ, ಬಂಗಾರಪೇಟೆ ಕರಗ, ಶೃಂಗೇರಿ ಶಾರದಾ ಮಹಾಭಿಷೇಕ, ಶಿರಹಟ್ಟಿ ರಥ, ದೊಡ್ಡಬಳ್ಳಾಪುರ ವೇಣುಗೋಪಾಲ ರಥ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 – 12.00 | 1.30 – 3.00 |
| ಮಂಗಳ | 3.00 – 4.30 | 9.00 – 10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 – 12.00 |
| ಗುರು | 1.30 – 3.00 | 6.00 – 7.30 | 9.00 – 10.30 |
| ಶುಕ್ರ | 10.30 – 12.00 | 3.00 – 4.30 | 7.30 – 9.00 |
| ಶನಿ | 9.00 – 10.30 | 1.30 – 3.00 | 6.00 – 7.30 |

# ಬಿಡದಿ ಟೌನ್‌ಶಿಪ್‌ಗೆ ವಿರೋಧ ಎಚ್.ಡಿ.ದೇವೇಗೌಡರಿಂದ ಹೋರಾಟ



**ಬೆಂಗಳೂರು, ಮೇ 16:** ಬಿಡದಿ ಟೌನ್‌ಶಿಪ್ ಹೆಸರಿನಲ್ಲಿ ರೈತರ ಜಮೀನು ಕಿತ್ತುಕೊಂಡು ದಂಧೆ ನಡೆಸಲು ಹೊರಟಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿರುವ ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡರು, ಈ ದಂಧೆಯ ವಿರುದ್ಧ ಹೋರಾಟಕ್ಕೆ ಧುಮುಕುವುದಾಗಿ ಘೋಷಿಸಿದರು.

ಜೆಡಿಎಸ್ ಪಕ್ಷದ ರಾಜ್ಯ ಕಚೇರಿ ಜೆಪಿ ಭವನದಲ್ಲಿ ಮಹತ್ವದ ಮಾಧ್ಯಮಗೋಷ್ಠಿ ಉದ್ದೇಶಿಸಿ ಮಾಜಿ ಪ್ರಧಾನಿಗಳು ಮಾತನಾಡಿ, ರೈತರ ಭೂಮಿಯನ್ನು ಕಿತ್ತುಕೊಂಡು ದಂಧೆ ಮಾಡಲು ಈ ಸರ್ಕಾರ ಹೊರಟಿದೆ. ಒಬ್ಬರು 'ರೈತರು ಹೊಡೆದರೆ ಹೊಡೆಸಿಕೊಳ್ಳುವೆ' ಎಂದಿದ್ದಾರೆ. ಮೊದಲು ರೈತರಿಂದ ಹೊಡೆಸಿಕೊಂಡು ಬರಲಿ, ಆಮೇಲೆ ನಾನು ಹೋಗಿ ಮಾತನಾಡುತ್ತೇನೆ ಎಂದು ಗುಡುಗಿದರು.

ಬೆಂಗಳೂರು ನಗರದ ಮೇಲೆ ಹೆಚ್ಚು ಒತ್ತಡ ಆಗುತ್ತದೆ ಎಂದು ಕುಮಾರಸ್ವಾಮಿ ಐದು ಟೌನ್‌ಶಿಪ್ ಮಾಡಲು ಹೊರಟಿದ್ದರು. ಅಂದು ವಿರೋಧ ವ್ಯಕ್ತವಾಗಿದ್ದಕ್ಕೆ ಟೌನ್‌ಶಿಪ್ ಯೋಜನೆಗಳನ್ನು ಎಚ್‌ಡಿಕೆ ಕೈಬಿಟ್ಟರು. ಈಗಲೂ ಕೂಡ ಬಿಡದಿ ಟೌನ್‌ಶಿಪ್ ಯೋಜನೆಗೆ ಜನರ ಆಕ್ರೋಶ, ವಿರೋಧ ಇದೆ. ಹೀಗಾಗಿ ಯೋಜನೆಯನ್ನು ತಕ್ಷಣವೇ ಕೈಬಿಡಬೇಕು ಎಂದು ದೇವೇಗೌಡ ಆಗ್ರಹಿಸಿದರು. ಅಲ್ಲದೆ ಕಾಂಗ್ರೆಸ್ ಪಕ್ಷದ ನಾಯಕರು ದೊಡ್ಡ ಅಪಪ್ರಚಾರ ನಡೆಸಿ ಕುಮಾರಸ್ವಾಮಿಯವರು ಭೂಮಿಯನ್ನು ಹೊಡೆಯಲು ಹೊರಟಿದ್ದಾರೆ ಎಂದು ಸತ್ಯಶೋಧನಾ ಸಮಿತಿ ರಚಿಸಿ ತನಿಖೆ ಮಾಡಿಸಿದರು. ಸಮಿತಿ ವರದಿಯಲ್ಲಿ ಯಾವ ಸತ್ಯ ಹೊರಗೆ ಬಂತು ದೇವರೇ ಬಲ್ಲ ಎಂದು ಮಾಜಿ ಪ್ರಧಾನಿಗಳು ವ್ಯಂಗ್ಯವಾಡಿದರು. ಇವತ್ತಿನಿಂದ ನನ್ನ ಹೋರಾಟ ಆರಂಭವಾಗಿದೆ. ಬೆಂಗಳೂರು ಸುತ್ತಮುತ್ತ ಬಡವರ ಜಮೀನನ್ನು ಕಿತ್ತುಕೊಳ್ಳುವ ಶಕ್ತಿಗಳನ್ನು ಮಟ್ಟ ಹಾಕಬೇಕಿದೆ. ಬಿಡಿಎ ಸೇರಿ ಎಲ್ಲೆಲ್ಲಿ ಅಕ್ರಮ ನಡೆದಿದೆಯೋ ಅಲ್ಲೆಲ್ಲ ಹೋರಾಟ ನಡೆಸುತ್ತೇನೆ. ಈ ಬಗ್ಗೆ ಮುಖ್ಯಮಂತ್ರಿಗೆ ಬರೆದಿರುವ ಪತ್ರದಲ್ಲಿ ಸ್ಪಷ್ಟವಾಗಿ ತಿಳಿಸಿದ್ದೇನೆ. ಸ್ಥಳೀಯ ಶಾಸಕರು ತಹಸೀಲ್ದಾರರು ಜಿಲ್ಲಾಧಿಕಾರಿಗಳು ಆ ಜನರ ಸಮಸ್ಯೆಯನ್ನು ಕೇಳಿಲ್ಲ. ಇಲ್ಲಿ ದಂಧೆ ನಡೆಯುತ್ತಿದೆ. ಕನಕಪುರದಲ್ಲಿ ಎಷ್ಟು ಜಮೀನು ವಶಕ್ಕೆ ತೆಗೆದುಕೊಂಡಿದ್ದಾರೆ ಎಂಬ ಬಗ್ಗೆ ಮಾಹಿತಿ ಇದೆ ಎಂದು ಯಾರೊಬ್ಬರ ಹೆಸರು ಹೇಳದೆಯೇ ಮಾಜಿ ಪ್ರಧಾನಿಗಳು ವಾಗ್ದಾಳಿ ನಡೆಸಿದರು.

ಮಾಧ್ಯಮಗೋಷ್ಠಿಯಲ್ಲಿ ವಿಧಾನ ಪರಿಷತ್ ಸದಸ್ಯ ಟಿ.ಎ. ಶರವಣ, ಗ್ರೇಟರ್ ಬೆಂಗಳೂರು ಜೆಡಿಎಸ್ ಅಧ್ಯಕ್ಷ ಎಚ್.ಎಂ. ರಮೇಶ್‌ಗೌಡ, ಮಾಗಡಿ ವಿಧಾನಸಭಾ ಕ್ಷೇತ್ರದ ಮಾಜಿ ಶಾಸಕ ಮಂಜುನಾಥ್ ಸೇರಿ ಬಿಡದಿ ಭಾಗದ ಅನೇಕ ರೈತರು ಉಪಸ್ಥಿತರಿದ್ದರು.

### 20 ಸಾವಿರ ಎಕರೆ ಯಾರ ಹೆಸರಿನಲ್ಲಿದೆ ತನಿಖೆ ಮಾಡಿಸಿ

**ಸಿಎಂ ಸಿದ್ದರಾಮಯ್ಯ ಅವರನ್ನು ನೇರವಾಗಿ ಪ್ರಶ್ನಿಸಿರುವ ದೇವೇಗೌಡರು, ಸಿದ್ದರಾಮಯ್ಯನವರೇ, ನೀವು ನನ್ನ ಜೊತೆ ಕೆಲಸ ಮಾಡಿದ್ದೀರಿ. ನಿಮ್ಮ ಸಾಮಾಜಿಕ ನ್ಯಾಯದ ಮಾತಿನ ಬಗ್ಗೆ ಅರಿವಿದೆ. ಬೆಂಗಳೂರು ಸುತ್ತಮುತ್ತ ಸುಮಾರು 20,000 ಎಕರೆ ಭೂಮಿ ಯಾರ ಹೆಸರಿನಲ್ಲಿ ಇದೆ ಎಂಬುದನ್ನು ತನಿಖೆ ಮಾಡಿ ಎಂದು ಈಗಾಗಲೇ ಪತ್ರ ಬರೆದಿದ್ದೇನೆ. ಬೆಂಗಳೂರು ನಗರದ ಹೊಣೆ ಹೊತ್ತಿರುವವರ ಒತ್ತಡಕ್ಕೆ ಮಣಿದು ಜನರ ಸಮಸ್ಯೆಯನ್ನು ನೀವು ಕೇಳುತ್ತಿಲ್ಲ. ಬಿಡದಿ ರೈತರ ಸಮಸ್ಯೆಯನ್ನು ಯಾರಾದರೂ ಹೋಗಿ ಕೇಳಿದ್ದೀರಾ ಎಂದು ಪ್ರಶ್ನಿಸಿದ್ದಾರೆ.**

# ಎಷ್ಟೇ ವಿರೋಧ ವ್ಯಕ್ತವಾದರೂ ಬಿಡದಿ ಟೌನ್‌ಶಿಪ್ ಖಚಿತ ಡಿಕೆಶಿ ಗುಡುಗು



**ಬೆಂಗಳೂರು, ಮೇ 16:** ರೈತರು ಎರಡೇಟು ಹೊಡೆದರೂ, ಬಟ್ಟೆ ಹರಿದರೂ ಸರಿ ಬಿಡದಿ ಟೌನ್‌ಶಿಪ್ ನಿರ್ಮಿಸಿಯೇ ಸಿದ್ಧ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತೀವ್ರ ಆಕ್ರೋಶದ ನಡುವೆಯೂ ತಮ್ಮ ನಿರ್ಧಾರವನ್ನು ದೃಢವಾಗಿ ಸಮರ್ಥಿಸಿಕೊಂಡಿದ್ದಾರೆ.

ಬಿಡದಿ ಟೌನ್‌ಶಿಪ್ ಯೋಜನೆಗೆ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರ ವಿರೋಧಕ್ಕೆ ಶುಕ್ರವಾರ ತೀಕ್ಷ್ಣವಾಗಿ ಪ್ರತಿಕ್ರಿಯಿಸಿದ ಅವರು, ಈ ಯೋಜನೆಯನ್ನು ಕೈಬಿಡುವ ಪ್ರಶ್ನೆಯೇ ಇಲ್ಲ. ಕುಮಾರಸ್ವಾಮಿ ಅವರು ಅಧಿಕಾರದಲ್ಲಿದ್ದಾಗ ತಂದಿದ್ದ ಯೋಜನೆಯನ್ನೇ ಈಗ ಮುಂದುವರಿಸುತ್ತಿದ್ದೇವೆ. ಒಂದು ವೇಳೆ ಈ ಯೋಜನೆ ಅಗತ್ಯವಿರಲಿಲ್ಲ ಎನ್ನುವುದಾದರೆ, ಅವರು ತಮ್ಮ ಅಧಿಕಾರಾವಧಿಯಲ್ಲಿ ಈ ಭೂಮಿಯನ್ನು ಏಕೆ ಡಿನೋಟಿಫೈ ಮಾಡಲಿಲ್ಲ ಎಂದು ಪ್ರಶ್ನಿಸಿದರು. ಮುಂದಿನ ಪೀಳಿಗೆಯ ಹಿತದೃಷ್ಟಿಯಿಂದ ಈ ಭೂಮಿಯನ್ನು ಡಿನೋಟಿಫೈ ಮಾಡಲು ನಾನಂತೂ ಸಿದ್ಧನಿಲ್ಲ. ಇನ್ನು 20 ವರ್ಷಗಳ ನಂತರ ಬಿಡದಿ ಮತ್ತು ಬೆಂಗಳೂರು ದಕ್ಷಿಣದ ಜನರು ನನ್ನ ಈ ಕೆಲಸವನ್ನು ನೆನಪಿಸಿಕೊಳ್ಳುತ್ತಾರೆ, ಎಂದರು.

ಯೋಜನೆಗೆ ಭೂಮಿ ಬಿಟ್ಟುಕೊಡಲು ನಿರಾಕರಿಸುತ್ತಿರುವ ರೈತರ ಮನವೊಲಿಸಲು ಖುದ್ದು ಭೇಟಿ ಮಾಡುತ್ತೇನೆ. ರೈತರು ನನಗೆ ಎರಡೇಟು ಹೊಡೆಯಬಹುದು, ಕಲ್ಲೆಸೆಯಬಹುದು, ಬಟ್ಟೆ ಹರಿಯಬಹುದು ಅಥವಾ ಧಿಕ್ಕಾರ ಕೂಗಬಹುದು. ಎಲ್ಲವನ್ನೂ ಎದುರಿಸಲು ಸಿದ್ಧನಿದ್ದೇನೆ ಎಂದರು.

# ಮೇ 30ರೊಳಗೆ ಸಂಪುಟ ಪುನಾರಚನೆ ಇಲ್ಲವೇ ವಿಸ್ತರಣೆ: ಸಿಎಂ ಬದಲಾವಣೆಗೆ ರಾಯರಡ್ಡಿ ವಿರೋಧ

**ಬೆಂಗಳೂರು, ಮೇ 16:** ಮೇ ತಿಂಗಳ 30ರ ಒಳಗಾಗಿ ಸಂಪುಟ ಪುನರ್ ರಚನೆಯಾಗುತ್ತದೆ, ಇಲ್ಲವೇ ವಿಸ್ತರಣೆ ಆಗುತ್ತದೆ. ಸಿದ್ದರಾಮಯ್ಯ ಎರಡು ವರ್ಷ ಮುಖ್ಯಮಂತ್ರಿಗಳಾಗಿ ಮುಂದುವರಿಯುತ್ತಾರೆ ಎಂದು ಯಲಬುರ್ಗಾ ಶಾಸಕ ಮತ್ತು ಸಿಎಂ ಆರ್ಥಿಕ ಸಲಹೆಗಾರ ಬಸವರಾಜ ರಾಯರೆಡ್ಡಿ ಅಭಿಪ್ರಾಯ ವ್ಯಕ್ತಪಡಿಸಿದರು.

ಕೊಪ್ಪಳದ ಪ್ರವಾಸಿ ಮಂದಿರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಒಂದು ವೇಳೆ ಪಕ್ಷದ ವರಿಷ್ಠರು ಬದಲಾವಣೆ ಬಯಸಿದರೆ ಸಿದ್ದರಾಮಯ್ಯರ ಮಟ್ಟದ ಅನುಭವಿಯಾಗಿರುವ ಮಲ್ಲಿಕಾರ್ಜುನ ಖರ್ಗೆಯವರನ್ನು ಮುಖ್ಯಮಂತ್ರಿ ಮಾಡಬೇಕೆಂಬುದು ನನ್ನ ಅಭಿಪ್ರಾಯವಾಗಿದೆ. ಆದರೆ ಮುಖ್ಯಮಂತ್ರಿ ಬದಲಾವಣೆ ಮಾಡುವುದು ಸರಿಯಲ್ಲ ಎಂದು ಹೇಳಿದರು.

ಸಂಪುಟ ಪುನರ್ ರಚನೆಯಾಗಬೇಕು. ಏಕೆಂದರೆ ಮೂರು ವರ್ಷ ಕಳೆದಿರುವುದರಿಂದ ಹೊಸ ಮುಖಗಳನ್ನು ತಂದರೆ ಉತ್ತಮ ಆಡಳಿತ ಕೊಡಲು ಸಾಧ್ಯ. ಉತ್ತಮ ಆಡಳಿತ ನೀಡಿದರೆ ಮುಂದಿನ ಚುನಾವಣೆಯಲ್ಲಿ ಪಕ್ಷವನ್ನು ಮತ್ತೆ ಅಧಿಕಾರಕ್ಕೆ ತರಲು ಅನುಕೂಲವಾಗುತ್ತದೆ ಎಂದು ರಾಯರೆಡ್ಡಿ ಹೇಳಿದರು.

ಪೆಟ್ರೋಲ್. ಡೀಸೆಲ್ ಬೆಲೆ ಏರಿಕೆ ಮಾಡಿರುವುದು ಸರಿಯಲ್ಲ. ಈ ಬೆಲೆ ಏರಿಕೆ ಇಷ್ಟಕ್ಕೆ ನಿಲ್ಲುವುದಿಲ್ಲ, ಇನ್ನೂ ಹೆಚ್ಚಾಗುತ್ತದೆ. ಲೀಟರ್‌ಗೆ 115 ರೂಪಾಯಿ ದಾಟುತ್ತದೆ. ಇದಕ್ಕೆ ಪ್ರಧಾನಿಯವರ ಆರ್ಥಿಕ ನೀತಿಗಳೇ ಕಾರಣ. ಆದ್ದರಿಂದ ಸಿದ್ದರಾಮಯ್ಯ ಹೇಳಿದಂತೆ ಪ್ರಧಾನಿ ರಾಜೀನಾಮೆ ಕೊಡಬೇಕು ಎಂದು ಆಗ್ರಹಿಸಿದರು.

ಮನಮೋಹನ್ ಸಿಂಗ್ ಪ್ರಧಾನಿ ಆಗಿದ್ದಾಗ ಕಚ್ಚಾತೈಲದ ಬೆಲೆ ಸಾರ್ವಕಾಲಿಕ ಗರಿಷ್ಠ ಮಟ್ಟಕ್ಕೆ, ಅಂದರೆ ಪ್ರತಿ ಬ್ಯಾರಲ್‌ಗೆ 145 ಡಾಲರ್ ಇತ್ತು. ಆ ವೇಳೆ ನಮ್ಮ ದೇಶದಲ್ಲಿ ಪೆಟ್ರೋಲ್ ಬೆಲೆ 53 ರೂಪಾಯಿ ಇತ್ತು. ಆದರೆ ಇದೀಗ ಕಚ್ಚಾ ತೈಲದ ಬೆಲೆ 119 ಡಾಲರ್ ಇದೆ. ಇದಕ್ಕೆ ಕಾರಣ ಪ್ರಧಾನಿಯವರು ಟ್ರಂಪ್‌ಗೆ ಹೆದರಿ ರಷ್ಯಾದಿಂದ ತೈಲ ಖರೀದಿ ಮಾಡುವುದನ್ನು ನಿಲ್ಲಿಸಿದ್ದಾರೆ ಎಂದು ಹೇಳಿದರು.

ರೂಪಾಯಿ ಮೌಲ್ಯ ಕುಸಿದಿದೆ, ರಫ್ತು ಕಡಿಮೆ ಆಗುತ್ತಿದೆ. ಆಮದು ಹೆಚ್ಚಾಗುತ್ತಿದೆ, ಅಂತಾರಾಷ್ಟ್ರೀಯ ಮಟ್ಟದಲ್ಲಿ ರೂಪಾಯಿ ಬೇಡಿಕೆ ಕುಸಿಯುತ್ತಿದೆ. ಇದನ್ನೆಲ್ಲ ಸರಿಪಡಿಸಬೇಕೆಂದರೆ ಪ್ರಧಾನಿ ರಾಜೀನಾಮೆ ನೀಡಿ ಆರ್ಥಿಕ ತಜ್ಞರನ್ನು ಪ್ರಧಾನಿ ಮಾಡಬೇಕು ಎಂದು ಆಗ್ರಹಿಸಿದರು.

# ಅರ್ಹ ಮತದಾರರಿಗೆ ಧಕ್ಕೆಇಲ್ಲ: ಆಯೋಗದ ಭರವಸೆಗೆ ರಮೇಶ್‌ಬಾಬು ಸ್ವಾಗತ

**ಬೆಂಗಳೂರು, ಮೇ 16:** ಕರ್ನಾಟಕದಲ್ಲಿ ಜೂ.20ರಿಂದ ಮೂರನೇ ಹಂತದ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಆರಂಭಿಸುವುದಾಗಿ ಕೇಂದ್ರ ಚುನಾವಣಾ ಆಯೋಗ ತಿಳಿಸಿದ್ದು, ಈ ಪ್ರಕ್ರಿಯೆಯಲ್ಲಿ ಒಬ್ಬನೇ ಒಬ್ಬ ಅರ್ಹ ಮತದಾರನೂ ಪಟ್ಟಿಯಿಂದ ಹೊರಗುಳಿಯದಂತೆ ಕಟ್ಟುನಿಟ್ಟಿನ ನಿಗಾ ವಹಿಸಲಾಗುವುದು ಎಂದು ರಾಜ್ಯ ಮುಖ್ಯ ಚುನಾವಣಾಧಿಕಾರಿ ನೀಡಿರುವ ಭರವಸೆಯನ್ನು ಸ್ವಾಗತಿಸುವುದಾಗಿ ಕೆಪಿಸಿಸಿ ಪ್ರಚಾರ ವಿಭಾಗದ ಅಧ್ಯಕ್ಷ ಹಾಗೂ ಎಂಎಲ್‌ಸಿ ರಮೇಶ್‌ಬಾಬು ಹೇಳಿದ್ದಾರೆ.

ಸಂವಿಧಾನದ ಅಡಿಯಲ್ಲಿ, ಪ್ರಜಾಪ್ರತಿನಿಧಿ ಕಾಯಿದೆ 1950 ಮತ್ತು ಮತದಾರರ ನೋಂದಾವಣಿ ನಿಯಮ 1960ರ ಅಡಿಯಲ್ಲಿ ಕರ್ನಾಟಕದಲ್ಲಿ ಯಾವುದೇ ಅನಾಹುತಗಳಿಗೆ ಅವಕಾಶ ನೀಡದೆ, ಪಕ್ಷಪಾತದ ಅಡಿಯಲ್ಲಿ ಯಾವುದೇ ಧರ್ಮ ಅಥವಾ ವರ್ಗಗಳ ಮತದಾರರನ್ನು ಕೈಬಿಡದಂತೆ ಮತದಾರರ ಪಟ್ಟಿಯ ವಿಶೇಷ ಪರಿಷ್ಕರಣೆ ಕಾರ್ಯ ನಡೆಯಬೇಕಾಗಿರುತ್ತದೆ. 1951ರಿಂದ ಇಲ್ಲಿಯವರೆಗೆ 8 ಬಾರಿ ಮತದಾರರ ಪಟ್ಟಿಯ ವಿಶೇಷ ಪರಿಷ್ಕರಣೆ ಆಗಿದೆ.



ಆದರೆ ಕಳೆದ 21 ವರ್ಷಗಳಲ್ಲಿ ಚುನಾವಣಾ ಆಯೋಗವು ಮತದಾರರ ವಿಶೇಷ ಪರಿಷ್ಕರಣೆ ಕಾರ್ಯ ನಡೆದಿಲ್ಲ. ಇದಕ್ಕೆ ಆಯೋಗ ಸಕಾರಣವನ್ನೂ ನೀಡಿಲ್ಲ. ಇತ್ತೀಚೆಗೆ ಕೆಲ ರಾಜ್ಯಗಳ ವಿಧಾನಸಭಾ ಚುನಾವಣೆಗಳಲ್ಲಿ ವಿಶೇಷ ಪರಿಷ್ಕರಣೆಯ ಹೆಸರಿನಲ್ಲಿ ಕೆಲವು ರಾಜಕೀಯ ಪಕ್ಷಗಳನ್ನು ಗುರಿಯಾಗಿಸಿಕೊಂಡು ಮತದಾರರ ಪಟ್ಟಿ ಪರಿಷ್ಕರಣೆ ಮಾಡಿ ಚುನಾವಣಾ ಫಲಿತಾಂಶವು ಏರುಪೇರಾಗಿರುವುದರ ಹಿನ್ನೆಲೆಯಲ್ಲಿ, ಕರ್ನಾಟಕದಲ್ಲಿ ಅಂತಹ ಯಾವುದೇ ಅಕ್ರಮಗಳಿಗೆ ಅವಕಾಶವಿಲ್ಲದಂತೆ ಚುನಾವಣಾ ಆಯೋಗ ನಡೆದುಕೊಳ್ಳಬೇಕಾಗಿರುತ್ತದೆ ಎಂದು ಮನವಿ ಮಾಡಿದ್ದಾರೆ.

ಪರಿಷ್ಕರಣೆ ವೇಳೆಯಲ್ಲಿ ಕೆಲವು ಅಂಶಗಳನ್ನು ಪರಿಗಣಿಸಿ, ಅಂತಹ ಮತದಾರರನ್ನು ಪರಿಷ್ಕರಣೆಯ ಹೆಸರಿನಲ್ಲಿ ಮತದಾರರ ಪಟ್ಟಿಯಿಂದ ಕೈಬಿಡದಂತೆ ಒತ್ತಾಯಿಸಿದ್ದಾರೆ.

> **ಮತದಾರರ ಪಟ್ಟಿ ಪರಿಷ್ಕರಿಸುವ ಜೊತೆಗೆ ಕರ್ನಾಟಕದಲ್ಲಿ ಸಾರ್ವತ್ರಿಕ ಚುನಾವಣೆಗೆ ಸಾಕಷ್ಟು ಸಮಯ ಇರುವುದರಿಂದ ವಿಶೇಷ ಮತದಾರರ ಪಟ್ಟಿಯ ಪರಿಷ್ಕರಣೆ ಕಾರ್ಯದ ಕಾಲಮಿತಿಯನ್ನು ಒಂದು ವರ್ಷಕ್ಕೆ ವಿಸ್ತರಿಸಬೇಕಾಗಿ ಕೋರುತ್ತೇನೆ. ಸಾಂವಿಧಾನಿಕ ಮೌಲ್ಯಗಳನ್ನು ಸಂರಕ್ಷಣೆ ಮಾಡುವ ಹಿನ್ನೆಲೆಯಲ್ಲಿ ಮತ್ತು ಚುನಾವಣಾ ಆಯೋಗವು ತನ್ನ ಸಾಂವಿಧಾನಿಕ ಕರ್ತವ್ಯ ನಿರ್ವಹಣೆಯ ಹಿನ್ನೆಲೆಯಲ್ಲಿ ಕೆಲವು ಅಂಶಗಳನ್ನು ಪರಿಗಣಿಸುವುದು ಅಗತ್ಯವಾಗಿದೆ ಎಂದು ಮನವಿ ಮಾಡುತ್ತೇನೆ.**
>
> **-ರಮೇಶ್‌ಬಾಬು** । ಎಂಎಲ್‌ಸಿ

**ಪರಿಗಣಿಸುವಂತೆ ಕೋರಿರುವ ಅಂಶಗಳು**

1. ಕರ್ನಾಟಕದಲ್ಲಿ 2008ರ ಕ್ಷೇತ್ರ ಪುನಾರ್ ವಿಗಂಡಣೆ ಕಾರಣ ಅನೇಕ ವಿಧಾನಸಭಾ ಕ್ಷೇತ್ರಗಳು ಈಗ ಅಸ್ತಿತ್ವದಲ್ಲಿ ಇರುವುದಿಲ್ಲ. ಮ್ಯಾಪಿಂಗ್ ಪ್ರಕ್ರಿಯೆಯಲ್ಲಿ 2002ರ ಮತದಾರರ ಪಟ್ಟಿಗೆ ಹೊಂದಾಣಿಕೆಯಾಗದ ಮತದಾರರು.
2. ಕರ್ನಾಟಕದಲ್ಲಿ ಜನಿಸಿ ಕಾರಣಾಂತರಗಳಿಂದ ಮತದಾರರ ಪಟ್ಟಿಯನ್ನು ಬೇರೆ ವಿಧಾನಸಭಾ ಕ್ಷೇತ್ರಗಳಿಗೆ ಬದಲಾಯಿಸಿಕೊಂಡಿರುವ ಮತದಾರರು.
3. ಮದುವೆ, ಶಿಕ್ಷಣ ಅಥವಾ ಉದ್ಯೋಗದ ಕಾರಣಕ್ಕಾಗಿ ಮತದಾರರ ಪಟ್ಟಿಯಲ್ಲಿ ಕ್ಷೇತ್ರ ಬದಲಾವಣೆ ಆಗಿರುವ ಹೆಣ್ಣುಮಕ್ಕಳ ಹೆಸರು.
4. ವರ್ಗಾವಣೆಯ ಕಾರಣಕ್ಕಾಗಿ ಬೇರೆ ಕ್ಷೇತ್ರಗಳಿಗೆ ಮತದಾರರ ಪಟ್ಟಿಯಲ್ಲಿ ಬದಲಾವಣೆ ಆಗಿರುವ ಸರ್ಕಾರಿ ನೌಕರರು.
5. ವ್ಯಾಪಾರ, ಉದ್ಯೋಗ ಅಥವಾ ಜೀವನೋಪಾಯಕ್ಕಾಗಿ ಸ್ಥಳಾಂತರಗೊಂಡಿರುವ ಮತದಾರರು.
6. ಕರ್ನಾಟಕದಲ್ಲಿ ಜನಿಸಿ ವಾಸಿಸುತ್ತಿರುವ ಮತದಾರರು
7. ಕರ್ನಾಟಕದಲ್ಲಿರುವ ಅಲೆಮಾರಿ, ಆದಿವಾಸಿ ಮತ್ತು ಬುಡಕಟ್ಟು ಸಮುದಾಯಗಳ ಮತದಾರರು.
8. ಸ್ಥಳೀಯ ಸಂಸ್ಥೆಗಳಿಂದ ಅಥವಾ ಸರ್ಕಾರಿ, ಅರೆಸರ್ಕಾರಿ ಸಂಸ್ಥೆಗಳಿಂದ ವಾಸ ದೃಢೀಕರಣ ಹೊಂದಿರುವ ಮತದಾರರು.

# ಗ್ಯಾರಂಟಿ ಯೋಜನೆಗಳು ಜನಸಾಮಾನ್ಯರ ಬದುಕಿಗೆ ಆಶಾಕಿರಣ: ದಿನೇಶ್ ಗೂಳಿಗೌಡ



ಮಳವಳ್ಳಿ, ಮೇ 16: ಪಂಚ ಗ್ಯಾರಂಟಿ ಯೋಜನೆಗಳು ಕೇವಲ ಯೋಜನೆಗಳಲ್ಲ, ಅವು ಜನಸಾಮಾನ್ಯರ ಬದುಕಿಗೆ ಆಶಾಕಿರಣ. ಪಂಚಗ್ಯಾರಂಟಿ ಯೋಜನೆಗಳಿಗಾಗಿ ತಾಲೂಕಿಗೆ ಕಾಂಗ್ರೆಸ್ ಸರ್ಕಾರ 679.24 ಕೋಟಿ ರೂ. ಹಣವನ್ನು ವೆಚ್ಚ ಮಾಡಿದೆ ಎಂದು ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಾದ ದಿನೇಶ್ ಗೂಳಿಗೌಡ ಹೇಳಿದರು.

ಪಟ್ಟಣದ ತಾಲೂಕು ಪಂಚಾಯತ್ ಸಭಾಂಗಣದಲ್ಲಿ ಆಯೋಜಿಸಿದ್ದ ಗ್ಯಾರಂಟಿ ಯೋಜನೆಗಳ ತಾಲೂಕು ಮಟ್ಟದ ಪ್ರಗತಿ ಪರಿಶೀಲನೆ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಪಂಚಗ್ಯಾರಂಟಿ ಯೋಜನೆಗಳಿಗಾಗಿ ರಾಜ್ಯ ಸರ್ಕಾರ 1.36 ಲಕ್ಷ ಕೋಟಿ ಹಣ ವೆಚ್ಚ ಮಾಡಿದೆ. ಸರ್ಕಾರ ಜನರ ತೆರಿಗೆ ಹಣವನ್ನು ಮತ್ತೆ ಜನರ ಕಲ್ಯಾಣಕ್ಕೇ ಬಳಸುತ್ತಿದೆ ಎಂಬುದಕ್ಕೆ ಈ ಯೋಜನೆಗಳು ಸಾಕ್ಷಿ ಎಂದರು.ತಾಲೂಕಿನ ಶೇ. 96ರಷ್ಟು ಜನರು ಗ್ಯಾರಂಟಿ ಯೋಜನೆಗಳ ಫಲಾನುಭವಿಗಳಾಗಿದ್ದಾರೆ. ಶಕ್ತಿ ಯೋಜನೆ ಜಾರಿ ಬಳಿಕ ತಾಲೂಕಿನಲ್ಲಿ ದುಡಿಯುವ ಮಹಿಳೆಯರ ಸಂಖ್ಯೆ ಹೆಚ್ಚಾಗಿದೆ. ಪ್ರತಿ ಮನೆಯಲ್ಲೂ ಗ್ಯಾರಂಟಿ ಫಲಾನುಭವಿಗಳಿದ್ದಾರೆ ಎಂದು ಹೇಳಿದರು.35 ಹೆಚ್ಚುವರಿ ನ್ಯಾಯಬೆಲೆ ಅಂಗಡಿಗಳ ಬೇಡಿಕೆ, ಹೆಚ್ಚುವರಿ ಬಸ್ ಗಳ ಕುರಿತು ಸರ್ಕಾರದ ಗಮನಕ್ಕೆ ತರಲಾಗುವುದು. ಕಾಳಸಂತೆಯಲ್ಲಿ ಅನ್ನಭಾಗ್ಯ ಅಕ್ಕಿ ಮಾರಾಟವಾಗದಂತೆ ಅಧಿಕಾರಿಗಳು ಕಟ್ಟುನಿಟ್ಟಿನ ಕ್ರಮಕೈಗೊಳ್ಳಬೇಕು ಎಂದು ಸೂಚನೆ ನೀಡಿದರು.

ತಾಲೂಕು ಗ್ಯಾರಂಟಿ ಯೋಜನಾ ಸಮಿತಿಯ ಸದಸ್ಯರುಗಳು 5 ಗ್ಯಾರಂಟಿ ಯೋಜನೆಗಳ ಬಗ್ಗೆ ಪ್ರತಿ ಮನೆಯವರಿಗೂ ಮನದಟ್ಟು ಮಾಡಿಕೊಡಬೇಕು. ಅರ್ಹರಿಗೆ ಈ ಯೋಜನೆಗಳು ತಲುಪುತ್ತಿವೆಯೇ ಎಂದು ಮೇಲ್ವಿಚಾರಣೆ ಮಾಡಬೇಕು. ಯೋಜನೆಗಳ ಅನುಷ್ಠಾನದಲ್ಲಿ ಎದುರಾಗುವ ಸಮಸ್ಯೆಗಳು, ತಾಂತ್ರಿಕ ಅಡಚಣೆಗಳು ಹಾಗೂ ಸಾರ್ವಜನಿಕರ ಅಹವಾಲುಗಳನ್ನು ಸಂಗ್ರಹಿಸಿ ಜಿಲ್ಲಾ ಸಮಿತಿಗೆ ತಿಳಿಸಿದರೆ ಸರ್ಕಾರದ ಹಂತದಲ್ಲಿ ಅದನ್ನು ಪರಿಹರಿಸಲು ಪ್ರಯತ್ನಿಸಲಾಗುವುದು ಎಂದರು.

ತಹಸೀಲ್ದಾರ್ ಲೋಕೇಶ್ ಅವರು ಮಾತನಾಡಿ, ತಾಲೂಕಿನಲ್ಲಿ ಪಂಚಗ್ಯಾರಂಟಿ ಯೋಜನೆಗಳನ್ನು ಸಮರ್ಪಕವಾಗಿ ಜಾರಿಗೆ ತರಲಾಗಿದೆ. ಅನ್ನಭಾಗ್ಯ ಅಕ್ಕಿ ಮಾರಾಟ ಮಾಡಿದರೆ ಕೇಸ್ ದಾಖಲಿಸಲಾಗುವುದು. ಪಡಿತರ ಚೀಟಿದಾರರು ಅಕ್ಕಿ ಮಾರಾಟ ಮಾಡಿದರೆ ಅವರ ಕಾರ್ಡ್ ರದ್ದುಗೊಳಿಸಲಾಗುವುದು ಎಂಬ ಎಚ್ಚರಿಕೆ ಫಲಕವನ್ನು ನ್ಯಾಯಬೆಲೆ ಅಂಗಡಿ ಮುಂದೆ ಒಂದು ವಾರದೊಳಗೆ ಹಾಕುವಂತೆ ಸೂಚಿಸಲಾಗುವುದು ಎಂದು ಹೇಳಿದರು.

ತಾಲೂಕು ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶ್ರೀನಿವಾಸ್ ಮಾತನಾಡಿ, ಪಂಚಗ್ಯಾರಂಟಿ ಯೋಜನೆಗಳ ಕುರಿತು ಪ್ರಚಾರ ಕಾರ್ಯಕೈಗೊಳ್ಳಲಾಗುವುದು. 39 ಗ್ರಾಮ ಪಂಚಾಯತಿಗಳಲ್ಲಿ ಬ್ಯಾನರ್, ಬೋರ್ಡಿಂಗ್ ಅಳವಡಿಸಲಾಗುವುದು ಎಂದರು.

ಸಭೆಯಲ್ಲಿ ಮಂಡ್ಯ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಚಿಕ್ಕಲಿಂಗಯ್ಯ, ಜಿಲ್ಲಾ ಉಪಾಧ್ಯಕ್ಷ ರಾಜೇಂದ್ರ, ತಾಲೂಕು ಅಧ್ಯಕ್ಷ ಮಾದೇಶ ಸೇರಿದಂತೆ ತಾಲೂಕು ಸಮಿತಿ ಸದಸ್ಯರು, ತಾಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

ಅನ್ನಭಾಗ್ಯ ಯೋಜನೆಯಡಿ 2,14,852 ಫಲಾನುಭವಿಗಳಿಗೆ ನೇರ ನಗದು ವರ್ಗಾವಣೆ ಮುಲಕ 69.40 ಕೋಟಿ ರೂ. ಹಣವನ್ನು ವರ್ಗಾವಣೆ ಮಾಡಲಾಗಿದೆ. ಇದುವರೆಗೂ 1,71,700 ಕ್ವಿಂಟಾಲ್ ಆಹಾರ ಧಾನ್ಯ ವಿತರಣೆ ಮಾಡಲಾಗಿದ್ದು ಇದರ ಮೊತ್ತ 39.49 ಕೋಟಿ ರೂ. ಗೃಹಜ್ಯೋತಿ ಯೋಜನೆಯಡಿ 72,720 ಫಲಾನುಭವಿಗಳಿಗೆ ಮಾಸಿಕ 200 ಯೂನಿಟ್ ಗಳವರೆಗೆ ಉಚಿತ ವಿದ್ಯುತ್ ನೀಡಲಾಗುತ್ತಿದ್ದು ಇದಕ್ಕೆ ಖರ್ಚಾಗಿರುವ 83.73 ಕೋಟಿ ರೂ.ಹಣವನ್ನು ಚೆಸ್ಕಾಂಗೆ ಸರ್ಕಾರ ಭರಿಸಿದೆ.

ಗೃಹಲಕ್ಷ್ಮಿ ಯೋಜನೆಯಡಿ 74,495 ಫಲಾನುಭವಿಗಳು ನೋಂದಣಿಯಾಗಿದ್ದು ಇವರಿಗೆ ಮಾಸಿಕ 2 ಸಾವಿರ ರೂ.ಗಳಂತೆ 380.43 ಕೋಟಿ ರೂ. ಹಣವನ್ನು ನೇರವಾಗಿ ಫಲಾನುಭವಿಗಳ ಬ್ಯಾಂಕ್ ಖಾತೆಗೆ ಜಮೆ ಮಾಡಲಾಗಿದೆ. ತಾಲೂಕಿನಲ್ಲಿ ಗೃಹಲಕ್ಷ್ಮಿ ಯೋಜನೆಯಡಿ ನೋಂದಾಯಿತರಾದವರ ಪೈಕಿ 469 ಮಂದಿ ಮೃತಪಟ್ಟಿದ್ದಾರೆ.ಶಕ್ತಿ ಯೋಜನೆಯಡಿ ತಾಲೂಕಿನಲ್ಲಿ 3.51 ಕೋಟಿ ಮಹಿಳೆಯರು ಉಚಿತವಾಗಿ ಪ್ರಯಾಣಿಸಿದ್ದು ಇದರ ಟಿಕೆಟ್ ವೆಚ್ಚ 102.40 ಕೋಟಿ ರೂ. ಹಣವನ್ನು ಸಾರಿಗೆ ನಿಗಮಕ್ಕೆ ಸರ್ಕಾರ ಭರಿಸಿದೆ.ಯುವನಿಧಿ ಯೋಜನೆಯಡಿ 1299 ಪದವೀಧರ ಹಾಗೂ 40 ಡಿಪ್ಲೊಮಾ ಪದವಿ ಪೂರೈಸಿದ 1339 ನಿರುದ್ಯೋಗ ಯುವಕರು ನೋಂದಣಿಯಾಗಿದ್ದು ಇವರಿಗೆ ನಿರುದ್ಯೋಗ ಭತ್ಯೆ ರೂಪದಲ್ಲಿ ಜೀವನ ನಿರ್ವಹಣೆ ಹಾಗೂ ಮುಂದಿನ ವ್ಯಾಸಂಗಕ್ಕೆ ಅನುಕೂಲವಾಗಲೆಂದು 3.79 ಕೋಟಿ ರೂ. ಹಣವನ್ನು ಸರ್ಕಾರ ನೀಡಿದೆ.

# ಸಿದ್ಧಾಂತ, ಸೇವೆ, ಸಂಘಟನೆಯೇ ಬಿಜೆಪಿಯ ಶಕ್ತಿ: ಡಾ.ಮಂಜುನಾಥ್



**ಬೆಂಗಳೂರು, ಮೇ 16:** ಭಾರತೀಯ ಜನತಾ ಪಕ್ಷವು ಕೇವಲ ರಾಜಕೀಯ ಪಕ್ಷವಲ್ಲ, ದೇಶಭಕ್ತಿ, ರಾಷ್ಟ್ರಭಾವನೆ, ಸೇವಾ ಮನೋಭಾವ ಮತ್ತು ಸಿದ್ಧಾಂತಗಳಿಗೆ ಬದ್ಧವಾಗಿರುವ ಕಾರ್ಯಕರ್ತರ ಸಂಘಟನೆ ಎಂದು ಸಂಸದ ಡಾ.ಸಿ.ಎನ್. ಮಂಜುನಾಥ್ ಹೇಳಿದರು.

ಕುಂಬಳಗೋಡು ಸಮೀಪದ ಖಾಸಗಿ ರೆಸಾರ್ಟ್‌ನಲ್ಲಿ ಬಿಜೆಪಿ ವತಿಯಿಂದ ಶನಿವಾರ ಹಮ್ಮಿಕೊಂಡಿದ್ದ ಪಂಡಿತ್ ದೀನದಯಾಳ್ ಉಪಾಧ್ಯಾಯ ಪ್ರಶಿಕ್ಷಣ ಮಹಾಭಿಯಾನ ಉದ್ಘಾಟನಾ ಕಾರ್ಯಕ್ರಮದಲ್ಲಿ ಮಾತನಾಡಿ, ಪಂಡಿತ್ ದೀನದಯಾಳ್ ಉಪಾಧ್ಯಾಯ ಅವರ ಅಂತ್ಯೋದಯ ತತ್ವವನ್ನು ಆಧಾರವಾಗಿಟ್ಟುಕೊಂಡು ಸಮಾಜದ ಕೊನೆಯ ವ್ಯಕ್ತಿಗೂ ಅಭಿವೃದ್ಧಿಯ ಫಲ ತಲುಪಿಸುವ ಕಾರ್ಯವನ್ನು ಬಿಜೆಪಿ ಮಾಡುತ್ತಿದೆ ಎಂದರು.

ಕಾರ್ಯಕರ್ತರ ತ್ಯಾಗ, ಪರಿಶ್ರಮ ಮತ್ತು ಸಂಘಟನಾ ಶಕ್ತಿಯೇ ಬಿಜೆಪಿಯನ್ನು ವಿಶ್ವದ ಅತಿದೊಡ್ಡ ರಾಜಕೀಯ ಪಕ್ಷವನ್ನಾಗಿ ರೂಪಿಸಿದೆ. ಪಕ್ಷದ ವೈಚಾರಿಕತೆ, ಶಿಸ್ತು ಮತ್ತು ರಾಷ್ಟ್ರಪ್ರೇಮದ ಮನೋಭಾವ ಪ್ರತಿಯೊಬ್ಬ ಕಾರ್ಯಕರ್ತರಲ್ಲೂ ಇನ್ನಷ್ಟು ಬಲವಾಗಬೇಕು. ಯುವಕರು ಸೇವಾ ಧ್ಯೇಯದೊಂದಿಗೆ ರಾಜಕೀಯ ಕ್ಷೇತ್ರಕ್ಕೆ ಬರಬೇಕು ಎಂದು ಕರೆ ನೀಡಿದರು. ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ಮಾಜಿ ಸಚಿವರು, ಶಾಸಕ ಎಸ್. ಸುರೇಶ ಕುಮಾರ್, ರಾಮಮೂರ್ತಿ, ವಿಧಾನ ಪರಿಷತ್ ಸದಸ್ಯ ಗೋಪಿನಾಥ್ ರೆಡ್ಡಿ, ಹಾಲಿ ಹಾಗೂ ಮಾಜಿ ಶಾಸಕರು, ಪಕ್ಷದ ಮುಖಂಡರು ಕಾರ್ಯಕರ್ತರು ಪ್ರಶಿಕ್ಷಣ ಮಹಾಭಿಯಾನದಲ್ಲಿ ಪಾಲಗೊಂಡಿದ್ದರು.

# ಇಂಧನ ಮಿತಬಳಕೆ: ಸಾರ್ವಜನಿಕ ಸಾರಿಗೆ ಬಳಸಲು ಬಿ.ವೈ. ವಿಜಯೇಂದ್ರ ನಿರ್ಧಾರ

**ಬೆಂಗಳೂರು, ಮೇ 16:** ದೇಶದ ಜನತೆ ಇಂಧನ ಮಿತ ಬಳಕೆ ಮಾಡಬೇಕು ಎಂದ ಪ್ರಧಾನಿ ನರೇಂದ್ರಮೋದಿ ಅವರ ಕರೆಗೆ ಸ್ಪಂದಿಸಿರುವ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ ಅವರು ಅಧಿಕೃತ ಕಾರು ಮತ್ತು ಬೆಂಗಾವಲು ವಾಹನಗಳನ್ನು ಕಡಿಮೆ ಮಾಡಿ, ಮೆಟ್ರೋ ರೈಲು ಬಳಸುವ ನಿರ್ಧಾರ ಮಾಡಿದ್ದಾರೆ.

ಪಕ್ಷದ ಕಾರ್ಯಕ್ರಮದಲ್ಲಿ ಭಾಗಿಯಾಗುವ ಸಂಬಂಧ ಮೆಜೆಸ್ಟಿಕ್‌ನಿಂದ ಕೆಂಗೇರಿವರೆಗೂ ಮೆಟ್ರೋದಲ್ಲಿ ಪ್ರಯಾಣ ಮಾಡಿ, ಸಾಮಾನ್ಯ ಜನರ ನಡುವೆ ನಿಂತು, ಕುಳಿತು ಪ್ರಯಾಣಿಸಿದರು. ಇದೇ ರೀತಿಯಾಗಿ ಕುಂಬಳಗೂಡಿನ ಕಾರ್ಯಕ್ರಮಕ್ಕೂ ಮೆಟ್ರೋ ಮೂಲಕವೇ ತೆರಳಿದರು. ಇನ್ನು ಮುಂದೆ ಪಕ್ಷದ ಸಭೆ, ಕಾರ್ಯಕ್ರಮಗಳಿಗೆ ಹೋಗುವಾಗ ಸಾರ್ವಜನಿಕ ವಾಹನಗಳಲ್ಲಿ ಪ್ರಯಾಣ ಮಾಡುವ ಬಗ್ಗೆಯೂ ಚಿಂತನೆ ನಡೆಸಿದ್ದಾರೆ. ಸಾರ್ವಜನಿಕ ಸಾರಿಗೆಯನ್ನು ಬಳಸುವ ಮೂಲಕ ಇಂಧನ ಉಳಿಸುವುದಷ್ಟೇ ಅಲ್ಲ, ಟ್ರಾಫಿಕ್ ದಟ್ಟಣೆ ಕಡಿಮೆ ಮಾಡುವಲ್ಲಿ ಸಹ ಸಹಾಯವಾಗುತ್ತದೆ ಎಂಬ ಸಂದೇಶವನ್ನು ಅವರು ತಮ ನಡೆ ಮೂಲಕ ನೀಡಲು ಯತ್ನಿಸುತ್ತಿದ್ದಾರೆ.

> ಪ್ರಧಾನಿ ಮೋದಿಯನ್ನು ಪ್ರಶ್ನಿಸುವವರು 2 ವರ್ಷದ ಹಿಂದೆಯೇ ರಾಜೀನಾಮೆ ಕೊಡಬೇಕಿತ್ತು. ಪೆಟ್ರೋಲ್, ಡೀಸಲ್ ಬೆಲೆ ಏರಿಕೆ ಕುರಿತು ವಿರೋಧ ಪಕ್ಷಗಳ ಟೀಕೆಗಳ ಬಗ್ಗೆ ಪ್ರತಿಕ್ರಿಯಿಸಿದ ಅವರು, ಕೆಲವರು ಇಂಧನ ಬೆಲೆ ಏರಿಕೆ ಕಾರಣಕ್ಕೆ ಪ್ರಧಾನಿಯೇ ರಾಜೀನಾಮೆ ಕೊಡಬೇಕು ಎಂದು ಆಗ್ರಹಿಸುತ್ತಿರುವ ವಿಚಾರವನ್ನು ತೀವ್ರವಾಗಿ ವಿರೋಧಿಸಿದರು. ಪೆಟ್ರೋಲ್, ಡೀಸಲ್ ಬೆಲೆ ಏರಿಕೆಗಾಗಿ ಪ್ರಧಾನಿ ರಾಜೀನಾಮೆ ಕೇಳುವ ಹಾಗಿದ್ದರೆ, ಕರ್ನಾಟಕದಲ್ಲಿ ಸಿದ್ದರಾಮಯ್ಯ ಮತ್ತು ಡಿ.ಕೆ. ಶಿವಕುಮಾರ್ ಅವರು ಎರಡು ವರ್ಷದ ಹಿಂದೆಯೇ ರಾಜೀನಾಮೆ ಕೊಡಬೇಕಿತ್ತು ಎಂದು ತಿರುಗೇಟು ನೀಡಿದರು.

ಈ ಸಂದರ್ಭದಲ್ಲಿ ಸುದ್ದಿಗಾರರ ಜೊತೆ ಮಾತನಾಡಿದ ಅವರು, ಹೆಮ್ಮೆಯ ಪ್ರಧಾನಿ ಪೆಟ್ರೋಲ್, ಡೀಸಲ್ ಮಿತವ್ಯಯಕ್ಕೆ ಸಲಹೆ ಕೊಟ್ಟಿದ್ದಾರೆ. ಅವರು ಬೆಂಗಾವಲು ವಾಹನಗಳ ಸಂಖ್ಯೆಯನ್ನು ಕಡಿಮೆ ಮಾಡಿಕೊಂಡಿದ್ದಾರೆ. ಹಾಗಾಗಿ ನಾನು ಕೂಡ ಅವರ ಮಾತಿಗೆ ಸ್ಪಂದಿಸಿ ಮೆಟ್ರೋದಲ್ಲಿ ಪ್ರಯಾಣ ಮಾಡುತ್ತಿದ್ದೇನೆ ಎಂದರು.

# ಒಂದು ರಾಷ್ಟ್ರ, ಒಂದು ಚುನಾವಣೆಯಿಂದ ಒಕ್ಕೂಟ ವ್ಯವಸ್ಥೆಗೆ ಧಕ್ಕೆ: ಡಿಸಿಎಂ ಡಿಕೆಶಿ

**ಬೆಂಗಳೂರು, ಮೇ 16:** ಕೇಂದ್ರ ಸರಕಾರದ ಉದ್ದೇಶಿತ 'ಒಂದು ರಾಷ್ಟ್ರ ಒಂದು ಚುನಾವಣೆ' ಪ್ರಸ್ತಾವನೆಯನ್ನು ಪ್ರಬಲವಾಗಿ ವಿರೋಧಿಸುತ್ತೇವೆ ಎಂದು ಕೆಪಿಸಿಸಿ ಅಧ್ಯಕ್ಷರೂ ಆದ ಡಿಸಿಎಂ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ.

ಬೆಂಗಳೂರಿನ ಖಾಸಗಿ ಹೋಟೆಲ್‌ನಲ್ಲಿ ಜಂಟಿ ಸಂಸದೀಯ ಅಧ್ಯಯನ ಸಮಿತಿಯು ಆಯೋಜಿಸಿದ್ದ ಒಂದು ರಾಷ್ಟ್ರ ಒಂದು ಚುನಾವಣೆ ಕುರಿತ ಸಂವಾದದಲ್ಲಿ ಮಾತನಾಡಿದ ಡಿ.ಕೆ.ಶಿವಕುಮಾರ್, ಇದೊಂದು ಅಧಿಕಾರ ಕೇಂದ್ರೀತ, ರಾಜಕೀಯ ಪ್ರೇರಿತ ಯೋಜನೆಯಾಗಿದ್ದು, ರಾಜ್ಯಗಳನ್ನು ದುರ್ಬಳಗೊಳಿಸುವುದರ ಮೂಲಕ ಒಕ್ಕೂಟ ವ್ಯವಸ್ಥೆಗೆ ತೀವ್ರ ಧಕ್ಕೆ ತರಲಿದೆ ಎಂದರು. ಅಷ್ಟೇ ಅಲ್ಲ ಇದು ಪ್ರಜಾಪ್ರಭುತ್ವ ವ್ಯವಸ್ಥೆಗೆ ಧಕ್ಕೆ ತರುವ ಅಪಾಯವಿದೆ. ಕೇಂದ್ರದಲ್ಲಿ ಆಡಳಿತ ಚುಕ್ಕಾಣಿ ಹಿಡಿದಿರುವವರ ಅನುಕೂಲಕ್ಕೆ ತಕ್ಕಂತೆ ಹೆಣೆಯಲಾಗುತ್ತಿರುವ ಈ ಪ್ರಸ್ತಾವನೆಯನ್ನು ಕೆಪಿಸಿಸಿ ಅಧ್ಯಕ್ಷನಾಗಿ ಹಾಗೂ ಕರ್ನಾಟಕ ಸರಕಾರದ ಉಪಮುಖ್ಯಮಂತ್ರಿ ಆಗಿ ತಿರಸ್ಕರಿಸುತ್ತೇನೆ ಎಂದು ಸ್ಪಷ್ಟಪಡಿಸಿದರು. ಒಂದು ದೇಶ ಒಂದು ಚುನಾವಣೆ ವಿರೋಧಿಸಿ ಕರ್ನಾಟಕ ವಿಧಾನಸಭೆಯು ಈಗಾಗಲೇ ನಿರ್ಣಯವನ್ನೂ ಅಂಗೀಕರಿಸಿದೆ ಎಂದು ನಿರ್ಣಯವನ್ನು ಸಭೆಯಲ್ಲಿ ಡಿಕೆಶಿ ಓದಿದರು. ತಮಿಳುನಾಡು, ಕೇರಳದಲ್ಲಿ ಮೊನ್ನೆಯಷ್ಟೇ ಆಗಿದೆ. ಪಂಜಾಬ್, ತೆಲಂಗಾಣದಲ್ಲಿ ಬೇರೆ ಕಾಲದಲ್ಲಿ ಆಗಿದೆ. ವಿವಿಧ ಕಾಲಾವಧಿಯ ಈ ಚುನಾವಣೆಗಳನ್ನು ಸಮಯಕರಿಸುವುದು ಹೇಗೆ ಎಂದು ಪ್ರಶ್ನಿಸಿದರು. ಇದು ಕಾರ್ಯಸಾಧು ಯೋಜನೆಯಲ್ಲ, ಪ್ರಾಕ್ಟಿಕಲಿ ಇಂಪಾಸಿಬಲ್. ಇದು ಪ್ರಾದೇಶಿಕ ಪಕ್ಷಗಳು ಹಾಗೂ ಎದುರಾಳಿ ಪಕ್ಷಗಳ ಧ್ವನಿ ಅಡಗಿಸುವ ಹುನ್ನಾರವಾಗಿದೆ ಎಂದರು.

Managing Editor : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com
Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

23 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

ಮೇ 17, 2026, ಭಾನುವಾರ

## ಒಳಪುಟಗಳಲ್ಲಿ

ರೂಪಾಯಿ ಕುಸಿತಕ್ಕೆ ಆರ್‌ಬಿಐ ತಡೆ: 96ರ ಗಡಿ ದಾಟಿದ್ದ ವಿನಿಮಯ ದರ 95ಕ್ಕೆ ಇಳಿಕೆ- ಪು.4

ಹಿರಿಯರಿಗೆ ಪಿಂಚಣಿ ನೀಡಲು ಯೋಗ್ಯತೆ ಇಲ್ಲದ ಸರ್ಕಾರ ದಿಂದ ಯಾವ ಪುರುಷಾರ್ಥಕ್ಕೆ ಸಾಧನಾ ಸಮಾವೇಶ: ಅಶೋಕ್ ಪ್ರಶ್ನೆ- ಪು.5

# ನಾಲ್ವರು ವಿದ್ಯಾರ್ಥಿಗಳು ಬಲಿ ತೆಗೆದುಕೊಂಡ ನೀಟ್ ರದ್ದತಿ

**ನವದೆಹಲಿ, ಮೇ 16: ಮೇ 3ರಂದು ನಡೆದಿದ್ದ ನೀಟ್ ಪರೀಕ್ಷೆ ರದ್ದುಗೊಂಡ ಹಿನ್ನೆಲೆ ಆಘಾತಕ್ಕೊಳಗಾಗಿ ನಾಲ್ವರು ನೀಟ್ ಆಕಾಂಕ್ಷಿಗಳು ಆತ್ಮಹತ್ಯೆಗೆ ಶರಣಾಗಿದ್ದಾರೆ. ರಾಜಸ್ಥಾನದ ಸೀಕರ್ ಮೂಲದ ಪ್ರದೀಪ್ ಮೇಘವಾಲ್, ಉತ್ತರ ಪ್ರದೇಶ ರಿತಿಕ್ ಮಿಶ್ರಾ, ದೆಹಲಿಯ ಆಜಾದ್‌ಪುರದ ಅನಿಷ್ಕಾ ಪಾಂಡೆ ಹಾಗೂ ದಕ್ಷಿಣ ಗೋವಾದ 17 ವರ್ಷದ ಬಾಲಕ ಆತ್ಮಹತ್ಯೆಗೆ ಶರಣಾಗಿದ್ದಾರೆ.**

ಮೃತ ಪ್ರದೀಪ್ ಕಳೆದ ಮೂರು ವರ್ಷಗಳಿಂದ ತನ್ನ ಇಬ್ಬರು ಸಹೋದರಿಯರೊಂದಿಗೆ ಸಿಕರ್‌ನಲ್ಲಿ ವಾಸಿಸುತ್ತಿದ್ದು, ಖಾಸಗಿ ಕೋಚಿಂಗ್ ಸಂಸ್ಥೆಯೊಂದರಲ್ಲಿ ವೈದ್ಯಕೀಯ ಪ್ರವೇಶ ಪರೀಕ್ಷೆಗೆ ತಯಾರಿ ನಡೆಸುತ್ತಿದ್ದ. ಈ ಬಾರಿ ಪರೀಕ್ಷೆಯನ್ನು ಉತ್ತಮವಾಗಿ ಬರೆದಿದ್ದು, ಸರ್ಕಾರಿ ವೈದ್ಯಕೀಯ ಸೀಟು ಸಿಗುವುದು ಖಚಿತ ಎಂಬ ಭರವಸೆಯಲ್ಲಿ ಇದ್ದಿದ್ದಾಗಿ ಕುಟುಂಬಸ್ಥರು ತಿಳಿಸಿದ್ದಾರೆ. ಆದರೆ ಪ್ರಶ್ನೆಪತ್ರಿಕೆ ಸೋರಿಕೆಯಿಂದಾಗಿ ಪರೀಕ್ಷೆ ರದ್ದಾಗಿದ್ದು, ಆಘಾತದಿಂದ ನೊಂದು ಆತ್ಮಹತ್ಯೆಗೆ ಶರಣಾಗಿದ್ದಾನೆ.

ಶುಕ್ರವಾರ (ಮೇ 15) ಮಧ್ಯಾಹ್ನ ಪ್ರದೀಪ್ ತನ್ನ ಸಹೋದರಿಯ ಸ್ಕಾರ್ಫ್ ಬಳಸಿ ಸೀಲಿಂಗ್ ಫ್ಯಾನ್‌ಗೆ ನೇಣು ಬಿಗಿದುಕೊಂಡಿದ್ದಾನೆ. ಘಟನೆ ನಡೆದ ಸಮಯದಲ್ಲಿ ಆತನ ಕಿರಿಯ ತಂಗಿ ಕೋಚಿಂಗ್ ಕ್ಲಾಸ್‌ಗೆ ಹೋಗಿದ್ದರು. ಹಿರಿಯ ತಂಗಿ ಸ್ನಾನ ಮುಗಿಸಿ ಹೊರಬಂದಾಗ ಪ್ರದೀಪ್ ಆತ್ಮಹತ್ಯೆ ಮಾಡಿಕೊಂಡಿರುವುದು ಬೆಳಕಿಗೆ ಬಂದಿದೆ.

ಉತ್ತರ ಪ್ರದೇಶದ ಲಖಿಂಪುರ್ ಖೇರಿಯ 21 ವರ್ಷದ ರಿತಿಕ್ ಮಿಶ್ರಾ ಎಂಬ ವಿದ್ಯಾರ್ಥಿ ಗುರುವಾರ (ಮೇ 14) ಆತ್ಮಹತ್ಯೆ ಮಾಡಿಕೊಂಡಿದ್ದಾನೆ. ಮೂರನೇ ಬಾರಿಗೆ ಪರೀಕ್ಷೆ ಬರೆದಿದ್ದ ವಿದ್ಯಾರ್ಥಿ ಈ ಬಾರಿ ಉತ್ತಮ ಅಂಕದ ನಿರೀಕ್ಷೆಯಲ್ಲಿದ್ದ. ಪ್ರಶ್ನೆಪತ್ರಿಕೆ ಸೋರಿಕೆಯಿಂದಾಗಿ ಪರೀಕ್ಷೆ ರದ್ದಾದ ಪರಿಣಾಮ ನೊಂದು ಆತ್ಮಹತ್ಯೆ ಮಾಡಿಕೊಂಡಿದ್ದಾನೆ ಎಂದು ಕುಟುಂಬಸ್ಥರು ತಿಳಿಸಿದ್ದಾರೆ.

ಆಜಾದ್‌ಪುರದಲ್ಲಿ 20 ವರ್ಷದ ಯುವತಿ ಮನೆಯಲ್ಲಿ ಆತ್ಮಹತ್ಯೆ ಮಾಡಿಕೊಂಡಿದ್ದಾಳೆ. ಯುವತಿಯ ಕುಟುಂಬಸ್ಥರು ಪೊಲೀಸರಿಗೆ ಮಾಹಿತಿ ನೀಡದೇ ಶವಸಂಸ್ಕಾರ ನೆರವೇರಿಸಿದ್ದಾರೆ. ಈ ಸಂಬಂಧ ತನಿಖೆ ನಡೆಯುತ್ತಿದೆ. ದಕ್ಷಿಣ ಗೋವಾದ ಮಾಡಗಾವ್‌ನಲ್ಲಿ 17 ವರ್ಷದ ಬಾಲಕ ಬುಧವಾರ ಆತ್ಮಹತ್ಯೆ ಮಾಡಿಕೊಂಡಿದ್ದಾನೆ. ಡೆತ್‌ನೋಟ್‌ನಲ್ಲಿ ಶೈಕ್ಷಣಿಕ ಒತ್ತಡವೇ ಕಾರಣ ಎಂದು ಬರೆದಿಟ್ಟಿದ್ದಾನೆ.

ಪ್ರಶ್ನೆಪತ್ರಿಕೆ ಸೋರಿಕೆ ಮತ್ತು ಅಕ್ರಮಗಳ ಆರೋಪದ ಹಿನ್ನೆಲೆ ರಾಷ್ಟ್ರೀಯ ಪರೀಕ್ಷಾ ಸಂಸ್ಥೆ ಮೇ 13ರಂದು ನೀಟ್ 2026ರ ಪರೀಕ್ಷೆಯನ್ನು ರದ್ದುಗೊಳಿಸಿತ್ತು. ಈ ಕುರಿತು ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರು ಮಾಹಿತಿ ನೀಡಿ, ಜೂ.21ರಂದು ಮರುಪರೀಕ್ಷೆ ನಡೆಸಲಾಗುವುದು ಎಂದು ತಿಳಿಸಿದ್ದಾರೆ. ಅಲ್ಲದೆ, ಮುಂದಿನ ವರ್ಷದಿಂದ ವೈದ್ಯಕೀಯ ಪ್ರವೇಶ ಪರೀಕ್ಷೆಯನ್ನು ಕಂಪ್ಯೂಟರ್ ಆಧಾರಿತ ಮಾದರಿಯಲ್ಲಿ ನಡೆಸಲಾಗುವುದು ಎಂದು ತಿಳಿಸಿದ್ದಾರೆ.

### ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣದ ನಿಷ್ಪಕ್ಷಪಾತ ತನಿಖೆ: ಸಿಬಿಐ

**ನೀಟ್–ಯುಜಿ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣದಲ್ಲಿ ಇದುವರೆ ಜೈಪುರ, ಗುರುಗ್ರಾಮ್, ನಾಸಿಕ್, ಪುಣೆ ಮತ್ತು ಅಹಲ್ಯಾನಗರದಿಂದ ಏಳು ಆರೋಪಿಗಳನ್ನು ಬಂಧಿಸಲಾಗಿದೆ. ಆರೋಪಿಗಳಾದ ಯಶ್ ಯಾದವ್, ಮಂಗಿಲಾಲ್ ಬಿವಾಲ್, ವಿಕಾಸ್ ಬಿವಾಲ್, ದಿನೇಶ್ ಬಿವಾಲ್ ಮತ್ತು ಶುಭಂ ಖೈರ್ನರ್ ಅವರನ್ನು ದೆಹಲಿಯ ರೌಸ್ ಅವೆನ್ಯೂ ನ್ಯಾಯಾಲಯಕ್ಕೆ ಹಾಜರುಪಡಿಸಲಾಯಿತು. ಪುಣೆಯಲ್ಲಿ ಬಂಧಿಸಲಾದ ಇಬ್ಬರು ಉಪನ್ಯಾಸಕ ಆರೋಪಿಗಳನ್ನು ಪುಣೆ ನ್ಯಾಯಾಲಯದ ಮುಂದೆ ಟ್ರಾನ್ಸಿಟ್ ರಿಮಾಂಡ್‌ಗಾಗಿ ಹಾಜರುಪಡಿಸಲಾಗುತ್ತಿದ್ದು, ನಂತರ ಅವರನ್ನು ದೆಹಲಿಗೆ ಸ್ಥಳಾಂತರಿಸಲಾಗುವುದು. ನೀಟ್–ಯುಜಿ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣದ ತನಿಖೆಯನ್ನು ತೀವ್ರಗೊಳಿಸಿರುವ ಸಿಬಿಐ, ಬಂಧಿತ ಐದು ಆರೋಪಿಗಳನ್ನು ವಿಚಾರಣೆಗಾಗಿ 14 ದಿನಗಳ ಕಾಲ ಕಸ್ಟಡಿಗೆ ನೀಡುವಂತೆ ದೆಹಲಿಯ ವಿಶೇಷ ನ್ಯಾಯಾಲಯವನ್ನು ಕೋರಿದೆ. ಪ್ರಶ್ನೆಪತ್ರಿಕೆ ಸೋರಿಕೆ ಒಂದು ರಾಜ್ಯಕ್ಕೆ ಸೀಮಿತವಾಗಿಲ್ಲ, ಆದರೆ ದೇಶದ ವಿವಿಧ ಭಾಗಗಳಲ್ಲಿ ಹರಡಿರುವ ದೊಡ್ಡ ಜಾಲದ ಭಾಗವಾಗಿರಬಹುದು ಎಂದು ತನಿಖಾ ಸಂಸ್ಥೆ ಅನುಮಾನ ವ್ಯಕ್ತಪಡಿಸಿದೆ. ತನಿಖೆಯನ್ನು ದೆಹಲಿಯನ್ನು ಮೀರಿ ವಿಸ್ತರಿಸಬೇಕಾಗಬಹುದು ಎಂದು ಸಿಬಿಐ ನ್ಯಾಯಾಲಯಕ್ಕೆ ತಿಳಿಸಿದೆ. ಈ ಪ್ರಕರಣದ ತನಿಖೆ ರಾಜಸ್ಥಾನ, ಮಹಾರಾಷ್ಟ್ರ, ಹರಿಯಾಣ ಮತ್ತು ದೆಹಲಿ ಸೇರಿ ಹಲವಾರು ರಾಜ್ಯಗಳಿಗೆ ವಿಸ್ತರಿಸಿದೆ. ಪ್ರಕರಣದ ಬಗ್ಗೆ ಸಮಗ್ರ, ನಿಷ್ಪಕ್ಷಪಾತ ತನಿಖೆ ನಡೆಸಲು ಸಿಬಿಐ ಬದ್ಧವಾಗಿದೆ ಎಂದು ಹೇಳಿದೆ.**

### ನೀಟ್–ಯುಜಿ 2026 ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣ

## ಸಿಬಿಐನಿಂದ ಕಿಂಗ್‌ಪಿನ್ ಪಿ.ವಿ.ಕುಲಕರ್ಣಿ ಬಂಧನ


ಕುಲಕರ್ಣಿ

**ನವದೆಹಲಿ, ಮೇ 15:** ನೀಟ್–ಯುಜಿ 2026 ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣಕ್ಕೆ ಸಂಬಂಧಿಸಿದಂತೆ ಇತ್ತೀಚಿನ ಮಾಹಿತಿಯ ಪ್ರಕಾರ, ಕೇಂದ್ರ ತನಿಖಾ ದಳ (ಸಿಬಿಐ) ನಡೆಸಿದ ತನಿಖೆಯಲ್ಲಿ ರಸಾಯನಶಾಸ್ತ್ರ ಉಪನ್ಯಾಸಕ ಪಿ ವಿ ಕುಲಕರ್ಣಿ ಅವರು ಇಡೀ ಪ್ರಕರಣದ ಹಿಂದಿರುವ ಕಿಂಗ್‌ಪಿನ್ ಎಂದು ತಿಳಿದುಬಂದಿದೆ. ಕುಲಕರ್ಣಿಯನ್ನು ಪುಣೆಯಲ್ಲಿ ಬಂಧಿಸಲಾಗಿದ್ದು, ಸಿಬಿಐ ಪ್ರಕಾರ, ಕುಲಕರ್ಣಿ ರಾಷ್ಟ್ರೀಯ ಪರೀಕ್ಷಾ ಸಂಸ್ಥೆ (ಎನ್‌ಟಿಎ) ಪರವಾಗಿ ಪರೀಕ್ಷಾ ಪ್ರಕ್ರಿಯೆಯಲ್ಲಿ ಭಾಗಿಯಾಗಿದ್ದರು ಮತ್ತು ಪ್ರಶ್ನೆಪತ್ರಿಕೆಗಳಿಗೆ ಪ್ರವೇಶವನ್ನು ಹೊಂದಿದ್ದರು. ಕುಲಕರ್ಣಿ ಪುಣೆಯಲ್ಲಿರುವ ತಮ್ಮ ನಿವಾಸದಲ್ಲಿ ಆಯ್ದ ವಿದ್ಯಾರ್ಥಿಗಳಿಗೆ ವಿಶೇಷ ತರಬೇತಿ ತರಗತಿಗಳನ್ನು ನಡೆಸುತ್ತಿದ್ದರು, ಅಲ್ಲಿ ಅವರು ಪ್ರಶ್ನೆಗಳನ್ನು ಮತ್ತು ಆಯ್ಕೆಗಳನ್ನು ಮತ್ತು ಸರಿಯಾದ ಉತ್ತರಗಳನ್ನು ನಿರ್ದೇಶಿಸುತ್ತಿದ್ದರು ಎಂದು ಸಂಸ್ಥೆ ಆರೋಪಿಸಿದೆ. ವಿದ್ಯಾರ್ಥಿಗಳ ನೋಟ್‌ಬುಕ್‌ಗಳಲ್ಲಿರುವ ಕೈಬರಹದ ಪ್ರಶ್ನೆಗಳು ಮೇ 3ರಂದು ನಡೆದ ನೀಟ್–ಯುಜಿ 2026 ಪರೀಕ್ಷೆಯ ನೈಜ ಪ್ರಶ್ನೆಪತ್ರಿಕೆಗೆ ನಿಖರವಾಗಿ ಹೊಂದಿಕೆಯಾಗುತ್ತಿರುವುದು ಕಂಡುಬಂದಿದೆ.

**ಜೀವಶಾಸ್ತ್ರ ಪತ್ರಿಕೆ ಸೋರಿಕೆ: ಮತ್ತೊಬ್ಬರ ಬಂಧನ:** ನೀಟ್–ಯುಜಿ 2026 ಪರೀಕ್ಷೆಯ ಜೀವಶಾಸ್ತ್ರ ಪ್ರಶ್ನೆಗಳನ್ನು ಸೋರಿಕೆ ಮಾಡುವಲ್ಲಿ ಭಾಗಿಯಾಗಿದ್ದಾನೆಂದು ಆರೋಪಿಸಲಾಗಿದೆ ಮತ್ತೊಬ್ಬ ಪ್ರಮುಖ ಆರೋಪಿಯನ್ನು ಬಂಧಿಸಲಾಗಿದೆ ಎಂದು ಸಿಬಿಐ ಶನಿವಾರ ತಿಳಿಸಿದೆ. ಮಹಾರಾಷ್ಟ್ರದ ಪುಣೆಯ ಹಿರಿಯ ಸಸ್ಯಶಾಸ್ತ್ರ ಶಿಕ್ಷಕಿ ಮನೀಷಾ ಗುರುನಾಥ್ ಮಾಂಧರೆ ಬಂಧಿತೆ. ಈಕೆ ಪರೀಕ್ಷಾ ಪ್ರಕ್ರಿಯೆಯಲ್ಲಿ ಭಾಗಿಯಾಗಿದ್ದರು ಮತ್ತು ಎನ್‌ಟಿಎ ಅವರನ್ನು ಪರಿಣಿತರಾಗಿ ನೇಮಿಸಿತ್ತು" ಎಂದು ಸಿಬಿಐ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಸಸ್ಯಶಾಸ್ತ್ರ ಮತ್ತು ಪ್ರಾಣಿಶಾಸ್ತ್ರ ಪ್ರಶ್ನೆಪತ್ರಿಕೆಗಳಿಗೆ ಅವರಿಗೆ ಸಂಪೂರ್ಣ ಪ್ರವೇಶವಿದೆ ಎಂದು ಅಧಿಕಾರಿ ಹೇಳಿದರು. ಏಪ್ರಿಲ್ 2026 ರಲ್ಲಿ, ಮೇ 14, 2026 ರಂದು ಬಂಧಿಸಲ್ಪಟ್ಟ ಪುಣೆಯ ಮನಿಷಾ ವಾಘ್ಮಾರೆ ಮೂಲಕ ಅವರು ಸಂಭಾವ್ಯ ನೀಟ್ ಅಭ್ಯರ್ಥಿಗಳನ್ನು ಸಜ್ಜುಗೊಳಿಸಿದರು ಮತ್ತು ಪುಣೆಯಲ್ಲಿರುವ ಅವರ ನಿವಾಸದಲ್ಲಿ ವಿದ್ಯಾರ್ಥಿಗಳಿಗೆ ವಿಶೇಷ ತರಬೇತಿ ತರಗತಿಗಳನ್ನು ನಡೆಸಿದರು ಎಂದು ಆರೋಪಿಸಲಾಗಿದೆ. ಈ ತರಗತಿಗಳ ಸಮಯದಲ್ಲಿ, ಅವರು ಸಸ್ಯಶಾಸ್ತ್ರ ಮತ್ತು ಪ್ರಾಣಿಶಾಸ್ತ್ರದ ಹಲವಾರು ಪ್ರಶ್ನೆಗಳನ್ನು ವಿವರಿಸಿದರು ಮತ್ತು ಬಹಿರಂಗಪಡಿಸಿದರು, ವಿದ್ಯಾರ್ಥಿಗಳನ್ನು ನೋಟ್‌ಬುಕ್‌ಗಳಲ್ಲಿ ಬರೆದಿಟ್ಟುಕೊಳ್ಳಲು ಮತ್ತು ಅವರ ಪಠ್ಯಪುಸ್ತಕಗಳಲ್ಲಿ ಗುರುತಿಸಲು ಹೇಳಿದ್ದ ಹೆಚ್ಚಿನ ಪ್ರಶ್ನೆಗಳಲ್ಲಿ ಹೆಚ್ಚಿನವು ಮೇ 3ರ ಪರೀಕ್ಷೆಯಲ್ಲಿನ ಪ್ರಶ್ನೆಗಳಿಗೆ ಹೊಂದಿಕೆಯಾಗಿದ್ದವು ಎನ್ನಲಾಗಿದೆ.

## ಪರೀಕ್ಷಾ ಹಗರಣಗಳಿಂದ ವಿದ್ಯಾರ್ಥಿಗಳ ವ್ಯವಸ್ಥಿತ ಕೊಲೆ



### ರಾಹುಲ್ ಗಾಂಧಿ ಆರೋಪ


**ನವದೆಹಲಿ, ಮೇ 15:** ಪದೇ ಪದೇ ಪರೀಕ್ಷಾ ಪ್ರಶ್ನೆಪತ್ರಿಕೆ ಸೋರಿಕೆ ಮತ್ತು ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಅಕ್ರಮಗಳ ಆರೋಪದ ಮೇಲೆ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಶುಕ್ರವಾರ ನರೇಂದ್ರ ಮೋದಿ ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ್ದಾರೆ, ಈ ವ್ಯವಸ್ಥೆಯು ದೇಶಾದ್ಯಂತ ವಿದ್ಯಾರ್ಥಿಗಳ ಜೀವನ ಮತ್ತು ಭವಿಷ್ಯವನ್ನು ನಾಶಪಡಿಸುತ್ತಿದೆ ಎಂದು ಆರೋಪಿಸಿದ್ದಾರೆ. ಮೂರನೇ ಬಾರಿಗೆ ವೈದ್ಯಕೀಯ ಪ್ರವೇಶ ಪರೀಕ್ಷೆಗೆ ತಯಾರಿ ನಡೆಸುತ್ತಿದ್ದ ಲಖಿಂಪುರ ಖೇರಿಯ 21 ವರ್ಷದ ನೀಟ್ ಆಕಾಂಕ್ಷಿ ರಿತಿಕ್ ಮಿಶ್ರಾ ಅವರ ಸಾವನ್ನು ಗಾಂಧಿ ಉಲ್ಲೇಖಿಸಿದ್ದಾರೆ.

ನಾವು ಇನ್ನು ಮುಂದೆ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಕುಳಿತುಕೊಳ್ಳುವುದಿಲ್ಲ. ಇವು ಲಖಿಂಪುರ ಖೀರಿಯ 21 ವರ್ಷದ ರಿತಿಕ್ ಮಿಶ್ರಾ ಅವರ ಅಂತಿಮ ಮಾತುಗಳು. ಪರೀಕ್ಷೆ ರದ್ದಾದ ನಂತರ ವಿದ್ಯಾರ್ಥಿ ಆಘಾತಗೊಳಗಾಗಿದ್ದಾನೆ ಎಂದು ಹೇಳಿದರು.

ಗೋವಾದ ನೀಟ್ ಆಕಾಂಕ್ಷಿಯೊಬ್ಬರ ಆತ್ಮಹತ್ಯೆಯನ್ನು ಉಲ್ಲೇಖಿಸಿದ ರಾಹುಲ್‌ಗಾಂಧಿ, ವಿದ್ಯಾರ್ಥಿಗಳನ್ನು "ಭ್ರಷ್ಟ ವ್ಯವಸ್ಥೆಯಿಂದ ನಾಶಪಡಿಸಲಾಗುತ್ತಿದೆ". "ಇದು ಆತ್ಮಹತ್ಯೆಯಲ್ಲ – ಇದು ವ್ಯವಸ್ಥೆಯಿಂದ ಕೊಲೆ" ಎಂದು ಗಾಂಧಿ ಹೇಳಿದರು.

ನೀಟ್, ಎಐಪಿಎಂಟಿ ಮತ್ತು ಇತರ ವೈದ್ಯಕೀಯ ಪ್ರವೇಶ ಪರೀಕ್ಷೆಗಳಿಗೆ ಸಂಬಂಧಿಸಿದ 15 ಹಗರಣಗಳು ನಡೆದಿವೆ ಎಂದು ಗಾಂಧಿ ಆರೋಪಿಸಿದರು. ಅಕ್ರಮಗಳಿಗೆ ಕಾರಣರಾದವರನ್ನು ಸರ್ಕಾರ ರಕ್ಷಿಸುತ್ತಿದೆ ಎಂದು ಅವರು ಆರೋಪಿಸಿದರು ಮತ್ತು ಘಟನೆಗಳ ಬಗ್ಗೆ ಯಾವುದೇ ಅಧಿಕಾರಿ ಅಥವಾ ಸಚಿವರು ರಾಜೀನಾಮೆ ನೀಡಿಲ್ಲ ಎಂದು ಹೇಳಿದರು. ವಿಶೇಷವಾಗಿ ನೀಟ್ ಪರೀಕ್ಷೆಯ ಸುತ್ತಲಿನ ವಿವಾದಗಳು ರಾಷ್ಟ್ರವ್ಯಾಪಿ ಪ್ರತಿಭಟನೆಗಳು ಮತ್ತು ವಿದ್ಯಾರ್ಥಿಗಳು ಮತ್ತು ವಿರೋಧ ಪಕ್ಷಗಳಿಂದ ಹೊಣೆಗಾರಿಕೆಗಾಗಿ ಬೇಡಿಕೆಗಳನ್ನು ಹುಟ್ಟುಹಾಕಿದ ನಂತರ, ಕಾಂಗ್ರೆಸ್ ಪಕ್ಷವು ಪ್ರಶ್ನೆಪತ್ರಿಕೆ ಸೋರಿಕೆ ಮತ್ತು ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿನ ಅಕ್ರಮಗಳ ಬಗ್ಗೆ ಸರ್ಕಾರವನ್ನು ಪದೇ ಪದೇ ಗುರಿಯಾಗಿಸಿಕೊಂಡಿದೆ.

### ಅಮೃತಕಾಲ ಅಲ್ಲ ಮೃತ ಕಾಲ: ಖರ್ಗೆ



**ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಕೂಡ ಸರ್ಕಾರದ ಮೇಲೆ ತೀವ್ರ ವಾಗ್ದಾಳಿ ನಡೆಸಿದರು, ಹೆಚ್ಚು ಪ್ರಚಾರ ಪಡೆದ "ಅಮೃತ್ ಕಾಲ" ನೇಮಕಾತಿ ಮತ್ತು ಪ್ರವೇಶ ಪರೀಕ್ಷೆಗಳಲ್ಲಿ ಬರೆಯುವ ವಿದ್ಯಾರ್ಥಿಗಳಿಗೆ "ಮೃತ್ ಕಾಲ"ವಾಗಿ ಮಾರ್ಪಟ್ಟಿದೆ ಎಂದು ಹೇಳಿದರು. "ಮೋದಿ ಸರ್ಕಾರದ ಅಡಿಯಲ್ಲಿ, 'ಅಮೃತ್ ಕಾಲ' ಎಂದು ಕರೆಯಲ್ಪಡುವ ಪರೀಕ್ಷೆ ನೇಮಕಾತಿ ಮತ್ತು ಪ್ರವೇಶ ಪರೀಕ್ಷೆಗಳಲ್ಲಿ ಬರೆಯುವ ವಿದ್ಯಾರ್ಥಿಗಳಿಗೆ 'ಮೃತ್ ಕಾಲ'ವಾಗಿ ಬದಲಾಗುತ್ತಿದೆ" ಎಂದು ಖರ್ಗೆ ಹೇಳಿಕೆಯಲ್ಲಿ ಕಿಡಿ ಕಾರಿದ್ದಾರೆ.**

### ಧರ್ಮೇಂದ್ರ ಪ್ರಧಾನ್ ವಜಾಕ್ಕೆ ಆಗ್ರಹ

**ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ "22 ಲಕ್ಷ ನೀಟ್ ವಿದ್ಯಾರ್ಥಿಗಳಿಗೆ ದ್ರೋಹ ಬಗೆದಿದ್ದಾರೆ" ಎಂದು ಆರೋಪಿಸಿದ್ದಾರೆ ಮತ್ತು ಪ್ರಧಾನಿ ಈ ವಿಷಯದ ಬಗ್ಗೆ ಮೌನವಾಗಿರುವುದನ್ನು ಟೀಕಿಸಿದ್ದಾರೆ. ಆದರೆ ಪ್ರಧಾನಿ ನರೇಂದ್ರ ಮೋದಿ ಒಂದೇ ಒಂದು ಮಾತನ್ನೂ ಹೇಳುತ್ತಿಲ್ಲ" ಎಂದು ಗಾಂಧಿ ಹೇಳಿದರು. ಕೇಂದ್ರ ಶಿಕ್ಷಣ ಸಚಿವರನ್ನು ತಕ್ಷಣವೇ ವಜಾಗೊಳಿಸಬೇಕೆಂದು ಅವರು ಒತ್ತಾಯಿಸಿದರು, "ಧರ್ಮೇಂದ್ರ ಪ್ರಧಾನ್ ಅವರನ್ನು ತಕ್ಷಣ ತೆಗೆದುಹಾಕಬೇಕು, ಅಥವಾ ನೀವೇ ಜವಾಬ್ದಾರಿಯನ್ನು ತೆಗೆದುಕೊಳ್ಳಿ. ಮೋದಿ ಜಿ, ಧರ್ಮೇಂದ್ರ ಪ್ರಧಾನ್ ಅವರನ್ನು ಈಗಲೇ ವಜಾಗೊಳಿಸಿ" ಎಂದು ಹೇಳಿದರು.**

### 148 ಪರೀಕ್ಷಾ ಹಗರಣ, 87 ಪರೀಕ್ಷೆ ರದ್ದು, ಶಿಕ್ಷೆಯಾಗಿದ್ದು ಒಬ್ಬನಿಗೆ ಮಾತ್ರ: ರಾಹುಲ್

**ಪರೀಕ್ಷಾ ಅಕ್ರಮಗಳಿಗೆ ಸಂಬಂಧಿಸಿದ ಅಂಕಿಅಂಶಗಳನ್ನು ಉಲ್ಲೇಖಿಸಿದ ಗಾಂಧಿ, 2015 ರಿಂದ 2026 ರವರೆಗೆ ದೇಶಾದ್ಯಂತ 148 ಪರೀಕ್ಷಾ ಹಗರಣಗಳು ನಡೆದಿವೆ, ಇದು 87 ಪರೀಕ್ಷೆಗಳನ್ನು ರದ್ದುಗೊಳಿಸಿದೆ ಮತ್ತು ಸುಮಾರು 90 ದಶಲಕ್ಷ ವಿದ್ಯಾರ್ಥಿಗಳ ಮೇಲೆ ಪರಿಣಾಮ ಬೀರಿದೆ ಎಂದು ಹೇಳಿದ್ದಾರೆ. "148 ಹಗರಣಗಳಲ್ಲಿ ಒಬ್ಬ ವ್ಯಕ್ತಿಗೆ ಮಾತ್ರ ಶಿಕ್ಷೆಯಾಗಿದೆ". ಕೇಂದ್ರ ತನಿಖಾ ದಳವು 17 ಪ್ರಕರಣಗಳನ್ನು ತನಿಖೆ ಮಾಡಿದೆ ಮತ್ತು ಜಾರಿ ನಿರ್ದೇಶನಾಲಯವು 11 ಪ್ರಕರಣಗಳನ್ನು ಕೈಗೆತ್ತಿಕೊಂಡಿದೆ, ಆದರೆ "ಯಾರೂ ಶಿಕ್ಷೆಗೊಳಗಾಗಿಲ್ಲ" ಎಂದು ಅವರು ಹೇಳಿದರು.**



ನೆದರ್‌ಲ್ಯಾಂಡ್ಸ್‌ನ ಹೇಗ್ ನಗರದಲ್ಲಿ ಭಾರತೀಯ ಸಮುದಾಯದ ವತಿಯಿಂದ ಶನಿವಾರ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಅಭಿಮಾನಿಗಳತ್ತ ಕೈಬೀಸಿದ ಪ್ರಧಾನ ಮಂತ್ರಿ ನರೇಂದ್ರ ಮೋದಿ.

## ಭಾರತವನ್ನು ಕೆಣಕಿದರೆ ಭೂಪಟದಲ್ಲಿ ಪಾಕ್ ಇರಬೇಕೇ ಬೇಡವೇ ನಾವು ನಿರ್ಧರಿಸುತ್ತೇವೆ: ಜನರಲ್ ದ್ವಿವೇದಿ ಎಚ್ಚರಿಕೆ



**ನವದೆಹಲಿ, ಮೇ 16:** ಭಯೋತ್ಪಾದಕರಿಗೆ ಆಶ್ರಯ ನೀಡುವುದು, ಭಾರತದ ವಿರುದ್ಧ ಕಾರ್ಯಾಚರಣೆ ಮುಂದಾದರೆ ಭೂಪಟದಲ್ಲಿ ಪಾಕಿಸ್ತಾನ ಇರಬೇಕೆ ಅಥವಾ ಬೇಡವೇ ಅನ್ನೋದನ್ನು ನಾವು ನಿರ್ಧರಿಸುತ್ತೇವೆ ಎಂದು ಭಾರತೀಯ ಸೇನಾ ಮುಖ್ಯಸ್ಥ ಜನರಲ್ ಉಪೇಂದ್ರ ದ್ವಿವೇದಿ ಎಚ್ಚರಿಸಿದ್ದಾರೆ. ಆಪರೇಷನ್ ಸಿಂಧೂರ ಮೊದಲ ವಾರ್ಷಿಕೋತ್ಸವ ಹಿನ್ನೆಲೆಯಲ್ಲಿ ದೆಹಲಿಯ ಮಾಣೆಕ್‌ಶಾ ಕೇಂದ್ರದಲ್ಲಿ ಯೂನಿಫಾರ್ಮ್ ಅನ್ವೀಲ್‌ಡ್ ಆಯೋಜಿಸಿದ್ದ ಸಂವಾದದಲ್ಲಿ ಮಾತನಾಡಿದ ಅವರು, ಕಳೆದ ವರ್ಷ ಆಪರೇಷನ್ ಸಿಂಧೂರ್‌ಗೆ ಕಾರಣವಾದ ಸಂದರ್ಭಗಳು ಮತ್ತೆ ಬಂದರೆ ಭಾರತೀಯ ಸೇನೆಯು ಹೇಗೆ ಪ್ರತಿಕ್ರಿಯಿಸುತ್ತದೆ ಎಂಬುದು ಪಾಕಿಸ್ತಾನಕ್ಕೆ ತಿಳಿದಿದೆ. ಪಹಲ್ಗಾಮ್ನಲ್ಲಿ ನಡೆದ ಭೀಕರ ಭಯೋತ್ಪಾದಕ ದಾಳಿಗೆ ಪ್ರತೀಕಾರವಾಗಿ ಕಳೆದ ವರ್ಷ ಮೇ 7 ರಂದು ಆಪರೇಷನ್ ಸಿಂಧೂರ ಪ್ರಾರಂಭಿಸಲಾಯಿತು. ಭಾರತೀಯ ಪಡೆಗಳು ಪಾಕಿಸ್ತಾನ ಮತ್ತು ಪಾಕ್ ಆಕ್ರಮಿತ ಕಾಶ್ಮೀರದಲ್ಲಿ (ಪಿಒಕೆ) ಅನೇಕ ಭಯೋತ್ಪಾದಕ ಮೂಲಸೌಕರ್ಯಗಳ ಮೇಲೆ ನಿಖರವಾದ ದಾಳಿಗಳನ್ನು ನಡೆಸಿದ್ದವು.

ಪಾಕಿಸ್ತಾನವು ಭಾರತದ ವಿರುದ್ಧ ದಾಳಿಗಳನ್ನು ಪ್ರಾರಂಭಿಸಿತು. ನಂತರದ ಎಲ್ಲಾ ಪ್ರತಿದಾಳಿಗಳನ್ನು ಆಪರೇಷನ್ ಸಿಂಧೂರ ಅಡಿಯಲ್ಲಿ ನಡೆಸಲಾಯಿತು. ಪರಮಾಣು ಶಸ್ತ್ರಸಜ್ಜಿತ ನೆರೆಯ ರಾಷ್ಟ್ರಗಳ ನಡುವಿನ ಮಿಲಿಟರಿ ಸಂಘರ್ಷ ಸುಮಾರು 88 ಗಂಟೆಗಳ ಕಾಲ ನಡೆಯಿತು. ಮೇ 10ರ ಸಂಜೆ ಉಭಯ ದೇಶಗಳು ಒಪ್ಪಂದಕ್ಕೆ ಬಂದು ಸಂಘರ್ಷ ಕೊನೆಗೊಂಡಿತು ಎಂದು ವಿವರಿಸಿದರು.

## ರಾಷ್ಟ್ರೀಯ ಅರ್ಹತಾ ಮತ್ತು ಪ್ರವೇಶ ಪರೀಕ್ಷೆ ರದ್ದುಗೊಳಿಸಿ



### ವೈದ್ಯ ಶಿಕ್ಷಣ ಪ್ರವೇಶ ಪರೀಕ್ಷೆ ನಡೆಸಲು ರಾಜ್ಯಗಳಿಗೆ ಅವಕಾಶ ನೀಡುವಂತೆ ಒತ್ತಾಯ

**ಬೆಂಗಳೂರು, ಮೇ 16:** ದೇಶಾದ್ಯಂತ ತೀವ್ರ ವಿವಾದ ಹಾಗೂ ಅಕ್ರಮಗಳ ಆರೋಪಕ್ಕೆ ಗುರಿಯಾಗಿರುವ ರಾಷ್ಟ್ರೀಯ ಅರ್ಹತಾ ಮತ್ತು ಪ್ರವೇಶ ಪರೀಕ್ಷೆಯನ್ನು 2026ನೇ ಸಾಲಿನಿಂದ ಸಂಪೂರ್ಣವಾಗಿ ರದ್ದುಪಡಿಸಬೇಕು ಎಂದು ಕೇಂದ್ರ ಸರ್ಕಾರವನ್ನು ರಾಜ್ಯ ಸರ್ಕಾರ ಆಗ್ರಹಿಸಿದೆ.

ಈ ಸಂಬಂಧ ಡಾ.ಶರಣಪ್ರಕಾಶ್ ಪಾಟೀಲ್ ಕೇಂದ್ರಕ್ಕೆ ಪತ್ರ ಬರೆದಿದ್ದು ವೈದ್ಯಕೀಯ ಶಿಕ್ಷಣ ಪ್ರವೇಶಾತಿಗಾಗಿ ರಾಜ್ಯಗಳಿಗೆ ತಮ್ಮದೇ ಆದ ಸಾಮಾನ್ಯ ಪ್ರವೇಶ ಪರೀಕ್ಷೆ ನಡೆಸಲು ಕಾನೂನಾತ್ಮಕ ಅವಕಾಶ ನೀಡಬೇಕು ಎಂದು ಒತ್ತಾಯಿಸಿದ್ದಾರೆ. ಕರ್ನಾಟಕದಲ್ಲಿ ಈ ಹಿಂದೆ ಅತ್ಯಂತ ಯಶಸ್ವಿಯಾಗಿ ಕಾರ್ಯನಿರ್ವಹಿಸುತ್ತಿದ್ದ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಸಿಇಟಿ ವ್ಯವಸ್ಥೆಯನ್ನು ಪುನಃ ಜಾರಿಗೆ ತರಲು ಅನುಮತಿ ನೀಡಬೇಕೆಂದು ಪತ್ರದಲ್ಲಿ ಉಲ್ಲೇಖಿಸಿದ್ದಾರೆ. ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ದಶಕಗಳಿಂದ ಅತ್ಯಂತ ಪಾರದರ್ಶಕ, ನ್ಯಾಯಸಮ್ಮತ ಹಾಗೂ ಶಿಸ್ತಿನ ರೀತಿಯಲ್ಲಿ ಸಾಮಾನ್ಯ ಪ್ರವೇಶ ಪರೀಕ್ಷೆಗಳನ್ನು ನಡೆಸಿಕೊಂಡು ಬಂದ ಇತಿಹಾಸವನ್ನು ಹೊಂದಿದೆ. ರಾಜ್ಯದ ಹಳೆಯ ಸಿಇಟಿ ವ್ಯವಸ್ಥೆಯು ಗ್ರಾಮೀಣ ಭಾಗದ, ಮಧ್ಯಮ ವರ್ಗದ ಹಾಗೂ ಆರ್ಥಿಕವಾಗಿ ಹಿಂದುಳಿದ ವರ್ಗಗಳ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸಮಾನ ಅವಕಾಶಗಳನ್ನು ಒದಗಿಸುವಲ್ಲಿ ಯಶಸ್ವಿಯಾಗಿತ್ತು. ಇದು ಕೇವಲ ಪರೀಕ್ಷೆಯಾಗಿರದೆ, ಶುದ್ಧ ಪ್ರತಿಭೆ ಮತ್ತು ಪರಿಶ್ರಮ ನಂಬಿದ ಯುವಜನರ ಭವಿಷ್ಯ ರೂಪಿಸಿದ ಅತ್ಯಂತ ವಿಶ್ವಾಸಾರ್ಹ ಮಾದರಿಯಾಗಿತ್ತು ಎಂದು ಸರ್ಕಾರ ಪ್ರತಿಪಾದಿಸಿದೆ. ಕಳೆದ ಕೆಲವು ವರ್ಷಗಳಿಂದ ರಾಷ್ಟ್ರೀಯ ಪರೀಕ್ಷಾ ಸಂಸ್ಥೆ ನಡೆಸುತ್ತಿರುವ ನೀಟ್ ಪರೀಕ್ಷೆಯ ಸುತ್ತ ಗಂಭೀರ ಆತಂಕಗಳು ಸೃಷ್ಟಿಯಾಗಿವೆ ಎಂದು ತಿಳಿಸಿದ್ದಾರೆ.

"ರಾಜ್ಯಗಳ ಶಿಕ್ಷಣ ವ್ಯವಸ್ಥೆ, ಭಾಷಾ ವೈವಿಧ್ಯತೆ, ಪಠ್ಯಕ್ರಮ ಮತ್ತು ವಿದ್ಯಾರ್ಥಿಗಳ ಸಾಮಾಜಿಕ–ಆರ್ಥಿಕ ಹಿನ್ನೆಲೆಗಳನ್ನು ಆಯಾ ರಾಜ್ಯ ಸರ್ಕಾರಗಳೇ ಉತ್ತಮವಾಗಿ ಅರ್ಥಮಾಡಿಕೊಳ್ಳಬಲ್ಲವು. ಶಿಕ್ಷಣ ಕ್ಷೇತ್ರದಲ್ಲಿ ರಾಜ್ಯಗಳ ಪಾತ್ರ ಮತ್ತು ಹಕ್ಕುಗಳನ್ನು ಗೌರವಿಸುವುದು ಸಂವಿಧಾನದ ಫೆಡರಲ್ ವ್ಯವಸ್ಥೆಯ ಆತ್ಮವಾಗಿದೆ" ಎಂದಿದ್ದಾರೆ. ಕೇಂದ್ರ ಸರ್ಕಾರವು ರಾಜ್ಯಗಳ ಹಕ್ಕುಗಳನ್ನು ಗೌರವಿಸಿ, ಕೆಇಎ ನಂತಹ ವಿಶ್ವಾಸಾರ್ಹ ಸಂಸ್ಥೆಗಳ ಮೂಲಕ ಸ್ವತಂತ್ರ ಪರೀಕ್ಷೆ ನಡೆಸಲು ಬಿಡಬೇಕು. ಲಕ್ಷಾಂತರ ವಿದ್ಯಾರ್ಥಿಗಳ ಕನಸುಗಳನ್ನು ಪರೀಕ್ಷಾ ಅವ್ಯವಸ್ಥೆಗಳ ಕಾರಣಕ್ಕೆ ಹಾಳುಮಾಡಲು ಬಿಡುವುದಿಲ್ಲ ಎಂದು ರಾಜ್ಯ ಸರ್ಕಾರ ಸ್ಪಷ್ಟಪಡಿಸಿದೆ.

# ನನ್ನ ಇ-ಖಾತಾ, ನನ್ನ ಹಕ್ಕು ಅಭಿಯಾನಕ್ಕೆ ಡಿಸಿಎಂ ಡಿ.ಕೆ. ಶಿವಕುಮಾರ್ ಚಾಲನೆ



**ಬೆಂಗಳೂರು, ಮೇ 16:** ನನ್ನ ಇ–ಖಾತಾ, ನನ್ನ ಹಕ್ಕು ಅಭಿಯಾನದಿಂದ ಬೆಂಗಳೂರಿನ ಸಾರ್ವಜನಿಕರು ಒಂದೇ ಒಂದು ರೂಪಾಯಿ ಲಂಚ ನೀಡದೆ ತಮ್ಮ ಆಸ್ತಿಗಳನ್ನು ಬಿ ಖಾತೆಯಿಂದ ಎ ಖಾತೆಗೆ ಪರಿವರ್ತನೆ ಹಾಗೂ ಮನೆ ಬಾಗಿಲಲ್ಲೇ ಇ–ಖಾತೆ ಪಡೆಯಬಹುದು. ಏಳು ಲಕ್ಷ ಜನರಿಗೆ ಇದರಿಂದ ಉಪಯೋಗವಾಗಲಿದೆ.

ಬೆಂಗಳೂರು ನಿವಾಸಿಗಳು, ಅರ್ಜಿದಾರರು ಈ ಅಭಿಯಾನದಿಂದ ಖುಷಿಯಾಗಿದ್ದಾರೆ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಹೇಳಿದ್ದಾರೆ.ಬೆಂಗಳೂರು ಪೂರ್ವ ನಗರ ಪಾಲಿಕೆ ವ್ಯಾಪ್ತಿಯ ಹೊರಮಾವಿನ ನ್ಯಾಷನಲ್ ಪಬ್ಲಿಕ್ ಸ್ಕೂಲ್ ನಲ್ಲಿ ಶನಿವಾರ ಆರಂಭವಾದ "ನನ್ನ ಇ–ಖಾತಾ, ನನ್ನ ಹಕ್ಕು" ಅಭಿಯಾನ ಕೇಂದ್ರಕ್ಕೆ ಭೇಟಿ ನೀಡಿ, ಪ್ರಕ್ರಿಯೆಯನ್ನು ಪರಿಶೀಲಿಸಿ ನಾಗರಿಕರ ಅಹವಾಲು ಆಲಿಸಿದರು.ಬಳಿಕ ಮಾಧ್ಯಮಗಳೊಂದಿಗೆ ಮಾತನಾಡಿದ ಡಿಸಿಎಂ, ಖಾತೆ ದಾಖಲೆಯಲ್ಲಿ ಫೋಟೋ ಸಹ ಇರಲಿದೆ. ಯಾರಾದರೂ ನಕಲಿ ದಾಖಲೆಗಳನ್ನು ನೀಡಿ ಖಾತೆ ಮಾಡಿಸಿಕೊಂಡರೆ ಅದನ್ನು ರದ್ದು ಮಾಡುವ ವ್ಯವಸ್ಥೆಯೂ ಇದೆ. ನಿಗದಿತ ನಂಬರ್ ನೀಡಿದ ತಕ್ಷಣ 2004 ರ ನಂತರದ ಎಲ್ಲಾ ದಾಖಲೆಗಳು ದೊರೆಯುತ್ತವೆ. ಸಬ್ ರಿಜಿಸ್ಟ್ರಾರ್ ಕಚೇರಿಗೆ ಲಿಂಕ್ ಮಾಡಲಾಗಿದೆ. ಅರ್ಹ ಮಾಲೀಕರಿಗೆ ಖಾತೆ ಮಾಡಿಕೊಡಲಾಗುವುದು ಎಂದು ತಿಳಿಸಿದ್ದಾರೆ.ನಿಮ್ಮ ಆಸ್ತಿ ಮೌಲ್ಯಗಳನ್ನು ಹೆಚ್ಚಳ ಮಾಡಲು ಬಿ ಖಾತೆಯಿಂದ ಎ ಖಾತೆಗೆ ಪರಿವರ್ತನೆ ಮಾಡಿಕೊಡಲಾಗುತ್ತಿದೆ. ಇದು ಐತಿಹಾಸಿಕ ತೀರ್ಮಾನ. ಇದರಿಂದ ನೀವು ಬ್ಯಾಂಕ್ ನಲ್ಲಿ ಸಾಲ ಪಡೆಯಬಹುದು ಹಾಗೂ ಇತರೇ ಸೌಲಭ್ಯಗಳನ್ನು ನಿಮ್ಮದಾಗಿಸಿಕೊಳ್ಳಬಹುದು. ಬೆಂಗಳೂರಿನಲ್ಲಿರುವ 23 ಲಕ್ಷ ಆಸ್ತಿಗಳಲ್ಲಿ 16 ಲಕ್ಷ ಎ ಖಾತೆಗಳಿದ್ದರೆ 7 ಲಕ್ಷ ಬಿ ಖಾತೆಗಳಿವೆ. ಕೆಳ ಮಟ್ಟದ ಅಧಿಕಾರಿಗಳು ಖಾತೆ ವಿಚಾರವಾಗಿ ಲಂಚ ಪಡೆದು ಕಿರುಕುಳ ನೀಡುತ್ತಿದ್ದರು ಎನ್ನುವುದು ನನ್ನ ಗಮನಕ್ಕೆ ಬಂದಿತ್ತು. ಅದಕ್ಕಾಗಿ ಪ್ರತಿ ಶನಿವಾರ ಅಭಿಯಾನ ನಡೆಯಲಿದೆ ಎಂದು ಘೋಷಿಸಿದ್ದಾರೆ.

ನಿಮ್ಮ ಆಸ್ತಿ ದಾಖಲೆಗಳಲ್ಲಿ ತೊಂದರೆಯಿದ್ದರೆ ಅಧಿಕಾರಿಗಳು ಸ್ಥಳಕ್ಕೆ ಬಂದು ಪರಿಶೀಲನೆ ನಡೆಸಲಿದ್ದಾರೆ. ನಿಮ್ಮ ಆಸ್ತಿಗಳಿಗೆ ಗುರುತಿನ ಸಂಖ್ಯೆ ನೀಡಲಾಗಿರುತ್ತದೆ. ಇದನ್ನು ಬಳಸಿಕೊಂಡು ತಪ್ಪಿರುವ ದಾಖಲೆಗಳನ್ನು ಸರಿ ಮಾಡಲಾಗುವುದು. ನಿಮ್ಮ ಆಸ್ತಿ ಮೌಲ್ಯದ ಶೇ.5 ರಷ್ಟು ಮೊತ್ತವನ್ನು ಕಟ್ಟಬೇಕಿತ್ತು. ಆದರೆ 100 ದಿನಗಳ ಕಾಲ ರಿಯಾಯಿತಿ ನೀಡಿದ್ದು ಶೇ.2 ರಷ್ಟು ಶುಲ್ಕ ಪಾವತಿ ಮಾಡುವ ಅವಕಾಶ ಕಲ್ಪಿಸಲಾಗಿದೆ. ಇದು ಸಾರ್ವಜನಿಕರಿಗೆ ಸುವರ್ಣಾವಕಾಶ. ನಿಮ್ಮ ಖಾತೆಯನ್ನು ನಾವೇ ಫೈಲ್ ರೂಪದಲ್ಲಿಯೇ ನೀಡುತ್ತೇವೆ. ಅದರಲ್ಲಿ ನಿಮ್ಮ ಹಾಗೂ ಮನೆಯ ಫೋಟೋ ಇರುತ್ತದೆ. ಆನ್‌ಲೈನ್ ಮೂಲಕವೂ ಡೌನ್ಲೋಡ್ ಮಾಡಿಕೊಳ್ಳಬಹುದು. ಯಾರೂ ಸಹ ಇದನ್ನು ನಕಲು ಮಾಡಲು ಸಾಧ್ಯವಿಲ್ಲ ಎಂದು ಡಿ.ಕೆ.ಶಿವಕುಮಾರ್ ಅಭಯ ನೀಡಿದ್ದಾರೆ.ಸಾರ್ವಜನಿಕರು ಯಾರಿಗೂ ಸಹ ಒಂದೇ ಒಂದು ರೂಪಾಯಿ ಲಂಚ ನೀಡಬಾರದು. ಅಧಿಕಾರಿಗಳಿಗೆ ಸೇರಿದಂತೆ ಯಾವ ಪಕ್ಷದವರಿಗೂ ಲಂಚ ಕೊಡಬಾರದು. ಸರ್ಕಾರಿ ಭೂಮಿಗಳನ್ನು ಮಂಜೂರು ಮಾಡಲು ಸಾಧ್ಯವಿಲ್ಲ. ನಾವು ಇಡೀ ದೇಶದಲ್ಲಿಯೇ ಮಾದರಿಯಾಗಿದ್ದೇವೆ. ಕೇಂದ್ರ ಸರ್ಕಾರವು ನಮಗೆ ಒಳ್ಳೆ ಕೆಲಸ ಮಾಡುತ್ತಿದ್ದೀರಿ ಎಂದು ಶ್ಲಾಘಿಸಿದೆ. ಆರನೇ ಗ್ಯಾರಂಟಿಯಾಗಿ ಭೂಮಿ ಗ್ಯಾರಂಟಿ ನೀಡುತ್ತಿದ್ದೇವೆ. ನೀವು ತೆಗೆದುಕೊಂಡ ನಿವೇಶನ ಅಂದು ಕಡಿಮೆ ಬೆಲೆಯದ್ದಾಗಿದ್ದರೆ ಖಾತೆ ಬದಲಾವಣೆಯಿಂದ ಆಸ್ತಿ ಬೆಲೆ ಹೆಚ್ಚಳವಾಗಲಿದೆ ಎಂದು ಹೊಸ ಕನಸು ಚಿಗುರುವಂತೆ ಮಾಡಿದ್ದಾರೆ.ದಲ್ಲಾಳಿಗಳನ್ನು ದೂರ ಇಡಬೇಕು. ಯಾವ ಅಧಿಕಾರಿಗಳು ಲಂಚ ಕೇಳಿದರೆ ದೂರು ನೀಡುವ ವ್ಯವಸ್ಥೆ ಮಾಡಬೇಕು. ಇದಕ್ಕಾಗಿ ನಿರ್ದಿಷ್ಟ ದೂರವಾಣಿ ಸಂಖ್ಯೆ ನೀಡಲಾಗುವುದು. ಲಂಚ ಕೇಳಿದ್ದರ ದೂರು ನೀಡಬಹುದು. ಅಂತಹವರ ವಿರುದ್ಧ ಕಠಿಣ ಕ್ರಮ ತೆಗೆದುಕೊಳ್ಳಲಾಗುವುದು ಎಂದು ಡಿಕೆ ಶಿವಕುಮಾರ್ ಎಚ್ಚರಿಕೆ ನೀಡಿದರು.

# ರೂಪಾಯಿ ಕುಸಿತಕ್ಕೆ ಆರ್‌ಬಿಐ ತಡೆ: 96ರ ಗಡಿ ದಾಟಿದ್ದ ವಿನಿಮಯ ದರ 95ಕ್ಕೆ ಇಳಿಕೆ

**ನವದೆಹಲಿ, ಮೇ 16:** ಅಮೆರಿಕ ಡಾಲರ್ ಎದುರು ಭಾರತೀಯ ರೂಪಾಯಿ ಮೌಲ್ಯವು ತೀವ್ರ ಕುಸಿತ ಕಂಡು 96 ರೂಪಾಯಿಗಳ ಗಡಿ ದಾಟಿದ್ದ ಆತಂಕಕಾರಿ ಬೆಳವಣಿಗೆಯ ನಡುವೆಯೇ, ಆರ್‌ಬಿಐ ಸಕಾಲಿಕವಾಗಿ ಮಧ್ಯಪ್ರವೇಶ ಮಾಡಿದೆ. ಆರ್ಬಿಐನ ಈ ದಿಟ್ಟ ಕ್ರಮದಿಂದಾಗಿ ಡಾಲರ್–ರೂಪಾಯಿ ವಿನಿಮಯ ದರವು ಪುನಃ 95ಕ್ಕೆ ಇಳಿಕೆಯಾಗಿದ್ದು, ವಿದೇಶಿ ವಿನಿಮಯ ಮಾರುಕಟ್ಟೆಯಲ್ಲಿ ಉಂಟಾಗಿದ್ದ ತೀವ್ರ ಏರಿಳಿತಗಳಿಗೆ ಸದ್ಯ ತಡೆ ಬಿದ್ದಿದೆ.

ಜಾಗತಿಕ ಮಾರುಕಟ್ಟೆಯಲ್ಲಿನ ಆರ್ಥಿಕ ಅನಿಶ್ಚಿತತೆ, ಏರುಗತಿಯಲ್ಲಿರುವ ಕಚ್ಚಾತೈಲ ಬೆಲೆ ಹಾಗೂ ವಿದೇಶಿ ಸಾಂಸ್ಥಿಕ ಹೂಡಿಕೆದಾರರು ದೇಶೀಯ ಮಾರುಕಟ್ಟೆಯಿಂದ ಬಂಡವಾಳ ಹಿಂಪಡೆಯುತ್ತಿರುವ ಹಿನ್ನೆಲೆಯಲ್ಲಿ ರೂಪಾಯಿ ಮೌಲ್ಯದಲ್ಲಿ ಈ ದಿಢೀರ್ ಕುಸಿತ ಕಂಡುಬಂದಿತ್ತು. ಒಂದು ಹಂತದಲ್ಲಿ ಡಾಲರ್ ಎದುರು ರೂಪಾಯಿ ಮೌಲ್ಯ 96 ರೂ.ಗಳನ್ನು ದಾಟಿದ್ದು, ದೇಶದ ಆಮದುದಾರರು ಹಾಗೂ ಆರ್ಥಿಕ ವಲಯದಲ್ಲಿ ತೀವ್ರ ಆತಂಕ ಸೃಷ್ಟಿಸಿತ್ತು. ಈ ಪರಿಸ್ಥಿತಿಯನ್ನು ಅತ್ಯಂತ ಗಂಭೀರವಾಗಿ ಪರಿಗಣಿಸಿದ ಆರ್ಬಿಐ, ತನ್ನ ಬಳಿಯಿರುವ ವಿದೇಶಿ ವಿನಿಮಯ ಮೀಸಲು ನಿಧಿಯಿಂದ ಭಾರಿ ಪ್ರಮಾಣದ ಡಾಲರ್‌ಗಳನ್ನು ಮಾರುಕಟ್ಟೆಗೆ ಮಾರಾಟ ಮಾಡುವ ಮೂಲಕ ರೂಪಾಯಿ ಮೌಲ್ಯ ಮತ್ತಷ್ಟು



ಪಾತಾಳಕ್ಕೆ ಕುಸಿಯದಂತೆ ತಡೆಹಿಡಿದಿದೆ.

ಒಂದು ವೇಳೆ ರೂಪಾಯಿ ಮೌಲ್ಯವು 96ರ ಗಡಿಯಲ್ಲೇ ಮುಂದುವರಿದಿದ್ದರೆ, ದೇಶದಲ್ಲಿ ಪೆಟ್ರೋಲ್, ಡೀಸೆಲ್, ಎಲೆಕ್ಟ್ರಾನಿಕ್ಸ್ ವಸ್ತುಗಳು ಹಾಗೂ ಇತರ ಅಗತ್ಯ ಆಮದು ವಸ್ತುಗಳ ಬೆಲೆ ವಿಪರೀತವಾಗಿ ಏರಿಕೆಯಾಗಿ, ಸಾಮಾನ್ಯ ಜನರ ಮೇಲೆ ಹಣದುಬ್ಬರದ ಬರೆ ಬೀಳುವ ಭೀತಿ ಇತ್ತು. ಮಾರುಕಟ್ಟೆಯಲ್ಲಿನ ಈ ಅಸಹಜ ಏರಿಳಿತಗಳನ್ನು ನಿಯಂತ್ರಿಸಲು ಆರ್‌ಬಿಐ ತನ್ನ ಡಾಲರ್ ಮಾರಾಟ ಪ್ರಕ್ರಿಯೆಯನ್ನು ಚುರುಕುಗೊಳಿಸಿದ್ದೇ ಈ ಚೇತರಿಕೆಗೆ ಪ್ರಮುಖ ಕಾರಣ ಎಂದು ಆರ್ಥಿಕ ತಜ್ಞರು ವಿಶ್ಲೇಷಿಸಿದ್ದಾರೆ.

ವರಿಷ್ಠ ಬ್ಯಾಂಕ್‌ನ ಈ ಕ್ರಮದಿಂದಾಗಿ ಸದ್ಯ ರೂಪಾಯಿ ಮೌಲ್ಯ 95ರ ಆಸುಪಾಸಿನಲ್ಲಿ ಸ್ಥಿರತೆ ಕಾಯ್ದುಕೊಂಡಿದ್ದು, ಆಮದು ವಲಯ ತಾತ್ಕಾಲಿಕ ನಿರಾಳತೆ ಅನುಭವಿಸಿದೆ. ಮುಂದಿನ ದಿನಗಳಲ್ಲೂ ರೂಪಾಯಿ ವಿನಿಮಯ ದರದ ಮೇಲೆ ಆರ್‌ಬಿಐ ತೀವ್ರ ನಿಗಾ ಇರಿಸಲಿದೆ ಎಂದು ಮಾರುಕಟ್ಟೆ ಮೂಲಗಳು ತಿಳಿಸಿವೆ.

ರೂಪಾಯಿ ಮೌಲ್ಯ ಡಾಲರ್ ಎದುರು ಅತಿಯಾಗಿ ಹೆಚ್ಚಾದರೆ, ಕಚ್ಚಾತೈಲ ಮತ್ತು ಇತರ ಆಮದುಗಳು ಅಗ್ಗವಾಗಿ ದೇಶದಲ್ಲಿ ಹಣದುಬ್ಬರ ಕಡಿಮೆಯಾಗುತ್ತದೆ. ಆದರೆ, ಇದು ದೇಶದ ರಫ್ತು ವಲಯಕ್ಕೆ (ಐಟಿ, ಜವಳಿ, ಕೃಷಿ) ತೀವ್ರ ಹೊಡೆತ ನೀಡುತ್ತದೆ. ನಮ್ಮ ಉತ್ಪನ್ನಗಳು ಜಾಗತಿಕ ಮಾರುಕಟ್ಟೆಯಲ್ಲಿ ದುಬಾರಿಯಾಗಿ, ವಿದೇಶಿ ಬೇಡಿಕೆ ಕುಸಿಯುತ್ತದೆ; ಇದರಿಂದ ಉದ್ಯೋಗ ನಷ್ಟದ ಅಪಾಯವಿರುತ್ತದೆ. ಆದ್ದರಿಂದ, ಆಮದು ಮತ್ತು ರಫ್ತುಗಳ ನಡುವೆ ಸಮತೋಲನ ಕಾಯ್ದುಕೊಳ್ಳಲು ಆರ್‌ಬಿಐ ಮಧ್ಯಪ್ರವೇಶಿಸುತ್ತದೆ. ರೂಪಾಯಿ ಮಿತಿಮೀರಿ ಏರಿದಾಗ, ಆರ್‌ಬಿಐ ಮಾರುಕಟ್ಟೆಯಿಂದ ಡಾಲರ್‌ಗಳನ್ನು ಖರೀದಿಸಿ, ರೂಪಾಯಿ ಮೌಲ್ಯವನ್ನು ಸಮತೋಲನದಲ್ಲಿಡುತ್ತದೆ. ದೇಶದ ಆರ್ಥಿಕತೆಯನ್ನು ಹಠಾತ್ ಏರಿಳಿತಗಳ ಆಘಾತದಿಂದ ರಕ್ಷಿಸುವುದೇ ಇದರ ಮುಖ್ಯ ಉದ್ದೇಶ



ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಮತ್ತು ವಿದ್ಯಾರ್ಥಿಗಳ ಬಗ್ಗೆ ಕೇಂದ್ರ ನೀಡಿದ ಹೇಳಿಕೆಗಳಿಗೆ ಸಂಬಂಧಿಸಿದಂತೆ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ವಿರುದ್ಧ ಯುವ ಕಾಂಗ್ರೆಸ್ ಕಾರ್ಯಕರ್ತರು ಶನಿವಾರ ನವದೆಹಲಿಯ ತೀನ್ ಮೂರ್ತಿ ಭವನದ ರಸ್ತೆಯಲ್ಲಿ ಪ್ರತಿಭಟನೆ ನಡೆಸಿದರು.

## ನಿರುದ್ಯೋಗಿ ಯುವಕರು ಜಿರಳೆಗಳಿದ್ದಂತೆ: ಸಿಜೆಐ

**ನವದೆಹಲಿ,ಮೇ 16:** ಕೆಲವು ನಿರುದ್ಯೋಗಿ ಯುವಕರು ಜಿರಳೆಗಳಿದ್ದಂತೆ. ಅವರಲ್ಲಿ ಸೋಷಿಯಲ್ ಮೀಡಿಯಾ ಬಳಕೆದಾರರು, ಆರ್‌ಟಿಐ ಕಾರ್ಯಕರ್ತರು ಇರುತ್ತಾರೆ. ಈ ವ್ಯವಸ್ಥೆ ಮೇಲೆ ದಾಳಿ ಮಾಡುತ್ತಾರೆ ಎಂದು ಸುಪ್ರೀಂ ಕೋರ್ಟ್‌ನ ಸಿಜೆಐ ಸೂರ್ಯಕಾಂತ್ ಅವರು ಕಿಡಿಕಾರಿದ್ದಾರೆ.

ಸಿಜೆಐ ಸೂರ್ಯ ಕಾಂತ್ ಮತ್ತು ನ್ಯಾಯಮೂರ್ತಿ ಜೋಯ್ಮಲ್ಯಾ ಬಾಗ್ಚಿ ಅವರನ್ನೊಳಗೊಂಡ ಪೀಠದ ಮುಂದೆ ವಕೀಲರೊಬ್ಬರನ್ನು ಹಿರಿಯ ವಕೀಲರನ್ನಾಗಿ ನೇಮಿಸುವ ಬಗ್ಗೆ ಸಲ್ಲಿಸಲಾದ ಅರ್ಜಿಯ ವಿಚಾರಣೆಯ ಸಂದರ್ಭದಲ್ಲಿ ಈ ಹೇಳಿಕೆ ನೀಡಿದ್ದಾರೆ.

ದೆಹಲಿ ಹೈಕೋರ್ಟ್ ಅರ್ಜಿದಾರರಿಗೆ ಹಿರಿಯ ವಕೀಲ ಹುದ್ದೆಯನ್ನು ನೀಡಿದರೆ, ಅವರ ವೃತ್ತಿಪರ ನಡವಳಿಕೆಯನ್ನು ಗಮನದಲ್ಲಿಟ್ಟುಕೊಂಡು ಸುಪ್ರೀಂ ಕೋರ್ಟ್ ಅದನ್ನು ರದ್ದುಗೊಳಿಸುತ್ತದೆ ಎಂದು ಸಿಜೆಐ ಸೂರ್ಯಕಾಂತ್ ತಿಳಿಸಿದ್ದಾರೆ.

ವಕೀಲರ ಸಾಮಾಜಿಕ ಮಾಧ್ಯಮ ನಡವಳಿಕೆಯನ್ನು ಉಲ್ಲೇಖಿಸಿದ ಸಿಜೆಐ, ಸಮಾಜದಲ್ಲಿ ಈಗಾಗಲೇ ವ್ಯವಸ್ಥೆಯ ಮೇಲೆ ದಾಳಿ ಮಾಡುವ ಪರಾವಲಂಬಿಗಳು ಇದ್ದಾರೆ. ನೀವು ಅವರೊಂದಿಗೆ ಕೈಜೋಡಿಸಲು ಬಯಸುತ್ತೀರಾ ಎಂದು ಪ್ರಶ್ನಿಸಿದ್ದಾರೆ.

ಯುವಕರು ಜಿರಳೆಗಳಂತೆ ಇದ್ದಾರೆ. ಅವರಿಗೆ ಯಾವುದೇ ಉದ್ಯೋಗ ಸಿಗುವುದಿಲ್ಲ. ವೃತ್ತಿಯಲ್ಲಿ ಯಾವುದೇ ಸ್ಥಾನವಿಲ್ಲ. ಅವರಲ್ಲಿ ಕೆಲವರು ಮಾಧ್ಯಮ, ಸಾಮಾಜಿಕ ಮಾಧ್ಯಮ, ಆರ್‌ಟಿಐ ಕಾರ್ಯಕರ್ತರು ಇರುತ್ತಾರೆ ಎಂದು ಹೇಳಿದ್ದಾರೆ.

## ಸುಪ್ರೀಂ ಕೋರ್ಟ್‌ನಲ್ಲೂ ಇನ್ಮುಂದೆ ವಾರಕ್ಕೆರಡು ದಿನ ವರ್ಚುವಲ್ ವಿಚಾರಣೆ

**ನವದೆಹಲಿ,ಮೇ 16::** ಪ್ರಧಾನಿ ಮೋದಿ ಮಿತವ್ಯಯ ಕರೆ ಬೆನ್ನಲ್ಲೇ ಸುಪ್ರೀಂಕೋರ್ಟ್ ವಾರಕ್ಕೆರಡು ದಿನ ವರ್ಚುವಲ್ ವಿಚಾರಣೆ ನಡೆಸಲು ನಿರ್ಧರಿಸಿದೆ. ಸಾಮಾನ್ಯವಾಗಿ ಮಂಗಳವಾರದಿಂದ ಗುರುವಾರದವರೆಗೆ ನಡೆಯುವ ಎಲ್ಲಾ ವಿಚಾರಣೆಗಳು ನ್ಯಾಯಾಲಯದಲ್ಲಿ ನಡೆಯುತ್ತವೆ.



ಈ ಸಮಯದಲ್ಲಿ ವಿಚಾರಣೆಗಾಗಿ ವಕೀಲರು ಹಾಗೂ ಕಕ್ಷಿದಾರರು ಆನ್‌ಲೈನ್ ಮೂಲಕ ಅಥವಾ ನ್ಯಾಯಾಲಯಕ್ಕೆ ಬಂದು ಹಾಜರಾಗುವ ಎರಡೂ ಆಯ್ಕೆಗಳನ್ನು ಹೊಂದಿರುತ್ತಾರೆ. ಇದರ ಹೊರತಾಗಿ ಸೋಮವಾರ ಹಾಗೂ ಶುಕ್ರವಾರದಂದು ಎಲ್ಲಾ ವಿಚಾರಣೆಗಳು ಆನ್‌ಲೈನ್ ಮೂಲಕ ನಡೆಯುತ್ತವೆ.

ಕೋರ್ಟ್ ಕಚೇರಿಯ ಪ್ರತಿಯೊಂದು ವಿಭಾಗದಲ್ಲೂ ಶೇ.50ರಷ್ಟು ಸಿಬ್ಬಂದಿ ವಾರಕ್ಕೆ ಎರಡು ದಿನ ಮನೆಯಿಂದಲೇ ಕೆಲಸ ಮಾಡಲು ಅನುಮತಿ ನೀಡಲಾಗಿದೆ. ಆದರೆ ಇದರಿಂದ ಕೋರ್ಟ್‌ನ ಕೆಲಸಗಳಿಗೆ ಯಾವುದೇ ರೀತಿಯಲ್ಲಿಯೂ ಅಡ್ಡಿ ಆಗಬಾರದು ಮತ್ತು ತುರ್ತು ಕೆಲಸವಿದ್ದಾಗ ಕಚೇರಿಗೆ ಖುದ್ದಾಗಿ ಬರಬೇಕಾಗುತ್ತದೆ. ಜೊತೆಗೆ ಕಚೇರಿಯಲ್ಲಿ ಖುದ್ದಾಗಿ ಹಾಜರಿರಲೇಬೇಕಾದ ಅನಿವಾರ್ಯತೆ ಇದ್ದರೆ ಅಂತಹ ಸಂದರ್ಭದಲ್ಲಿ ಈ ವರ್ಕ್ ಫ್ರಂ ಹೋಮ್ ಸೌಲಭ್ಯವನ್ನು ರದ್ದುಗೊಳಿಸುವ ಅಥವಾ ಮಾರ್ಪಾಡು ಮಾಡುವ ಅಧಿಕಾರವನ್ನು ಹಿರಿಯ ಅಧಿಕಾರಿಗಳಿಗೆ ನೀಡಲಾಗಿದೆ.

ನ್ಯಾಯಮೂರ್ತಿಗಳಿಗೆ ಕಾರ್ ಪೂಲಿಂಗ್ ಮಾಡಲು ನಿರ್ಧರಿಸಿದ್ದಾರೆ. ಅಂದರೆ ಸಾಮಾನ್ಯವಾಗಿ ಒಂದು ಕಾರಿನಲ್ಲಿ ಓರ್ವ ನ್ಯಾಯಾಧೀಶರು ಅಥವಾ ನ್ಯಾಯಮೂರ್ತಿ ಅವರು ಆಗಮಿಸುತ್ತಾರೆ. ಇದರ ಬದಲಿಗೆ ಒಂದೇ ಕಾರಿನಲ್ಲಿ ಇಬ್ಬರಿಂದ ಮೂವರನ್ನು ಕರೆತರಲು ನಿರ್ಧರಿಸಿದ್ದಾರೆ. ವರ್ಕ್ ಫ್ರಂ ಹೋಮ್, ಆನ್‌ಲೈನ್ ವಿಚಾರಣೆ ಸೇರಿದಂತೆ ಎಲ್ಲಾ ನಿರ್ಧಾರಗಳು ಮುಂದಿನ ಆದೇಶದವರೆಗೂ ಜಾರಿಯಲ್ಲಿರಲಿದೆ.

## ಜಾಮೀನಿನ ಬಳಿಕ ಇ.ಡಿ ವಿರುದ್ಧ ರಾಬರ್ಟ್ ವಾದ್ರಾ ವಾಗ್ದಾಳಿ

**ನವದೆಹಲಿ, ಮೇ 16:** ಶಿಕೋಹ್ಪುರ ಭೂ ವ್ಯವಹಾರಕ್ಕೆ ಸಂಬಂಧಿಸಿದ ಹಣ ವರ್ಗಾವಣೆ ಪ್ರಕರಣದಲ್ಲಿ ರೌಸ್ ಅವೆನ್ಯೂ ನ್ಯಾಯಾಲಯದಿಂದ ಜಾಮೀನು ಪಡೆದ ಉದ್ಯಮಿ ರಾಬರ್ಟ್ ವಾದ್ರಾ ಜಾರಿ ನಿರ್ದೇಶನಾಲಯ (ಇ.ಡಿ) ವಿರುದ್ಧ ವಾಗ್ದಾಳಿ ನಡೆಸಿದ್ದಾರೆ. ಮುಚ್ಚಿಡಲು ನನ್ನಲ್ಲಿ ಏನೂ ಇಲ್ಲ ಎಂದಿರುವ ವಾದ್ರಾ, ಸರ್ಕಾರದ ಆಜ್ಞೆಯ ಮೇರೆಗೆ ಇಡಿ ಕಾರ್ಯನಿರ್ವಹಿಸುತ್ತಿದೆ ಎಂದು ಆರೋಪಿಸಿದ್ದಾರೆ.

ಶಿಕೋಹ್ಪುರ ಭೂ ಒಪ್ಪಂದ ಪಿಎಂಎಲ್ಎ ಪ್ರಕರಣದಲ್ಲಿ ಸಮನ್ಸ್ ಹಿನ್ನೆಲೆ ವಾದ್ರಾ ರೂಸ್ ಅವೆನ್ಯೂ ನ್ಯಾಯಾಲಯದ ಮುಂದೆ ಹಾಜರಾಗಿದ್ದರು. ಕೋರ್ಟ್‌ನಲ್ಲಿ ರಾರ್ಬಟ್ ವಾದ್ರಾ ಪರವಾಗಿ ಹಿರಿಯ ವಕೀಲ ದೇವದತ್ ಕಾಮತ್, ವಕೀಲರಾದ ಪ್ರತೀಕ್ ಚಡ್ಡಾ ಮತ್ತು ಅಕ್ಷತ್ ಗುಪ್ತಾ ವಾದಿಸಿದರು. ಜಾಮೀನು ಲಭಿಸಿದ ಬಳಿಕ ನ್ಯಾಯಾಲಯದ ಹೊರಗೆ ಮಾಧ್ಯಮಗಳಿಗೆ ಪ್ರತಿಕ್ರಿಯಿಸಿದ ವಾದ್ರಾ, ಇ.ಡಿ.ಯನ್ನು ಟೀಕಿಸುತ್ತಲೇ ನ್ಯಾಯಾಂಗದ ಮೇಲಿನ ತಮ್ಮ ನಂಬಿಕೆಯನ್ನು ಪುನರುಚ್ಚರಿಸಿದರು.

ದೇಶದ ನ್ಯಾಯಾಂಗ ವ್ಯವಸ್ಥೆಯಲ್ಲಿ ನನಗೆ ನಂಬಿಕೆ ಇದೆ. ಇಡಿಯನ್ನು ಸರ್ಕಾರ ನಿರ್ವಹಿಸುತ್ತಿದೆ ಎಂದು ನನಗೆ ತಿಳಿದಿದೆ. ಇಡಿ ಸರ್ಕಾರದ ಸೂಚನೆಗಳ ಮೇರೆಗೆ ಮುಂದುವರಿಯುತ್ತದೆ. ನನ್ನಲ್ಲಿ ಮುಚ್ಚಿಡುವಾಂತದ್ದು ಏನೂ ಇಲ್ಲ. ನಾನು ಯಾವಾಗಲೂ ಇಲ್ಲೇ ಇರುತ್ತೇನೆ ಮತ್ತು ಎಲ್ಲ ಪ್ರಶ್ನೆಗಳಿಗೆ ಉತ್ತರಿಸುತ್ತೇನೆ ಎಂದು ವಾದ್ರಾ ಹೇಳಿದರು.

ರಾಬರ್ಟ್ ವಾದ್ರಾ ಒಡೆತನದ ಸ್ಕೈಲೈಟ್ ಹಾಸ್ಪಿಟಾಲಿಟಿ ಸಂಸ್ಥೆಯು ಶಿಖೋಪುರದಲ್ಲಿ 2008ರಲ್ಲಿ ಕೇವಲ 7.5 ಕೋಟಿ ರೂ.ಗೆ ಭೂಮಿಯನ್ನು ಖರೀದಿಸಿತು. ನಂತರ ಯಾವುದೇ ಅಭಿವೃದ್ಧಿ ಮಾಡದೆ ಅದೇ ಭೂಮಿಯನ್ನು ಡಿಎಲ್‌ಎಫ್ ಕಂಪನಿಗೆ 58 ಕೋಟಿ ರೂ.ಗೆ ಮಾರಾಟ ಮಾಡಿ ಭಾರೀ ಲಾಭ ಗಳಿಸಿದೆ. ಈ ವ್ಯವಹಾರದಲ್ಲಿ ಅಕ್ರಮ ಹಣ ವರ್ಗಾವಣೆ, ಕ್ರಿಮಿನಲ್ ಪಿತೂರಿ, ವಂಚನೆ ಮತ್ತು ನಕಲಿ ದಾಖಲೆಗಳನ್ನು ಬಳಸಲಾಗಿದೆ ಎಂಬುದು ಆರೋಪವಾಗಿದೆ. ಆದರೆ ಇದು ರಾಜಕೀಯ ದುರುದ್ದೇಶದಿಂದ ನಡೆಸುತ್ತಿರುವ ವಿಚಾರಣೆಯಾಗಿದೆ ಎಂದು ವಾದ್ರಾ ಮತ್ತು ಕಾಂಗ್ರೆಸ್ ನಾಯಕರು ಆರೋಪಿಸಿದ್ದಾರೆ.

## ಪೋಕ್ಸೋ ಪ್ರಕರಣ: ಬಂಡಿ ಸಂಜಯ್ ಪುತ್ರನ ವಿರುದ್ಧ ಲುಕ್ ಔಟ್ ನೋಟಿಸ್

**ಹೈದರಾಬಾದ್, ಮೇ 16:** ಕೇಂದ್ರ ಗೃಹ ಇಲಾಖೆಯ ರಾಜ್ಯ ಸಚಿವ ಬಂಡಿ ಸಂಜಯ್ ಕುಮಾರ್ ಅವರ ಪುತ್ರ ಬಂಡಿ ಸಾಯಿ ಭಗೀರಥ್ ವಿರುದ್ಧ ತೆಲಂಗಾಣ ಪೊಲೀಸರು ಲುಕ್‌ಔಟ್ ನೋಟಿಸ್ ಹೊರಡಿಸಿದ್ದಾರೆ. ಆರೋಪಿ ಭಗೀರತ್ ದೇಶಬಿಟ್ಟು ಪಲಾಯನ ಮಾಡುವುದನ್ನು ತಡೆಯಲು ಈ ಕ್ರಮ ಕೈಗೊಳ್ಳಲಾಗಿದೆ ಎಂದು ಪ್ರಕರಣದ ವಿಶೇಷ ತನಿಖಾಧಿಕಾರಿ, ಕೂಕಟ್‌ಪಲ್ಲಿಯ ಡಿಸಿಪಿ ರಿತಿರಾಜ್ ತಿಳಿಸಿದ್ದಾರೆ.

ಬಾಲಕಿಯ ಮೇಲೆ ಅತ್ಯಾಚಾರ ಎಸಗಿದ ಆರೋಪದಲ್ಲಿ ಕೇಂದ್ರ ಸಚಿವರ ಪುತ್ರ ಭಗೀರತ್ ವಿರುದ್ಧ ಪೋಕ್ಸೋ ಪ್ರಕರಣ ದಾಖಲಾಗಿದೆ. ಪ್ರಕರಣ ದಾಖಲಾದ ಬೆನ್ನಲ್ಲೇ, ಆರೋಪಿ ತಲೆಮರೆಸಿಕೊಂಡಿದ್ದಾರೆ. ಪ್ರಕರಣದ ತನಿಖೆಗೆ ಎಸ್‌ಐಟಿ ರಚಿಸಲಾಗಿದ್ದು, ತನಿಖಾಧಿಕಾರಿಗಳು ಆರೋಪಿಯ ಬಂಧನಕ್ಕೆ ಹುಡುಕಾಟ ನಡೆಸುತ್ತಿದ್ದಾರೆ.

ಇತ್ತೀಚೆಗೆ, ಬಂಧನದಿಂದ ಮಧ್ಯಂತರ ರಕ್ಷಣೆ ಕೋರಿ ಭಗೀರಥ್ ಸಲ್ಲಿಸಿದ್ದ ಅರ್ಜಿಯನ್ನು ತೆಲಂಗಾಣ ಹೈಕೋರ್ಟ್ ಶುಕ್ರವಾರ ತಿರಸ್ಕರಿಸಿದೆ.

ಈ ಬೆನ್ನಲೇ, ಎಸ್‌ಐಟಿ ಪೊಲೀಸರು ಕರಿಮ್ನಗರದಲ್ಲಿರುವ ಸಚಿವ ಸಂಜಯ್ ಕುಮಾರ್ ಅವರ ನಿವಾಸ, ಹೈದರಾಬಾದ್‌ನ ಬಂಜಾರಾ ಹಿಲ್ಸ್‌ನಲ್ಲಿರುವ ಅವರ ಸಂಬಂಧಿಕರ ಮನೆ ಹಾಗೂ ಯೂಸುಫ್‌ಗೂಡಾ ಸೇರಿದಂತೆ ಹಲವು ಪ್ರದೇಶಗಳಲ್ಲಿ ಏಕಕಾಲದಲ್ಲಿ ದಾಳಿ ನಡೆಸಿ ತಪಾಸಣೆ ನಡೆಸಿದ್ದಾರೆ. ದೂರಿನ ವಿವರಗಳ ಪ್ರಕಾರ, 2025ರ ಜೂನ್ ತಿಂಗಳಿನಲ್ಲಿ ಸ್ನೇಹಿತರ ಮೂಲಕ ಪರಿಚಯವಾಗಿದ್ದ 17 ವರ್ಷದ ಬಾಲಕಿಯ ಮೇಲೆ, ಅದೇ ವರ್ಷದ ಅಕ್ಟೋಬರ್ ಮತ್ತು ಡಿಸೆಂಬರ್ ನಡುವೆ ಭಗೀರಥ್ ಲೈಂಗಿಕ ದೌರ್ಜನ್ಯ ಎಸಗಿದ್ದಾರೆ ಎಂದು ಆರೋಪಿಸಲಾಗಿದೆ.

ಸೃಜನಾ ಮುಂಬಯಿ ಕನ್ನಡ ಲೇಖಕಿಯರ ಬಳಗ ಆಯೋಜಿತ ಸಾಹಿತ್ಯ ಸಂವಾದ ಕಾರ್ಯಕ್ರಮ

## ಸಮಸ್ಯೆಗಳೆ ಎಂಬುದು ಇಲ್ಲ, ಇರುವುದೆಲ್ಲ ಸವಾಲುಗಳು ಮಾತ್ರ: ಸಾಹಿತಿ ನೇಮಿಚಂದ್ರ

**ಮುಂಬಯಿ, ಮೇ.16:** ಶಿಕ್ಷಣದಲ್ಲಿ ಅಂಕಗಳು ಬಂದಿಲ್ಲ ಅನ್ನುವ ಕಾರಣಕ್ಕಾಗಿ ಪ್ರಸಕ್ತ ಮಕ್ಕಳು ಆತ್ಮಹತ್ಯೆ ಮಾಡುವುದು ಘೋರ ದುರಂತವಾಗಿದೆ. ಭವಿಷ್ಯದ ಪ್ರಜೆಗಳಿಗೆ ಅಂಕಗಳಷ್ಟೇ ಮುಖ್ಯವೇ...? ಇಂದಿನ ಮಕ್ಕಳನ್ನು ರೇಸಿನ ಕುದುರೆಗಳಾಗಿ ಬೆಳೆಸುವುದು ದೊಡ್ಡ ಆತಂಕವಾಗಿದೆ. ಮನುಜರಲ್ಲಿ ಸಮಸ್ಯೆಗಳೆಂಬುದಿಲ್ಲ, ಇರುವುದೆಲ್ಲಾ ಸವಾಲುಗಳು ಮಾತ್ರ. ಆದ್ದರಿಂದ ಸಮಸ್ಯೆಗಳನ್ನು ಬಗೆಹರಿಸಲು ಪ್ರತಿಯೊಂದು ಸವಾಲುಗಳಿಗೆ ಉತ್ತರ ಹುಡುಕಿಕೊಳ್ಳುವಷ್ಟು ಬುದ್ಧಿವಂತರು ನಾವಾಗಬೇಕು. ಆ ಮೂಲಕ ಬದುಕು ನಮಗೆ ಹೊಸ ಜೀವನವನ್ನು ಕಲಿಸುವುದು ಎಂದು ಹಿರಿಯ ಸಾಹಿತಿ, ವೈಶಿಷ್ಟ್ಯಪೂರ್ಣ ಬರಹಗಾರ್ತಿ ನೇಮಿಚಂದ್ರ ಮಲ್ಹೋತ್ರ ತಿಳಿಸಿದರು.



ಮೈಸೂರು ಅಸೋಸಿಯೇಶನ್ ಮುಂಬಯಿ ಸಹಯೋಗದೊಂದಿಗೆ ಕನ್ನಡ ಲೇಖಕಿಯರ ಬಳಗ ಮುಂಬಯಿ 'ಸೃಜನಾ' ಇಂದಿಲ್ಲಿ ಸಂಜೆ ಮಾಟುಂಗಾ ಪೂರ್ವದ ಮೈಸೂರು ಅಸೋಸಿಯೇಶನ್‌ನ ಕಿರು ಸಭಾಗೃಹದಲ್ಲಿ ಆಯೋಜಿಸಿದ್ದ ಸಾಹಿತ್ಯ ಸಂವಾದ ಕಾರ್ಯಕ್ರಮವನ್ನುದ್ದೇಶಿಸಿ ವಿಜ್ಞಾನ, ಮಹಿಳಾ ಸಂವೇದನೆ, ಪ್ರವಾಸ ಕಥನ,ಸಣ್ಣಕತೆ, ಕಾದಂಬರಿ ಹಾಗೂ ವಿಚಾರಪೂರ್ಣ ಲೇಖನಗಳ ಮೂಲಕ ಬದುಕು ಬದಲಿಸುವಂತಹ ಸಕಾರಾತ್ಮಕ ಅಂಕಣಗಾರ್ತಿ, ಬರಹಗಳ ಮೂಲಕ ಕನ್ನಡ ಸಾಹಿತ್ಯ ಲೋಕಕ್ಕೆ ಅಪಾರ ಕೊಡುಗೆ ನೀಡಿದ ನೇಮಿಚಂದ್ರ ಅವರು 'ಸೃಜನಾ' ಸದಸ್ಯರೊಂದಿಗೆ ಸಾಹಿತ್ಯಕ ವಿಚಾರ, ವಿಷಯಗಳನ್ನು ಹಂಚಿಕೊಂಡು ಹಲವಾರು ವಿಷಯಗಳ ಬಗ್ಗೆ ಮಾಹಿತಿಯನ್ನಿತ್ತರು.

'ಸೃಜನಾ' ಸಂಚಾಲಕಿ ಪದ್ಮಜಾ ಮಣ್ಣೂರ್, ಕಾರ್ಯದರ್ಶಿ ಲತಾ ಸಂತೋಷ್ ಶೆಟ್ಟಿ ಮುದ್ದುಮನೆ, ಕೋಶಾಧಿಕಾರಿ ಡಾ। ದಾಕ್ಷಾಯಣಿ ಯಡಹಳ್ಳಿ, ಹಿರಿಯ ಸದಸ್ಯೆ ಶ್ಯಾಮಲಾ ಮಾಧವ್ ವೇದಿಕೆಯಲ್ಲಿದ್ದು, ಸಂವಾದದಲ್ಲಿ ಪತ್ರಕರ್ತೆ ಸಿ.ಜಿ ಮಂಜುಳಾ ಪಾಲ್ಗೊಂಡು ಸಾಹಿತ್ಯ ಕ್ಷೇತ್ರದ ತನ್ನ ಅನುಭವಗಳನ್ನು ಹಂಚಿಕೊಂಡರು.

ಸೃಜನಾ ಮಾಜಿ ಸಂಚಾಲಕಿ ಶಾರದಾ ಅಂಬೇಸಂಗೆ ಮತ್ತಿತರರು ಉಪಸ್ಥಿತರಿದ್ದು ಲಲಿತಾ ಅಂಗಡಿ ಪ್ರಭು ಪ್ರಾರ್ಥನೆಯನ್ನಾಡಿದರು. ಹಿರಿಯ ಸದಸ್ಯೆ ಸುಮಾ ದ್ವಾರಕಾನಾಥ್ ಮತ್ತು ಸಹ ಸಂಚಾಲಕಿ ಡಾ। ಜಿ.ಪಿ ಕುಸುಮಾ ಅತಿಥಿಗಳನ್ನು ಪರಿಚಯಿಸಿದರು. ಲತಾ ಸಂತೋಷ್ ಶೆಟ್ಟಿ ಸ್ವಾಗತಿಸಿ, ಕಾರ್ಯಕ್ರಮ ನಿರೂಪಿಸಿ ಧನ್ಯವದಸಲ್ಲಿಸಿದರು.

## ಪ.ಬಂಗಾಳ: 1.69 ಕೋಟಿ ಜಾತಿ ಪ್ರಮಾಣಪತ್ರ ಮರು ಪರಿಶೀಲನೆಗೆ ಆದೇಶ

**ಕೋಲ್ಕತ್ತಾ, ಮೇ 16:** ಪಶ್ಚಿಮ ಬಂಗಾಳದಲ್ಲಿ 2011ರಿಂದ ಈವರೆಗೆ ವಿತರಿಸಲಾಗಿರುವ ಎಲ್ಲ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಇತರ ಹಿಂದುಳಿದ ವರ್ಗಗಳ ಜಾತಿ ಪ್ರಮಾಣ ಪತ್ರಗಳನ್ನು ಸಮಗ್ರವಾಗಿ ಮರುಪರಿಶೀಲನೆ ನಡೆಸಲು ಅಲ್ಲಿನ ಬಿಜೆಪಿ ಸರ್ಕಾರ ಆದೇಶಿಸಿದೆ.

ಕಳೆದ 14 ವರ್ಷಗಳ ಅವಧಿಯಲ್ಲಿ ವಿತರಿಸಲಾದ ಈ ದಾಖಲೆಗಳ ಸತ್ಯಾಸತ್ಯತೆ ಮತ್ತು ಸಿಂಧುತ್ವದ ಬಗ್ಗೆ ಹಲವು ಗಂಭೀರ ಪ್ರಶ್ನೆಗಳು ಹಾಗೂ ನಕಲಿ ದಾಖಲೆಗಳ ಸೃಷ್ಟಿಯ ಆರೋಪಗಳು ಕೇಳಿಬಂದಿವೆ ಎಂದು ಸರ್ಕಾರ ಹೇಳಿಕೊಂಡಿದೆ. ಹಿಂದಿನ ಟಿಎಂಸಿ ಸರ್ಕಾರದ ಆಡಳಿತಾವಧಿಯಲ್ಲಿ ಜಾತಿ ಪ್ರಮಾಣಪತ್ರಗಳ ವಿತರಣೆಯಲ್ಲಿ ಬೃಹತ್ ಪ್ರಮಾಣದ ಅಕ್ರಮಗಳು ಮತ್ತು ಭ್ರಷ್ಟಾಚಾರ ನಡೆದಿವೆ ಎಂದೂ ಬಿಜೆಪಿ ಆರೋಪಿಸಿದೆ. ಇದೇ ವಾದದ ಮೇಲೆ ದಲಿತರು, ಹಿಂದುಳಿದವರನ್ನು ಸರ್ಕಾರಿ ಸೌಲಭ್ಯಗಳಿಂದ ವಂಚಿಸಲು ಮುಂದಾಗಿದೆ. ಎಸ್‌ಐಆರ್‌ನ ಮುಂದುವರಿಕೆಯಾಗಿ ಜನರ ಹಕ್ಕುಗಳನ್ನು ಕಸಿದುಕೊಳ್ಳುವ ಮತ್ತೊಂದು ಕುಕೃತ್ಯ ಎಸಗುತ್ತಿದೆ ಎಂದು ಆಕ್ರೋಶ ವ್ಯಕ್ತವಾಗುತ್ತಿದೆ.

ಸರ್ಕಾರದ ಅಂಕಿ–ಅಂಶಗಳ ಪ್ರಕಾರ, ಈ ನಿರ್ದಿಷ್ಟ ಅವಧಿಯಲ್ಲಿ ರಾಜ್ಯಾದ್ಯಂತ ಸುಮಾರು 1.69 ಕೋಟಿ ಜಾತಿ ಪ್ರಮಾಣಪತ್ರಗಳನ್ನು ವಿತರಿಸಲಾಗಿದೆ. ಇವುಗಳಲ್ಲಿ ಹೆಚ್ಚಿನ ಪ್ರಮಾಣ ಪತ್ರಗಳನ್ನು ಸರ್ಕಾರದ ಜನಸಂಪರ್ಕ ಕಾರ್ಯಕ್ರಮವಾದದು ಆರೆ ಸರ್ಕಾರ್ ಶಿಬಿರಗಳ ಮೂಲಕ ಸಾರ್ವಜನಿಕರಿಗೆ ಹಂಚಿಕೆ ಮಾಡಲಾಗಿತ್ತು. ಸರ್ಕಾರದ ಕ್ರಮದ ಕುರಿತು ಪ್ರತಿಕ್ರಿಯಿಸಿರುವ ರಾಜ್ಯ ಬುಡಕಟ್ಟು ಅಭಿವೃದ್ಧಿ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವ ಕ್ಷುದಿರಾಮ್ ತುಡು. ಹಿಂದಿನ ಸರ್ಕಾರದ ಅವಧಿಯಲ್ಲಿ ಗಣನೀಯ ಸಂಖ್ಯೆಯಲ್ಲಿ ನಕಲಿ ಮತ್ತು ನಿಯಮಬಾಹಿರ ಎಸ್ಸಿ, ಎಸ್ಟಿ ಹಾಗೂ ಒಬಿಸಿ ಪ್ರಮಾಣಪತ್ರಗಳನ್ನು ಸೃಷ್ಟಿಸಲಾಗಿದೆ. ಅರ್ಹರಲ್ಲದ ಅನೇಕ ವ್ಯಕ್ತಿಗಳು ಈ ನಕಲಿ ಪ್ರಮಾಣಪತ್ರಗಳನ್ನು ಬಳಸಿಕೊಂಡು ಸರ್ಕಾರಿ ಸೌಲಭ್ಯಗಳು, ಸಬ್ಸಿಡಿಗಳು ಹಾಗೂ ಮೀಸಲಾತಿಗಳ ಪ್ರಯೋಜನಗಳನ್ನು ಅಕ್ರಮವಾಗಿ ಪಡೆದುಕೊಂಡಿದ್ದಾರೆ. ಅಲ್ಲದೆ, ಇಂತಹ ನಕಲಿ ಪ್ರಮಾಣಪತ್ರಗಳನ್ನು ಪರಿಶೀಲಿಸದೆ ಬೇಜವಾಬ್ದಾರಿಯಿಂದ ವಿತರಿಸಿದ ಮತ್ತು ಅದಕ್ಕೆ ಸಮ್ಮತಿ ಸೂಚಿಸಿದ ಉನ್ನತ ಅಧಿಕಾರಿಗಳ ವಿರುದ್ಧವೂ ಸರ್ಕಾರ ಮುಂಬರುವ ದಿನಗಳಲ್ಲಿ ಅತ್ಯಂತ ಕಠಿಣ ಕಾನೂನು ಕ್ರಮ ಜರುಗಿಸಲಿದೆ ಎಂದು ಹೇಳಿದ್ದಾರೆ.

ಸರ್ಕಾರದ ಆದೇಶದ ಬೆನ್ನಲ್ಲೇ ರಾಜ್ಯದಲ್ಲಿ ಗೊಂದಲ ಉಂಟಾಗಿದೆ. ಗೊಂದಲದ ನಡುವೆಯೇ, ರಾಜ್ಯ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯು ಎಲ್ಲ ಜಿಲ್ಲಾಧಿಕಾರಿಗಳಿಗೆ ಪತ್ರ ಬರೆದಿದ್ದು, ತಕ್ಷಣದಿಂದಲೇ ಜಾರಿಗೆ ಬರುವಂತೆ ಮರುಪರಿಶೀಲನಾ ಪ್ರಕ್ರಿಯೆಯನ್ನು ಜಿಲ್ಲಾ ಮಟ್ಟದಲ್ಲಿ ಆರಂಭಿಸುವಂತೆ ನಿರ್ದೇಶನ ನೀಡಿದೆ. ಸಬ್–ಡಿವಿಜನಲ್ ಅಧಿಕಾರಿಗಳು ಮತ್ತು ಜಿಲ್ಲಾ ಮಟ್ಟದ ಉನ್ನತ ಅಧಿಕಾರಿಗಳ ತಂಡವು ಪ್ರತಿಯೊಂದು ಪ್ರಮಾಣಪತ್ರದ ಮೂಲ ದಾಖಲೆಗಳನ್ನು ಸೂಕ್ಷ್ಮವಾಗಿ ಪರಿಶೀಲಿಸಬೇಕು. ತನಿಖೆಯ ವೇಳೆ ಯಾವುದೇ ಪ್ರಮಾಣಪತ್ರವನ್ನು ಸುಳ್ಳು ಮಾಹಿತಿ, ನಕಲಿ ದಾಖಲೆ ಅಥವಾ ಕಾನೂನುಬಾಹಿರ ಆಡಳಿತಾತ್ಮಕ ಪ್ರಕ್ರಿಯೆಗಳ ಮೂಲಕ ಪಡೆಯಲಾಗಿದೆ ಎಂಬುದು ಸಾಬೀತಾದರೆ, ಅಂತಹ ಎಲ್ಲ ಪ್ರಮಾಣಪತ್ರಗಳನ್ನು ಕಾನೂನಿನ ಅಡಿಯಲ್ಲಿ ತಕ್ಷಣವೇ ರದ್ದುಗೊಳಿಸಬೇಕು ಎಂದು ಸರ್ಕಾರ ತಿಳಿಸಿದೆ.

ವಿಶೇಷವಾಗಿ, ಇತ್ತೀಚೆಗೆ ನಡೆದ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಪ್ರಕ್ರಿಯೆಯ ಸಂದರ್ಭದಲ್ಲಿ ಯಾವ ಮತದಾರರನ್ನು ಮತಪಟ್ಟಿಯಿಂದ ಹೊರಹಾಕಲಾಗಿದೆಯೋ, ಅಂತಹವರನ್ನು ಈ ಪರಿಶೀಲನೆಯು ಗುರಿಯಾಗಿಸಿಕೊಂಡಿದೆ. ಮತದಾರರ ಪಟ್ಟಿಯಿಂದ ಹೊರಬಿದ್ದಿರುವ ವ್ಯಕ್ತಿಗಳ ಜಾತಿ ಪ್ರಮಾಣಪತ್ರಗಳು ಸೇರಿದಂತೆ ಅವರ ಕುಟುಂಬದ ಆಶ್ರಿತರು ಹೊಂದಿರುವ ಎಲ್ಲ ಸಾಮಾಜಿಕ ದಾಖಲೆಗಳನ್ನು ಅಧಿಕಾರಿಗಳು ಕೂಲಂಕಷವಾಗಿ ಮರುಪರಿಶೀಲಿಸಲಿದ್ದು, ಅಕ್ರಮ ಪತ್ತೆಯಾದರೆ ಅವುಗಳನ್ನು ರದ್ದುಪಡಿಸಲು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುತ್ತಿದೆ.

# ಸನಾತನ ಧರ್ಮ, ಲೋಕ ಕಲ್ಯಾಣಾರ್ಥವಾಗಿ ಮಾಜಿ ಸಂಸದ ಗೋಪಾಲ್ ಸಿ.ಶೆಟ್ಟಿ ನೇತೃತ್ವದಲ್ಲಿ ಕಾಂದಿವಲಿಯಲ್ಲಿ ವೈಭವೋಪೇತವಾಗಿ ಸಂಪನ್ನಗೊಂಡ ಶನೀಶ್ಚರ ಜಯಂತಿ

**ಮುಂಬಯಿ, ಮೇ.16:** ಲೋಕ ಕಲ್ಯಾಣಾರ್ಥಕ್ಕಾಗಿ ಶ್ರೀಗೋಪಾಲ್ ಸಿ.ಶೆಟ್ಟಿ (ಮಾಜಿ ಸಂಸದ) ತುಳು–ಕನ್ನಡಿಗರ ಅಭಿಮಾನಿ ಬಳಗವು ಪೊಯಿಸರ್ ಜಿಮ್ಖಾನ, ಪೊಯಿಸರ್ ಯುವಕ ಮಂಡಲ, ಜನಮಿತ್ರ ಫೌಂಡೇಶನ್‌ನ ಸಹಯೋಗದೊಂದಿಗೆ ಸ್ಥಾನೀಯ ಜನಸೇವಕ, ಉತ್ತರ–ಮುಂಬಯಿ ಲೋಕಸಭಾ ಕ್ಷೇತ್ರದ ಮಾಜಿ ಸಂಸದ ಗೋಪಾಲ್ ಸಿ.ಶೆಟ್ಟಿ ನೇತೃತ್ವದಲ್ಲಿ ವಾರ್ಷಿಕ ಶ್ರೀ ಶನೀಶ್ವರ ಜಯಂತ್ಯುತ್ಸವವನ್ನು ಇಂದಿಲ್ಲಿ ಶನಿವಾರ ಸಂಜೆ ಕಾಂದಿವಲಿ ಪಶ್ಚಿಮದ ಮಹಾವೀರ ನಗರದ ಸಪ್ತಾಹ ಮೈದಾನದಲ್ಲಿ ವಿವಿಧ ಧಾರ್ಮಿಕ ಕಾರ್ಯಕ್ರಮಗಳೊಂದಿಗೆ ವೈಭವಪೇತವಾಗಿ ಸಂಪನ್ನಗೊಂಡಿತು.

ಮಹಾನಗರದಲ್ಲಿನ ಹೆಸರಾಂತ ಸಂಘಟಕ, ತುಳು–ಕನ್ನಡಿಗರ ಅಭಿಮಾನಿ ಬಳಗದ ಪ್ರಮುಖ ರೂವಾರಿ, ಉತ್ತರ ಮುಂಬಯಿ ಜಿಲ್ಲಾ ಬಿಜೆಪಿ ಉಪಾಧ್ಯಕ್ಷ ಎರ್ಮಾಳ್ ಹರೀಶ್ ಶೆಟ್ಟಿ ಅವರ ಸಂಯೋಜನೆಯಲ್ಲಿ ಆಯೋಜಿಸಲ್ಪಟ್ಟ ಧಾರ್ಮಿಕ ಕಾರ್ಯಕ್ರಮದಲ್ಲಿ ಸಾರ್ವಜನಿಕ ಶ್ರೀ ಶನೀಶ್ವರ ಜಯಂತ್ಯುತ್ಸವ ನಡೆಸಲ್ಪಟ್ಟಿತು. ಪುಷ್ಪಾಲಂಕೃತ



ಮಂಟಪದಲ್ಲಿ ಅಲಂಕೃತ ಶ್ರೀದೇವರು, ಪ್ರತಿಷ್ಠಾಪಿತ ಕಲಶಕ್ಕೆ ಗೋಪಾಲ್ ಸಿ.ಶೆಟ್ಟಿ ಮತ್ತು ಉಷಾ ಗೋಪಾಲ ಶೆಟ್ಟಿ ದಂಪತಿ, ರಾಕೇಶ್ ಜಿ.ಶೆಟ್ಟಿ, ಐಶ್ವರ್ಯ ಆರ್.ಶೆಟ್ಟಿ, ಜ್ಯೋತಿ ಸುದರ್ಶನ್, ಸುದರ್ಶನ್ ಶೆಟ್ಟಿ ಮತ್ತು ಪರಿವಾರ, ಕರುಣಾಕರ ಎಸ್.ಶೆಟ್ಟಿ (ಪೊಯಿಸರ್ ಜಿಮ್ಖಾನ), ಎರ್ಮಾಳ್ ಹರೀಶ್ ಶೆಟ್ಟಿ, ಪ್ರತಿಭಾ ಹರೀಶ್ ಶೆಟ್ಟಿ ಸೇರಿದಂತೆ ಅನೇಕರು ಪೂಜಾದಿಗಳ ಸಹಭಾಗಿತ್ವ ವಹಿಸಿದರು. ವಿದ್ವಾನ್ ವೇ। ಮೂ। ಕೆ.ಕೃಷ್ಣರಾಜ್ ತಂತ್ರಿ ಬೊರಿವಿಲಿ ವಿವಿಧ ಪೂಜೆಗಳನ್ನು ನೆರವೇರಿಸಿ ಸದ್ಭಕ್ತರನ್ನು ಹರಸಿದರು.

ವೈಶಾಖ ಮಾಸದ ಅಮಾವಾಸ್ಯೆಯಾದ ಇಂದು ಕಲಿಯುಗದ ಆರಾಧ್ಯ ದೇವರು, ಕಷ್ಟ ಕಾರ್ಪಣ್ಯದಿಂದ ಬಳಲಿದ ಜನರಿಗೆ ತನ್ನ ಕರುಣಾದೃಷ್ಟಿ ಎಂಬ ಶ್ರೀರಕ್ಷೆಯನ್ನಿತ್ತು ರಕ್ಷಿಸುವ ದಯಾಮಯಿ, ನವಗ್ರಹ ಶ್ರೇಷ್ಠನೂ ಆದ ಶ್ರೀ ಶನೀಶ್ವರನ ಜನ್ಮಜಯಂತಿಯ (13 ವರ್ಷಗಳ ಬಳಿಕ ಈ ಬಾರಿ ಶನಿವಾರವೇ ಬಂದಿರುವ) ವೈಶಿಷ್ಟ್ಯಪೂರ್ಣ, ಮಹತ್ವದ ದಿನವಾಗಿದೆ. ಶನಿ ಜಯಂತಿ ಹಿಂದೂ ಧರ್ಮದಲ್ಲಿ ಬಹಳ ಮಹತ್ವದ ದಿನವಾಗಿದ್ದು, ಸೂರ್ಯಪುತ್ರನಾದ ಶನಿದೇವನನ್ನು ನ್ಯಾಯದ ದೇವತೆ ಎನ್ನಲಾಗುತ್ತಿದ್ದು, ಶನಿ ಮನುಷ್ಯರ ಕರ್ಮಗಳಿಗೆ ಅನುಗುಣವಾಗಿ ಫಲವನ್ನು ನೀಡುತ್ತಾನೆ. ಈ ದಿನದಂದು ಶನಿದೇವನನ್ನು ಭಕ್ತಿಯಿಂದ ಪೂಜಿಸುವುದರಿಂದ ಜೀವನದಲ್ಲಿ ಎದುರಾಗುವ ಕಷ್ಟಗಳು ಮತ್ತು ಅಡೆತಡೆಗಳು ನಿವಾರಣೆಯಾಗುತ್ತವೆ ಎಂಬ ನಂಬಿಕೆ ನಮ್ಮದಾಗಿದೆ. ಈ ಶುಭದಿನದ ಪೂಜೆಯು ಮನಸ್ಸಿಗೆ ಶಾಂತಿ ನೀಡುವುದಲ್ಲದೆ, ವ್ಯಕ್ತಿಯ ಜಾತಕದಲ್ಲಿರುವ ಗ್ರಹದೋಷಗಳ ತೀವ್ರತೆ ಕಡಿಮೆ ಮಾಡಲು ಸಹಾಯ ಮಾಡುತ್ತದೆ ಎಂದು ವಿದ್ವಾನ್ ಕೃಷ್ಣರಾಜ್ ತಂತ್ರಿ ತಿಳಿಸಿದರು.

ಸನಾತನ ಧರ್ಮದ ನಂಬಿಕೆಯಂತೆ ಲೋಕ ಕಲ್ಯಾಣಾರ್ಥವಾಗಿ ಆಯೋಜಿಸಿದ ಈ ಪುಣ್ಯ ಧಾರ್ಮಿಕ ಕಾರ್ಯವು ಆಯೋಜಿಸಲಾಗಿದೆ. ವಿಶೇಷವಾಗಿ ಶನಿ ದೆಸೆ, ಅಷ್ಟಮ ಶನಿಯ ಪ್ರಭಾವದಿಂದ ಬಳಲುತ್ತಿರುವ ಭಕ್ತರು ಈ ದಿನ ಶನಿ ಶಾಂತಿ ಪೂಜೆ ನಡೆಸುತ್ತಾರೆ. ಶನಿ ಜಯಂತಿಯು ಕೇವಲ ಆಚರಣೆಯಷ್ಟೇ ಅಲ್ಲ, ಪ್ರತಿಯೊಬ್ಬರಿಗೂ ಶಿಸ್ತು, ತಾಳ್ಮೆ ಮತ್ತು ಸತ್ಯದ ಹಾದಿಯಲ್ಲಿ ನಡೆಯಬೇಕೆಂಬ ಸಂದೇಶವನ್ನು ನೀಡುತ್ತದೆ. ದಾನ–ಧರ್ಮ ಮಾಡುವುದು, ವಿಶೇಷವಾಗಿ ಬಡವರಿಗೆ ಆಹಾರ ಮತ್ತು ಬಟ್ಟೆಯನ್ನು ನೀಡುವುದು, ಜನಸೇವೆ ಇತ್ಯಾದಿಗಳು ಈ ದಿನದ ಪವಿತ್ರಕಾರ್ಯಗಳಾಗಿವೆ. ಶನಿದೇವನ ಕೃಪೆಯಿದ್ದರೆ ಕಠಿಣ ಪರಿಶ್ರಮಕ್ಕೆ ತಕ್ಕ ಪ್ರತಿಫಲ ಖಂಡಿತವಾಗಿ ದೊರೆಯುತ್ತದೆ ಎಂಬುದು ನನ್ನಂತಹ ಭಕ್ತನ ದೃಢ ವಿಶ್ವಾಸವಾಗಿದೆ ಎಂದು ಗೋಪಾಲ್ ಸಿ.ಶೆಟ್ಟಿ ತಿಳಿಸಿದರು.

ಸನಾತನ ಧರ್ಮದ ಪೂಜಾದಿಗಳು, ಹವನ, ಜಪ, ಶ್ಲೋಕ, ಕಲಶ ಪ್ರತಿಷ್ಠಾಪನೆ, ಶನಿದೇವರ ಸಂಪೂರ್ಣ ಗ್ರಂಥ ಪಾರಾಯಣ, ರಾತ್ರಿ ಮಂಗಳಾರತಿ ಹಾಗೂ ತೀರ್ಥ ಪ್ರಸಾದ ವಿತರಣೆ ನೆರವೇರಿದ್ದು, ವಾದ್ಯಘೋಷಗಳ ನಿನಾದ, ವಿದ್ವಾನರು ಮತ್ತು



ಭಕ್ತರ ವೇದಘೋಷಗಳೊಂದಿಗೆ ವೈಭವಪೇತವಾಗಿ ಸಂಪನ್ನಗೊಂಡ ಶನೀಶ್ವರ ಜಯಂತಿಯಲ್ಲಿ ನೂರಾರು ಗಣ್ಯರು ವಿಶೇಷ ಅತಿಥಿಗಳಾಗಿ ಉಪಸ್ಥಿತರಿದ್ದು ಗೋಪಾಲ್ ಶೆಟ್ಟಿ ಪರಿವಾರವು ಭಕ್ತಾದಿಗಳಿಗೆ ಸುಖಾಗಮನ ಬಯಸಿದರು. ಆದಿಯಲ್ಲಿ ಪೇಟೆಮನೆ ಪ್ರಕಾಶ್ ಶೆಟ್ಟಿ, ರಘುನಾಥ್ ಎನ್.ಶೆಟ್ಟಿ, ಪ್ರಕಾಶ್ ಶೆಟ್ಟಿ, ರವೀಂದ್ರ ಶೆಟ್ಟಿ ಹಾಗೂ ಮಾಜಿ ಸಂಸದರ ನೂರಾರು ಅಭಿಮಾನಿಗಳು, ಹಿತೈಷಿಗಳು ಸೇರಿದಂತೆ ಶನೈಶ್ವರ ಭಕ್ತ ಬಳಗ, ಮುಂಬಯಿ ಅಲ್ಲಿನ ವಿವಿಧ ಧಾರ್ಮಿಕ ಮತ್ತು ಸಾಮಾಜಿ ಸಂಸ್ಥೆಗಳ ಮುಖ್ಯಸ್ಥರು, ಗಣ್ಯರನೇಕರು ಪಾಲ್ಗೊಂಡು ತೀರ್ಥ ಪ್ರಸಾದ ಸ್ವೀಕರಿಸಿ ಛಾಯಾಸುತನ ಅನುಗ್ರಹಕ್ಕೆ ಪಾತ್ರರಾದರು.




ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನ ವಿ.ವಿ ಮತ್ತು ಕಿದ್ವಾಯಿ ಸಂಸ್ಥೆಯ ನಿರ್ದೇಶಕ ಡಾ.ಪ್ರಭಾಕರ್, ಕಿದ್ವಾಯಿ ಸಂಸ್ಥೆಯ ನಿವೃತ್ತ ನಿರ್ದೇಶಕ ಮತ್ತು ಯೆನೋಪೆಯಾ ವಿ.ವಿ.ಉಪಕುಲಪತಿ ಡಾ.ವಿಜಯಕುಮಾರ್, ಕಿದ್ವಾಯಿಯ ನಿವೃತ್ತ ಪ್ರೊಫೆಸರ್ ಹಾಗೂ ಪದ್ಮಶ್ರೀ ಪ್ರಶಸ್ತಿ ಪುರಸ್ಕೃತ ಡಾವಿಜಯಲಕ್ಷ್ಮಿ ಅವರನ್ನು ಬೆಂಗಳೂರಿನಲ್ಲಿ ಕಿದ್ವಾಯಿ ಆಸ್ಪತ್ರೆಯ ವಿಭಾಗದ ಮುಖ್ಯಸ್ಥ ಡಾ.ಶ್ರೀನಿವಾಸ್ ಅವರು ಆತ್ಮೀಯವಾಗಿ ಸನ್ಮಾನಿಸಿದರು.

# ಹಿರಿಯರಿಗೆ ಪಿಂಚಣಿ ನೀಡಲು ಯೋಗ್ಯತೆ ಇಲ್ಲದ ಸರ್ಕಾರದಿಂದ ಯಾವ ಪುರುಷಾರ್ಥಕ್ಕೆ ಸಾಧನಾ ಸಮಾವೇಶ: ಅಶೋಕ್ ಪ್ರಶ್ನೆ

**ಬೆಂಗಳೂರು, ಮೇ 16:** ಹಿರಿಯ ನಾಗರಿಕರಿಗೆ ಪಿಂಚಣಿ ಕೊಡಲು ಯೋಗ್ಯತೆ ಇಲ್ಲದ ಕಾಂಗ್ರೆಸ್ ಸರ್ಕಾರ ಯಾವ ಪುರುಷಾರ್ಥಕ್ಕೆ ಸಾಧನಾ ಸಮಾವೇಶ ಮಾಡುತ್ತಿದೆ ಎಂದು ವಿಧಾನಸಭೆ ಪ್ರತಿಪಕ್ಷದ ನಾಯಕ ಆರ್.ಅಶೋಕ್ ಸರ್ಕಾರವನ್ನು ತರಾಟೆಗೆ ತೆಗೆದುಕೊಂಡಿದ್ದಾರೆ.

ಸುದ್ದಿಗೋಷ್ಠಿಯಲ್ಲಿ, ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು ಮೇ 20ಕ್ಕೆ ಮೂರು ವರ್ಷ ಪೂರೈಸುತ್ತದೆ. ಈ ಸಂದರ್ಭದಲ್ಲಿ ಸಮಾವೇಶ ಆಯೋಜಿಸಿದೆ. ಪಿಂಚಣಿ ಕೊಡಲು ಆಗದಿರುವುದಕ್ಕೆ ಬದುಕಿರುವವರನ್ನೇ ಸಾಯಿಸುವ ಪರಿಸ್ಥಿತಿ ತಂದೊಡ್ಡಿದ್ದಾರೆ. ಸತ್ತವರ ಹೆಸರನ್ನು ಫಲಾನುಭವಿಗಳ ಪಟ್ಟಿಯಿಂದ ಅಳಿಸಿ ಹಾಕಿದ್ದೇವೆ. ಅದಕ್ಕೆ ಕೊಡಲು ಆಗುತ್ತಿಲ್ಲ ಎಂದು ಸಬೂಬು ಹೇಳುತ್ತಿದ್ದಾರೆ. ಪಿಂಚಣಿ ಕೊಡಲು ಯೋಗ್ಯತೆ ಇಲ್ಲವೇ ಎಂದು ಹರಿಹಾಯ್ದರು.

ಗೃಹಸಚಿವ ಪರಮೇಶ್ವರ್ ಹಾಗೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸೇರಿ ಸಚಿವರನ್ನು ಕರೆಯುತ್ತಿದ್ದಾರೆ. ನಿಮಗೆ ಪಿಂಚಣಿ ಕೊಡಲು ಆಗುತ್ತಿಲ್ಲ. ನಾವು ನುಡಿದಂತೆ ನಡೆದ ಸರ್ಕಾರ ಅಂತೀರಲ್ಲ ಎಂದು ವ್ಯಂಗ್ಯವಾಡಿದರು.

ಸುಮಾರು 81 ಲಕ್ಷ ಫಲಾನುಭವಿಗಳಿಗೆ ಪಿಂಚಣಿಯನ್ನೇ ಕೊಟ್ಟಿಲ್ಲ. ಒಂದು ಕೋಟಿ ಜನರಿಗೆ ಪಿಂಚಣಿ ಹಣವನ್ನು ತಕ್ಷಣವೇ ಬಿಡುಗಡೆ ಮಾಡಿ. ಸಾಧನ ಸಮಾವೇಶ ಮಾಡುವ ಮುಂಚೆ ಆಶಾ ಕಾರ್ಯಕರ್ತೆಯರಿಗೆ ಸಹಾಯಧನ ಕೊಡಿ. ಸಾರಿಗೆ ನೌಕರರ ಬೇಡಿಕೆಗಳನ್ನು ಬಗೆಹರಿಸಿ. ಜನ ದಾರಿಯಲ್ಲಿ ನಿಲ್ಲಿಸಿ ಪ್ರಶ್ನೆ ಮಾಡುವ ಸಂದರ್ಭ ಬರಲಿದೆ ಎಂದು ಅಶೋಕ್ ಎಚ್ಚರಿಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯನವರೇ, ನಿಮ ಪ್ರಣಾಳಿಕೆಯಂತೆ ನಡೆದುಕೊಂಡಿದ್ದೀರಾ, ಅಂಗನವಾಡಿ ಕಾರ್ಯಕರ್ತೆಯರು ಬೀದಿಗಳಿದು ಹೋರಾಟ ಮಾಡುತ್ತಿದ್ದಾರೆ. ಸಾರಿಗೆ ನೌಕರರಿಗೆ ಕೊಟ್ಟ ಮಾತನ್ನು ತಪ್ಪಿದ್ದೀರಿ. ಸಾರಿಗೆ ನೌಕರರು ಕೂಡ ಪ್ರತಿಭಟನೆ ಮಾಡುತ್ತಿದ್ದಾರೆ. ಇವರ ಜೊತೆಗೆ ಒಂದು ಕೋಟಿ ಜನರಿಗೆ ಮೋಸ ಮಾಡಿದ್ದೀರಿ ಎಂದು ವಾಗ್ದಾಳಿ ನಡೆಸಿದರು.



ರಾಜ್ಯಸರ್ಕಾರದ ಖಜಾನೆ ಸಂಪೂರ್ಣ ಖಾಲಿಯಾಗಿದೆ. ಲೂಟಿ ಕಮಿಷನ್‌ಗೆ ಕಡಿವಾಣವೇ ಇಲ್ಲದಂತಾಗಿದೆ. ಹಾಗಾಗಿ ಪಿಂಚಣಿಯನ್ನು ಸ್ಥಗಿತಗೊಳಿಸಲಾಗಿದೆ. ಸಿದ್ದರಾಮಯ್ಯ ಅಧಿಕಾರಕ್ಕೆ ಬರುವಾಗ ಬರಪುರ ಭರವಸೆ ನೀಡಿದ್ದರು. 15 ದಿನಕೊಮೆ ಜನ ಸ್ಪಂದನೆ ಮಾಡಬೇಕು ಎಂದು ಸಚಿವರಿಗೆ ಹೇಳಿದ್ದರು. ಆದರೆ ಸಚಿವರು 15 ದಿನಕೊಮ್ಮೆ ಕಮೀಷನ್ ಕಲೆಕ್ಷನ್ ಮಾಡುತ್ತಿದ್ದಾರೆ ಎಂದು ಕುಹಕವಾಡಿದರು.

**ಎಸ್‌ಐಆರ್‌ಗೆ ಕಾಂಗ್ರೆಸ್, ಮುಸ್ಲಿಂ ಸಂಘಟನೆಗಳ ವಿರೋಧ:** ಕೇಂದ್ರ ಚುನಾವಣಾ ಆಯೋಗದ ನಿರ್ದೇಶನದಂತೆ ರಾಜ್ಯ ಚುನಾವಣಾ ಆಯೋಗ ವಿಶೇಷ ಮತದಾರ ಪರಿಷ್ಕರಣೆ ನಡೆಸಲು ಮುಂದಾಗಿರು ವುದಕ್ಕೆ ಕಾಂಗ್ರೆಸ್‌ನವರು ವಿರೋಧ ವ್ಯಕ್ತಪಡಿಸುವುದು ಸರಿಯಲ್ಲ.

ಬಾಂಗ್ಲಾದೇಶದಿಂದ ಅಕ್ರಮವಾಗಿ 2 ಕೋಟಿ ಜನರು ಬಂದಿದ್ದಾರೆ. ಪ.ಬಂಗಾಳ, ಬಿಹಾರ, ಕರ್ನಾಟಕದಲ್ಲೂ ಇವರು ಇದ್ದಾರೆ. ಯಾರಾದರೂ ನನಗೆ ಸವಾಲು ಹಾಕಿದರೆ ನಾನು ಕರೆದ್ಯೂದು ತೋರಿಸುತ್ತೇನೆ ಎಂದು ಅಶೋಕ್ ಹೇಳಿದರು. ಸಚಿವ ಜಮೀರ್ ಕೇಳಿದರೆ ಯಾರೂ ಅಕ್ರಮವಾಗಿ ಕರ್ನಾಟಕಕ್ಕೆ ಬಂದಿಲ್ಲ ಎಂದು ಹೇಳುತ್ತಾರೆ. ಇವರು ಬೆಂಗಳೂರು, ಕೊಡಗು, ಚಿಕ್ಕಮಗಳೂರು ಸೇರಿ ಬೇರೆಕಡೆ ಇದ್ದಾರೆ ಎಂದರು.

ಈಗ ಎಸ್‌ಐಆರ್ ನಡೆದರೆ ಹೆಸರುಗಳನ್ನು ಮತದಾರರ ಪಟ್ಟಿಯಿಂದ ತೆಗೆದುಹಾಕಲಾಗುತ್ತದೆ. ಹೀಗಾಗಿಯೇ ಮುಸ್ಲಿಂ ಸಂಘಟನೆಗಳು ವಿರೋಧ ವ್ಯಕ್ತಪಡಿಸುತ್ತಿರಬಹುದು ಎಂದರು.

# ಮೇ 19ರಂದು ತುಮಕೂರು ಸಮಾವೇಶ: ಸಿಎಂ, ಡಿಸಿಎಂಗೆ ಪರಮೇಶ್ವರ್ ಆಹ್ವಾನ

**ಬೆಂಗಳೂರು, ಮೇ .16;** ಕರ್ನಾಟಕ ಕಾಂಗ್ರೆಸ್ ಸರ್ಕಾರ 3 ವರ್ಷ ಪೂರೈಸುತ್ತಿರುವ ಹಿನ್ನೆಲೆ ತುಮಕೂರಿನ ಸರ್ಕಾರಿ ಜೂನಿಯರ್ ಕಾಲೇಜು ಮೈದಾನದಲ್ಲಿ ಮೇ.19ರಂದು ಹಮ್ಮಿಕೊಂಡಿರುವ 'ಪ್ರಗತಿ ಯತ್ತ ಕರ್ನಾಟಕ' ಸಾರ್ಥಕ ಸೇವೆಗಳ ಸಮರ್ಪಣಾ ಕಾರ್ಯಕ್ರಮ ಜರುಗಲಿದೆ.

ಈ ವೇಳೆ ಫಲಾನುಭವಿಗಳಿಗೆ ಹಕ್ಕುಪತ್ರ, ಪಿಂಚಣಿ ಇನ್ನಿತರ ಸೌಕರ್ಯ ವಿತರಿಸಲಾಗುತ್ತದೆ. ಈ ಹಿನ್ನೆಲೆ ಗೃಹ ಸಚಿವ ಜಿ.ಪರಮೇಶ್ವರ ಅವರು ಸಿಎಂ, ಡಿಸಿಎಂ ಸೇರಿದಂತೆ ಪಕ್ಷದ ನಾಯಕರಿಗೆ ಶನಿವಾರ ಖುದ್ದು ಆಹ್ವಾನ ನೀಡಿದರು.

ಸಿಎಂ ಸಿದ್ದರಾಮಯ್ಯ, ಕೆಪಿಸಿಸಿ ಅಧ್ಯಕ್ಷ ಹಾಗೂ ಡಿಸಿಎಂ ಡಿ.ಕೆ.ಶಿವ ಕುಮಾರ್ ಅವರ ನಿವಾಸಕ್ಕೆ ತೆರಳಿ ಆಹ್ವಾನ ನೀಡಿದರು. ಅವರನ್ನು ಅವರ ನಿವಾಸಕ್ಕೆ ತೆರಳಿ ಆಮಂತ್ರಿಸಿದರು. ಡಿಕೆ ಸುರೇಶ್ ಅವರಿಗೆ ಆಮಂತ್ರಣ ತಲುಪಿದೆ. ಈ ಬೃಹತ್ ಕಾರ್ಯಕ್ರಮ ಪ್ರಯುಕ್ತ ಸುದ್ದಿಗೋಷ್ಠಿ ನಡೆಸಿ ಗೃಹ ಸಚಿವರು ವಿವರ ನೀಡಿದ್ದಾರೆ. ತುಮಕೂರಿನ ಸದರಿ ಕಾರ್ಯಕ್ರಮದಲ್ಲಿ ರಾಜ್ಯದ ಜನತೆಗೆ ಆಗಿರುವ ಪ್ರಯೋಜನ ಗಳ ಸೌಲಭ್ಯ ವಿತರಣೆ ಕಾರ್ಯಕ್ರಮವಾಗಿ ಸಾರ್ಥಕ ಸೇವೆಗಳ ಸಮರ್ಪಣೆ ಕಾರ್ಯಕ್ರಮವನ್ನು ಸಾರಿಗೆ ಮುಷ್ಕರ ಕಾರಣದಿಂದಾಗಿ ಮೇ 20ರ ಬದಲಾಗಿ ಕಾರಣಾಂತರ ಗಳಿಂದ ಮುನ್ನಾ ದಿನ ಮೇ.19ಕ್ಕೆ ಅಧಿಕೃತವಾಗಿ ಕಾರ್ಯಕ್ರಮ ನಿಗದಿಯಾಗಿದೆ ಎಂದರು.

ನನೆಗುದಿಗೆ ಬಿದ್ದಿದ್ದ ಹಲವಾರು ಯೋಜನೆಗಳನ್ನು ರಾಜ್ಯ ಸರ್ಕಾರ



ಚಾಲನೆ ನೀಡಿ ಅವುಗಳನ್ನು ಆದ್ಯತಾ ಕಾರ್ಯಕ್ರಮ ಗಳಾಗಿ ತೆಗೆದುಕೊಂಡು ಸಮರ್ಪಕವಾಗಿ ಅನುಷ್ಠಾನಗೊಳಿಸಿದೆ. ಈ ವಿಷಯವನ್ನು ಜನಸಮುದಾಯ ದೊಂದಿಗೆ ಹಂಚಿಕೊಳ್ಳಲಿದೆ ಎಂದರು.

ಪ್ರಮುಖವಾಗಿ ಕಂದಾಯ ಇಲಾಖೆಯಲ್ಲಿ ಬಹುಕಾಲದಿಂದ ಜಮೀನು ವಾರಸುದಾರರು ಸಾಕಷ್ಟು ಸಮಸ್ಯೆಗಳನ್ನು ಎದುರಿಸುತ್ತಿದ್ದರು. ಕಳೆದ ಒಂದೂವರೆ ವರ್ಷದಲ್ಲಿ ತುಮಕೂರು ಜಿಲ್ಲೆಯ ಕಂದಾಯ ಇಲಾಖೆಯಲ್ಲಿ ಅಭೂತಪೂರ್ವ ಅಭಿವೃದ್ಧಿ ಕೆಲಸಗಳು ನಡೆದಿವೆ. ಮೇ 19ರ ಕಾರ್ಯಕ್ರಮದಲ್ಲಿ ಇ–ಪೌತಿ ಖಾತೆ, ದರಖಾಸ್ತು ಪೋಡಿ, ಕಂದಾಯ ಗ್ರಾಮ ಹಕ್ಕುಪತ್ರಗಳು, ಪಿಂಚಣಿ ಸೇರಿದಂತೆ 1,52,492 ಫಲಾನು ಭವಿಗಳಿಗೆ ಹಕ್ಕುಪತ್ರ ಮತ್ತು ಸೌಲಭ್ಯಗಳನ್ನು ವಿತರಿಸಲಾಗುತ್ತಿದೆ. ಕಳೆದ 3 ವರ್ಷಗಳಲ್ಲಿ ರಾಜ್ಯದಲ್ಲಿ ಕಂದಾಯ ಇಲಾಖೆ ವ್ಯಾಪ್ತಿಯಲ್ಲಿ 14 ಲಕ್ಷ ಜನರಿಗೆ ಈ ಸೌಲಭ್ಯಗಳು ದೊರೆತಿವೆ ಎಂದು ಅವರು ತಿಳಿಸಿದರು.

ತುಮಕೂರು ಜಿಲ್ಲೆಯಲ್ಲಿ ಆಗಿರುವ ಇತರೆ ಇಲಾಖೆಗಳ ಅಭಿವೃದ್ಧಿ ಸಂಬಂಧಿಸಿದಂತೆ 682 ಕೋಟಿ ರೂ.ಗಳ ಕಾಮಗಾರಿಗಳಿಗೆ ಅಡಿಗಲ್ಲು ಹಾಗೂ ಉದ್ಘಾಟನೆ ಕಾರ್ಯಕ್ರಮಗಳನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನೆರವೇರಿಸ ಲಿದ್ದಾರೆ ಎಂದು ತಿಳಿಸಿದರು.

ಇದು ಸರ್ಕಾರಿ ಕಾರ್ಯಕ್ರಮ, ಪಕ್ಷಾತೀತ ಕಾರ್ಯಕ್ರಮ ಎಂದು ಪುನರುಚ್ಚರಿಸಿದರು. ಅಂತೆಯೇ ಈ ಕಾರ್ಯಕ್ರಮಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸೇರಿದಂತೆ ಸಚಿವ ಸಂಪುಟದ ಎಲ್ಲಾ ಮಂತ್ರಿಗಳು, ವಿರೋಧ ಪಕ್ಷದ ನಾಯಕರು, ಸಂಸದರು, ಮುಖಂಡರು ಆಗಮಿಸ ಲಿದ್ದಾರೆ. ಕಾರ್ಯಕ್ರಮಕ್ಕೆ ತುಮಕೂರು ಜಿಲ್ಲೆಯ ವಿವಿಧ ತಾಲ್ಲೂಕುಗಳಿಂದ 2 ಲಕ್ಷಕ್ಕೂ ಹೆಚ್ಚು ಜನ ಆಗಮಿಸಲಿದ್ದಾರೆ ಎಂದು ತಿಳಿಸಿದರು.

# ನುಡಿದಂತೆ ನಡೆದಿದ್ದೇವೆ, ಅದಕ್ಕಾಗಿಯೇ ಸಾಧನಾ ಸಮಾವೇಶ: ಶರಣಪ್ರಕಾಶ ಪಾಟೀಲ್ ಸಮರ್ಥನೆ

ಬೆಂಗಳೂರು, ಮೇ 16: ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಮೂರು ವರ್ಷದಲ್ಲಿ ನುಡಿದಂತೆ ನಡೆದಿದೆ. ಅದೇ ಕಾರಣಕ್ಕೆ ಸಾಧನ ಸಮಾವೇಶ ಮಾಡುತ್ತಿದ್ದೇವೆ ಎಂದು ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಜೀವನೋಪಾಯ ಮತ್ತು ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವ ಡಾ. ಶರಣಪ್ರಕಾಶ ಆರ್. ಪಾಟೀಲ್ ತಿಳಿಸಿದ್ದಾರೆ.

ಪತ್ರಿಕಾಗೋಷ್ಠಿಯಲ್ಲಿ, ಸಾಧನಾ ಸಮಾವೇಶ ಎನ್ನುವುದು ನಮ್ಮ ಸಾಧನೆಗಳನ್ನು ಜನರಿಗೆ ತಿಳಿಸುವುದಕ್ಕೆ.

ಪ್ರತಿಪಕ್ಷಗಳು ಈ ಬಗ್ಗೆ ಯಾವುದೇ ಟೀಕೆಗಳನ್ನು ಮಾಡುವ ಅವಶ್ಯಕತೆ ಇಲ್ಲ. ಕರ್ನಾಟಕದಲ್ಲಿ ಗ್ಯಾರಂಟಿ



ಯೋಜನೆಗಳನ್ನು ಜಾರಿಗೆ ತಂದ ನಂತರವೂ ಆರ್ಥಿಕ ಸ್ಥಿತಿ ಉತ್ತಮ ವಾಗಿದೆ ಎಂದರು.

ಚುನಾವಣೆಗೆ ಮುನ್ನ ಪ್ರಣಾಳಿಕೆ ಯಲ್ಲಿ ನೀಡಿದ ಭರವಸೆಗಳನ್ನು ಬಹುತೇಕ ಈಡೇರಿಸಲಾಗಿದೆ. ನಮ್ಮ ಸರ್ಕಾರ ಸಮರ್ಥ ಆಡಳಿತ ನೀಡಿದೆ. ಕಾಂಗ್ರೆಸ್ ಎಂದರೆ ನುಡಿದಂತೆ ನಡೆಯುವ ಪಕ್ಷ ಎಂಬುದು ಸಾಬೀತಾಗಿದೆ ಎಂದರು.

ತುಮಕೂರು ಸಮಾವೇಶದ ಬಳಿಕ ಕೆಲವು ಬದಲಾವಣೆ ಆಗಲಿದೆ ಎಂಬ ಚರ್ಚೆ ನಡೆಯುತ್ತಿದೆ. ಇದು ಹೈಕಮಾಂಡ್‌ಗೆ ಬಿಟ್ಟ ವಿಚಾರ. ಮೂರು ವರ್ಷದ ನಂತರ ಸಚಿವ ಸಂಪುಟದಲ್ಲಿ ಬದಲಾವಣೆ ಆಗೋದು ಸಹಜ ಎಂದರು.

ನಮ್ಮ ಹೈಕಮಾಂಡ್ ಈ ಬಗ್ಗೆ ಸ್ಪಷ್ಟ ನಿರ್ಧಾರ ಕೈಗೊಳ್ಳುತ್ತದೆ. ಗೊಂದಲಗಳು ಯಾವುದೂ ಇಲ್ಲ. ಒಂದು ಸಣ್ಣಪುಟ್ಟ ಸಮಸ್ಯೆಗಳಿದ್ದರೆ ಅದನ್ನು ವರಿಷ್ಠರು ಬಗೆಹರಿಸುತ್ತಾರೆ ಎಂದು ಡಾ. ಶರಣಪ್ರಕಾಶ ಪಾಟೀಲ್ ಸ್ಪಷ್ಟಪಡಿಸಿದರು.

# ಜೆಡಿಎಸ್‌ಗೆ ಜಿಟಿಡಿ ವಾಪಸ್ ಸಾಧ್ಯತೆ ದೇವೇಗೌಡರ ಜೊತೆ ಮಾತುಕತೆ

ಬೆಂಗಳೂರು, ಮೇ 16: ಪಕ್ಷ ಚಟುವಟಿಕೆಯಿಂದ ದೂರವೇ ಉಳಿದಿದ್ದ ಶಾಸಕ ಜಿ.ಟಿ.ದೇವೇಗೌಡರು ಜೆಡಿಎಸ್ ವರಿಷ್ಠ, ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರನ್ನು ಶನಿವಾರ ಭೇಟಿಯಾಗಿ ಕುತೂಹಲ ಮೂಡಿಸಿದರು.

ಅವರ ದಿಢೀರ್ ಭೇಟಿ ಸಾಕಷ್ಟು ಕುತೂಹಲಗಳಿಗೆ ಕಾರಣವಾಗಿತ್ತು. ಪದ್ಮನಾಭನಗರದಲ್ಲಿರುವ ದೇವೇಗೌಡರ ನಿವಾಸದಲ್ಲಿ ಭೇಟಿಯಾಗಿ ಕೆಲ ಹೊತ್ತು ಸಮಾಲೋಚನೆ ನಡೆಸಿದರು. ಬಹುದಿನಗಳ ಬಳಿಕ ದೇವೇಗೌಡರ ಭೇಟಿಯಾದ ಅವರ ನಡೆ ಹಲವು ಕುತೂಹಲಗಳಿಗೆ ಎಡೆ ಮಾಡಿಕೊಟ್ಟಿದೆ.

ಜೆಡಿಎಸ್‌ನಿಂದ ಅಂತರ ಕಾಯ್ದುಕೊಂಡಿದ್ದ ಜಿಟಿಡಿ, ಜೆಡಿಎಲ್‌ಪಿ ಸ್ಥಾನ ತಪ್ಪಿದ್ದಕ್ಕೆ ದೇವೇಗೌಡರ ಮೇಲೆ ಮುನಿಸಿಕೊಂಡಿದ್ದರು. ಈ ಹಿನ್ನೆಲೆ ಪಕ್ಷದ ಕಾರ್ಯಚಟುವಟಿಕೆ ಯಿಂದಲೂ ದೂರ ಉಳಿದಿದ್ದರು. ಈ ಮಧ್ಯೆ ಸಿಎಂ ಸಿದ್ದರಾಮಯ್ಯರನ್ನು ಶ್ಲಾಘಿಸಿ ನೀಡಿದ್ದ ಹೇಳಿಕೆಗಳು ಸಾಕಷ್ಟು ಅನುಮಾನಕ್ಕೆ ಕಾರಣವಾಗಿತ್ತು. ಜಿ.ಟಿ.ದೇವೇಗೌಡರು ಕಾಂಗ್ರೆಸ್‌ಗೆ ಸನಿಹವಾಗುತ್ತಿದ್ದಾರೆ ಎಂಬ ಚರ್ಚೆ ಕೂಡ ಬಲವಾಗಿ ಕೇಳಿ ಬಂದಿತ್ತು. ಆದರೆ, ಎಚ್.ಡಿ.ದೇವೇಗೌಡರ ಭೇಟಿ ಬಳಿಕ ಜಿ.ಟಿ.ದೇವೇಗೌಡರ ಹೇಳಿಕೆ ಹಲವು ಅನುಮಾನಗಳಿಗೆ



ತೆರೆ ಎಳೆದಿದೆ. ಭೇಟಿ ಬಳಿಕ ಮಾತನಾಡಿದ ಅವರು, ಮಾಜಿ ಪ್ರಧಾನಿ ದೇವೇಗೌಡರನ್ನು ಭೇಟಿ ಮಾಡಿದೆ. ಇಡೀ ದೇಶದಲ್ಲಿ ಪ್ರಧಾನಿಯಾಗಿ ಪ್ರಖ್ಯಾತಿ ಪಡೆದವರು. ಮೋದಿಯವರೇ ಅವರ ಗುಣಗಾನ ಮಾಡಿದ್ದಾರೆ. ರೈತರ ಪರ ನಿಂತು ದುಡಿದವರು. ನಮ್ಮನ್ನು ಜೊತೆಯಲ್ಲಿ ಕರೆದುಕೊಂಡು ಹೋಗ್ತಿದ್ದಾರೆ. ಅವರ ಬಗ್ಗೆ ಅಪಾರ ಗೌರವ ಇದೆ. ತಾಯಿ ಚೆನ್ನಮ್ಮ ಅವರ ಆರೋಗ್ಯ ವಿಚಾರಿಸಿದೆ ಎಂದರು.

## 2028ಕ್ಕೆ ಜೆಡಿಎಸ್‌ನಿಂದಲೇ ಸ್ಪರ್ಧೆ

ಪಕ್ಷದಿಂದ ಅಂತರ ಕಾಪಾಡಿಕೊಂಡ ವಿಚಾರವಾಗಿ ಪ್ರತಿಕ್ರಿಯಿಸುತ್ತಾ, ದೇವೇಗೌಡರು ರಾಜಕೀಯ ಮಾತಾಡಿಲ್ಲ, ನಾನು ಮಾತಾಡಿಲ್ಲ. ಚೆನ್ನಾಗಿರು ಒಳ್ಳೆದಾಗಲಿ ಎಂದು ಅಶೀರ್ವಾದ ಮಾಡಿದ್ದಾರೆ. ನಾನು ಎಷ್ಟು ಪ್ರಾಮಾಣಿಕವಾಗಿ ದುಡಿದ್ದೇನೆ ಎಂದು ಅವರಿಗೆ ಗೊತ್ತಿದೆ. ಕ್ಷೇತ್ರ ದೊಡ್ಡದಿದೆ ಹಾಗಾಗಿ ಕ್ಷೇತ್ರದ ಅಭಿವೃದ್ಧಿಯಲ್ಲಿ ತೊಡಗಿದ್ದೇನೆ. ಇನ್ನೂ ಜನತಾದಳದಲ್ಲೇ ಇದ್ದೇನೆ. 2028ರಲ್ಲಿ ಚಾಮುಂಡೇಶ್ವರಿ ಕ್ಷೇತ್ರದಿಂದ ಜೆಡಿಎಸ್‌ನಿಂದಲೇ ಸ್ಪರ್ಧೆ ಮಾಡುತ್ತೇನೆ ಎಂದು ಸ್ಪಷ್ಟಪಡಿಸಿದರು. ಇನ್ಮುಂದೆ ಪಕ್ಷದ ವೇದಿಕೆಯಲ್ಲಿ ಕಾಣಿಸಿಕೊಳ್ತಿರಾ ಎಂಬ ವಿಚಾರವಾಗಿ ಮಾತನಾಡುತ್ತಾ, ಯಾವುದೇ ಪದಾಧಿಕಾರಿಗಳಾಗಲಿ, ಕೇಂದ್ರ ಸಚಿವ ಕುಮಾರಸ್ವಾಮಿ ಆಗಲಿ, ನಿಖಿಲ್ ಕುಮಾರಸ್ವಾಮಿ ಆಗಲಿ ಯಾರೂ ನನಗೆ ಆಹ್ವಾನ ನೀಡಿಲ್ಲ. ಮುಂದೆ ಕರೆದರೆ ನೋಡೋಣಾ ಎಂದರು.

# ಬೀಜಗಳ ಮಸೂದೆ-2025ರ ಅನ್ವಯ ಪರವಾನಗಿ ಪಡೆಯುವಂತೆ ಒತ್ತಾಯ ಬೇಡ: ಹೈಕೋರ್ಟ್

**ಬೆಂಗಳೂರು, ಮೇ 16:** ಕೇಂದ್ರ ಸರ್ಕಾರ ಜಾರಿಗೆ ತರಲು ಉದ್ದೇಶಿಸಿರುವ ಬೀಜಗಳ ಮಸೂದೆ– 2025ರ ಅನ್ವಯ ಹೊಸ ಪರವಾನಗಿ ಪಡೆಯುವಂತೆ ಕೃಷಿ ಹಾಗೂ ತೋಟಗಾರಿಕೆ ಬೆಳೆಗಳ ಬೀಜದ ಸಗಟು, ಚಿಲ್ಲರೆ ಮಾರಾಟ ಮತ್ತು ವಿತರಕರಿಗೆ ಒತ್ತಾಯ ಮಾಡಬಾರದು ಎಂದು ರಾಜ್ಯ ಸರ್ಕಾರಕ್ಕೆ ಹೈಕೋರ್ಟ್ ಆದೇಶಿಸಿದೆ.

ಜಾರಿಯಾಗದ ಬೀಜಗಳ ಕಾಯಿದೆ– 2025ರ (ಮಸೂದೆ ರೂಪದಲ್ಲಿರುವ) ಪ್ರಕಾರ ಹೊಸ ಪರವಾನಗಿ ಪಡೆಯುವಂತೆ ರಾಜ್ಯ ಸರ್ಕಾರದ ಕೃಷಿ ಹಾಗೂ ತೋಟಗಾರಿಕೆ ಇಲಾಖೆ ಅಧಿಕಾರಿಗಳು ಒತ್ತಾಯಿಸುತ್ತಿದ್ದಾರೆ ಎಂದು ಆರೋಪಿಸಿ ಸುವರ್ಣ ಹೈಬ್ರೀಡ್ ಸೀಡ್ಸ್ ಪ್ರೈವೇಟ್ ಲಿಮಿಟೆಡ್ ಕಂಪನಿ ಸೇರಿದಂತೆ ಒಟ್ಟು ಕೃಷಿ ಹಾಗೂ ತೋಟಗಾರಿಕೆ ಬೆಳೆಗಳ ಬೀಜದ ಮಾರಾಟ, ವಿತರಣೆ ಮತ್ತು ಜಾಹೀರಾತು ಚಟುವಟಿಕೆಯಲ್ಲಿ ತೊಡಗಿಕೊಂಡಿರುವ ಎಂಟು ಕಂಪನಿಗಳು ಸಲ್ಲಿಸಿದ್ದ ಅರ್ಜಿಯನ್ನು ನ್ಯಾಯಮೂರ್ತಿ ಸಚಿನ್ ಶಂಕರ್ ಮಗದುಮ್ ಪೀಠ ವಿಲೇವಾರಿ ಮಾಡಿದೆ.

ಬೀಜಗಳ ಮಸೂದೆ– 2025 ಅಂತಿಮಗೊಂಡು ಕಾಯಿದೆ ರೂಪದಲ್ಲಿ ಜಾರಿಗೆ ಬಂದಿಲ್ಲ. ಸರ್ಕಾರಿ ವಕೀಲರು ನೀಡಿರುವ ಮಾಹಿತಿಯಂತೆ ಇನ್ನೂ ಮಸೂದೆಯು ಅನುಮೋದನೆ ಪಡೆದು ಅಂಗೀಕಾರಗೊಂಡಿಲ್ಲ. ಹೀಗಾಗಿ, ಜಾರಿಗೆ ಬಾರದ ಮಸೂದೆ ಅನ್ವಯ ಯಾವುದೇ ಪರವಾನಗಿ ಪಡೆಯುವಂತೆ ಅರ್ಜಿದಾರರಿಗೆ ಒತ್ತಾಯಿಸಬಾರದು.

ಅರ್ಜಿದಾರರ ಚಟುವಟಿಕೆಗಳನ್ನು ಅಸ್ತಿತ್ವದಲ್ಲಿರುವ ಶಾಸನಬದ್ಧ ಚೌಕಟ್ಟಿನ ಪ್ರಕಾರ ಅಂದರೆ ಬೀಜಗಳ ನಿಯಂತ್ರಣ?1983ರ ಆದೇಶದ ಅಡಿಯಲ್ಲಿ ನೀಡಲಾದ ಪರವಾನಗಿ ಅನುಸಾರವೇ




ಕಟ್ಟುನಿಟ್ಟಾಗಿ ನಿಯಂತ್ರಿಸಬೇಕು ಎಂದು ರಾಜ್ಯ ಸರ್ಕಾರಕ್ಕೆ ನಿರ್ದೇಶನ ನೀಡಿ ಅರ್ಜಿ ಇತ್ಯರ್ಥ ಮಾಡಿದೆ. ಬೀಜಗಳ ಕಾಯಿದ 1966 ಮತ್ತು ಬೀಜಗಳ ನಿಯಂತ್ರಣ ಆದೇಶ–1983 ಪ್ರಕಾರ ಕೃಷಿ ಮತ್ತು ತೋಟಗಾರಿಕೆ ಬೆಳೆಗಳ ಬೀಜದ ನಡುವೆ ಪ್ರತ್ಯೇಕ ವ್ಯಾಖ್ಯಾನವಿಲ್ಲ. ಒಮ್ಮೆ ರಾಜ್ಯ ಸರ್ಕಾರದ ಕೃಷಿ ಇಲಾಖೆಯ ಜಂಟಿ ನಿರ್ದೇಶಕರಿಂದ ಪರವಾನಗಿ ಪಡೆದರೆ ಕೃಷಿ ಹಾಗೂ ತೋಟಗಾರಿಕೆ ಬೆಳೆಗಳ ಬೀಜವನ್ನು ಆಮದು ಅಥವಾ ರಫ್ತು ಮಾಡಬಹುದು. ತಮ್ಮದೇ ಆದ ಬ್ರಾಂಡ್ ಅನ್ನು ಮಾರ್ಕೆಟಿಂಗ್ ಹಾಗೂ ವಿತರಣೆ ಮಾಡಬಹುದು. ಚಿಲ್ಲರೆ ಕೇಂದ್ರಗಳಲ್ಲಿ ಮಾರಾಟ ಮಾಡಬಹುದು ಎಂದು ಅರ್ಜಿಯಲ್ಲಿ ವಿವರಿಸಿದ್ದಾರೆ.

ಸದ್ಯ ಕೇಂದ್ರ ಸರ್ಕಾರವು ಬೀಜ ಕಾಯಿದೆ– 2025 ಜಾರಿಗೆ ತರಲು ಉದ್ದೇಶಿಸಿದೆ. ಅದು ಅಂಗೀಕಾರಗೊಂಡು ಅಂತಿಮ ರೂಪ ಪಡೆದಿಲ್ಲ. ಸದ್ಯ ಮಸೂದೆ ಸ್ವರೂಪದಲ್ಲಿದೆ. ಅದರ ಪ್ರಕಾರ ಕೃಷಿ ಬೀಜ, ತೋಟಗಾರಿಕೆ ಬೆಳೆಗಳ ಬೀಜಗಳ (ಫೀಲ್ಡ್ ಕ್ರಾಪ್– ಆಯಿಲ್ ಕ್ರಾಪ್) ರಾಜ್ಯ ವ್ಯಾಪಿಯಾಗಿ ಮಾರಾಟ, ಮಾರುಕಟ್ಟೆ ಮತ್ತು ವಿತರಣೆಗೆ ಡೀಲರ್‌ಗಳು, ಸಗಟು, ಚಿಲ್ಲರೆ, ಮಾರಾಟ, ವಿತರಕರು ಹೊಸ ಹಾಗೂ ಪ್ರತ್ಯೇಕವಾಗಿ ಪರವಾನಗಿ ಪಡೆಯಬೇಕಿರುತ್ತದೆ. ಕೇಂದ್ರ ಸರ್ಕಾರದಿಂದ ದಕ್ಷಿಣ, ಉತ್ತರ, ಪೂರ್ವ, ಪಶ್ಚಿಮ ಮತ್ತು ಕೇಂದ್ರ ವಲಯಗಳ ಸಮಿತಿಗಳು ಕಂಪನಿಗಳಿಗೆ ಪರವಾನಗಿ ನೀಡಬೇಕು. ಡೀಲರ್ ಚಿಲ್ಲರೆ, ವಿತರಕರು ಮತ್ತು ಸಗಟು ಬೀಜ ವ್ಯಾಪಾರಿಗಳು ರಾಜ್ಯ ಕೃಷಿ ಇಲಾಖೆ ಜಂಟಿ ನಿರ್ದೇಶಕರು ಬಳಿ ಪರವಾನಗಿ ಪಡೆಯಬಹುದು ಎಂದು ಹೇಳಲಾಗುತ್ತಿದೆ. ಅದರ ಬಗ್ಗೆಯೂ ಸ್ಪಷ್ಟತೆಗಳಿಲ್ಲ. ಅಂದರೆ ಪ್ರತಿಯೊಬ್ಬರು ಪ್ರತ್ಯೇಕವಾಗಿ ಪರವಾನಗಿ ಪಡೆಯಬೇಕಿರುತ್ತದೆ ಎಂದು ಅರ್ಜಿಯಲ್ಲಿ ವಿವರಿಸಲಾಗಿದೆ.

ಮತ್ತೊಂದೆಡೆ ಉದ್ದೇಶಿತ ಬೀಜ ಮಸೂದೆ–2025 ಅನುಸಾರ ಪ್ರತ್ಯೇಕ ಪರವಾನಗಿ ಪಡೆಯುವಂತೆ ರಾಜ್ಯ ಕೃಷಿ ಹಾಗೂ ತೋಟಗಾರಿಕೆ ಇಲಾಖೆ ಅಧಿಕಾರಿಗಳು ಬಲವಂತ ಮಾಡುತ್ತಿದ್ದಾರೆ. ಇದರಿಂದ ತೋಟಗಾರಿಕೆ ಮತ್ತು ಕೃಷಿ ಬೆಳೆಗಳ ಬೀಜದ ಮಾರಾಟ, ವಿತರಕರು, ಡೀಲರ್ ಮತ್ತು ಚಿಲ್ಲರೆ ಮತ್ತ ಸಗಟು ವ್ಯಾಪಾರಿಗಳಿಗೆ ತೀವ್ರ ತೊಂದರೆಯಾಗುತ್ತಿದೆ. ಕಾಯಿದೆಯು ಬಹುರಾಷ್ಟ್ರೀಯ ಕಂಪನಿಗೆ ಅನುಕೂಲಮಾಡಿಕೊಡುವ ಉದ್ದೇಶಿದಿಂದ ಹೊಸ ಕಾಯಿದೆ ಜಾರಿಗೆ ತರಲು ಉದ್ದೇಶಿಲಾಗಿದೆ.

ಆದ್ದರಿಂದ ಉದ್ದೇಶಿತ ಬೀಜಗಳ ಮಸೂದೆ ಅನುಸಾರ ತಮಗೆ ಹೊಸ/ ಪ್ರತ್ಯೇಕ ಪರವಾನಗಿ ಪಡೆಯಲು ಒತ್ತಾಯ ಮಾಡದಂತೆ ಪ್ರತಿವಾದಿಗಳಾದ ಕೇಂದ್ರ ಹಾಗೂ ರಾಜ್ಯ ಸರ್ಕಾರಕ್ಕೆ ನಿರ್ದೇಶನ ನೀಡಬೇಕು ಎಂದು ಅರ್ಜಿದಾರ ಕಂಪನಿಗಳು ಕೋರಿವೆ.

# ಮೇ 20ರಿಂದ ಅನಿರ್ದಿಷ್ಟಾವಧಿ ಮುಷ್ಕರ: ಸಾರಿಗೆ ನೌಕರರ ಸಂಘದ ಪ್ರ.ಕಾರ್ಯದರ್ಶಿ ವಿಜಯಭಾಸ್ಕರ್

**ಬೆಂಗಳೂರು, ಮೇ 16:** ತುಮಕೂರಿನಲ್ಲಿ ನಡೆಯುವ ರಾಜ್ಯ ಸರ್ಕಾರದ ಮೂರನೇ ವರ್ಷದ ಸಾಧನಾ ಸಮಾವೇಶಕ್ಕೆ ಸಾರಿಗೆ ನೌಕರರು ಕಪ್ಪು ಬಾವುಟ ಪ್ರದರ್ಶಿಸಲು ಮುಂದಾಗಿದ್ದಾರೆ. ಸಾರಿಗೆ ನೌಕರರ ಮುಷ್ಕರಕ್ಕೆ 21 ದಿನಗಳ ಮೊದಲೇ ನೋಟೀಸ್ ನೀಡಲಾಗಿದೆ. ಅದರಂತೆ ಮೇ 20ರಿಂದ ಅನಿರ್ದಿಷ್ಟಾವಧಿ ಮುಷ್ಕರ ಶುರುವಾಗಲಿದೆ ಎಂದು ಕೆಎಸ್‌ಆರ್‌ಟಿಸಿ ನೌಕರರ ಮತ್ತು ಸಿಬ್ಬಂದಿಗಳ ಸಂಘದ ಪ್ರಧಾನ ಕಾರ್ಯದರ್ಶಿ ವಿಜಯಭಾಸ್ಕರ್ ತಿಳಿಸಿದ್ದಾರೆ.

ಕೆಲವರು ಹಿಂದಿನ ದಿನವೇ ಕೆಲಸ ಸ್ಥಗಿತಗೊಳಿಸುವ ಸಾಧ್ಯತೆ ಇದೆ. ತಡರಾತ್ರಿ ತಂಗುವ ಬಸ್‌ಗಳು ಮತ್ತು ದೂರದೂರಿಗೆ ರಾತ್ರಿ ಪ್ರಯಾಣ ಆರಂಭಿಸುವ ಚಾಲಕರು ಮತ್ತು ಸಿಬ್ಬಂದಿಗಳು ಹಿಂದಿನ ದಿನವೇ ತಮ ಮುಷ್ಕರವನ್ನು ಆರಂಭಿಸಲಿದ್ದಾರೆ.

ಉಳಿದಂತೆ ಮೇ 20ರಂದು ಬೆಳಗ್ಗೆ 6 ಗಂಟೆಯಿಂದಲೇ ಎಲ್ಲಾ ಸಾರಿಗೆ ಬಸ್‌ಗಳು ಸ್ಥಗಿತಗೊಳ್ಳಲಿದೆ ಎಂದು ವಿಜಯಭಾಸ್ಕರ್ ತಿಳಿಸಿದ್ದಾರೆ.

ಕಾಂಗ್ರೆಸ್ ಸರ್ಕಾರ ಸಾರಿಗೆ ನೌಕರರ ಮುಷ್ಕರಕ್ಕೆ ಹೆದರಿ ಮೇ 20ರಂದು ತುಮಕೂರಿನಲ್ಲಿ ನಡೆಯ ಬೇಕಿದ್ದ ಸಾಧನಾ ಸಮಾವೇಶವನ್ನು ಒಂದು ದಿನ ಮುಂಚಿತವಾಗಿ ಅಂದರೆ, ಮೇ 19ರಂದೇ ನಡೆಸುತ್ತಿದೆ. ಅಂದು ತುಮಕೂರಿನಲ್ಲಿ ಸಾರಿಗೆ ನಿಗಮಗಳ ನೌಕರರು ಸಾಧನಾ ಸಮಾವೇಶಕ್ಕೆ ಕಪ್ಪು ಬಾವುಟ ಪ್ರದರ್ಶಿಸಲಿದ್ದಾರೆ.

ಕಾರ್ಯಕ್ರಮಕ್ಕೆ ಅಡ್ಡಿಪಡಿಸು ವುದಿಲ್ಲ, ಬದಲಾಗಿ ತುಮಕೂರಿನ ಟೌನ್‌ಹಾಲ್ ಸರ್ಕಲ್‌ನಲ್ಲಿ ಸುಮಾರು ಒಂದು ಸಾವಿರ ಜನ ಸಮಾವೇಶ ಗೊಂಡು ಕಪ್ಪು ಬಾವುಟ ಪ್ರದರ್ಶಿಸುತ್ತೇವೆ ಎಂದು ವಿಜಯಭಾಸ್ಕರ್ ತಿಳಿಸಿದ್ದಾರೆ.

ವೇತನ ಪರಿಷ್ಕರಣೆ ಹಾಗೂ ಇತರ ಬೇಡಿಕೆಗಳ ಈಡೇರಿಕೆಗೆ ನಮ ಒತ್ತಾಯ ನ್ಯಾಯಬದ್ಧವಾಗಿದೆ. ಹಲವು ಬಾರಿ ಚರ್ಚೆ ನಡೆಸಿದರೂ ಸರ್ಕಾರ ಸ್ಪಂದಿಸುತ್ತಿಲ್ಲ, ಕೊನೆಗೆ ಏಕಪಕ್ಷೀಯ ವಾಗಿ ಶೇ. 12.5ರಷ್ಟು ವೇತನ ಹೆಚ್ಚಿಸಿ, ಆದೇಶ ಹೊರಡಿಸ ಲಾಗಿದೆ. ಇದು ಒಪ್ಪುವುದಿಲ್ಲ ಎಂದು ಹೇಳಿದರು.

# ಪ್ರಯಾಣಿಕರ ಸಂಚಾರ, ಸರಕು ಸಾಗಣೆಯಲ್ಲಿ ಕೆಐಎ ಮತ್ತೊಂದು ಸಾಧನೆ

**ಬೆಂಗಳೂರು, ಮೇ 16:** ಅತಿ ಹೆಚ್ಚು ಜನಸಂದಣಿ ಹೊಂದಿರುವ ದೇಶದ ನಿಲ್ದಾಣಗಳ ಪೈಕಿ ಒಂದಾದ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣವು (ಕೆಐಎ) ಪ್ರಯಾಣಿಕರ ಸಂಚಾರ ಮತ್ತು ಸರಕು ಸಾಗಣೆಯಲ್ಲಿ ಮತ್ತೊಂದು ಮಹತ್ವದ ಮೈಲಿಗಲ್ಲು ಸಾಧಿಸಿದೆ. ಈ ವಿಮಾನ ನಿಲ್ದಾಣದಿಂದ 2025–26ನೇ ಹಣಕಾಸು ವರ್ಷದಲ್ಲಿ 400 ಮಿಲಿಯನ್ ಪ್ರಯಾಣಿಕರು ಸಂಚಾರ ನಡೆಸಿದ್ದಾರೆ. ಅದೇ ರೀತಿ, 532,000 ಮೆಟ್ರಿನ್ ಟನ್ ಸರಕುಗಳನ್ನು ಸಾಗಣೆ ಮಾಡಲಾಗಿದೆ ಎಂಬ ಅಂಶ ತಿಳಿದುಬಂದಿದೆ.

# ಭವಿಷ್ಯದ ಪೀಳಿಗೆಗೆ ಉತ್ತಮ ಮೌಲ್ಯ, ಸಾತ್ವಿಕ ಜೀವನ ಬಿಟ್ಟುಹೋಗುವುದೇ ಕರ್ತವ್ಯ: ಡಾ.ಸಿ.ಎನ್. ಮಂಜುನಾಥ್




**ಬೆಂಗಳೂರು, ಮೇ 16:** ಒಬ್ಬ ಜವಾಬ್ದಾರಿಯುತ ನಾಗರಿಕನ ವ್ಯಕ್ತಿತ್ವವೇ ಉತ್ತಮ ಸಮಾಜ ನಿರ್ಮಾಣದ ಅಡಿಪಾಯ. ಸಮಾಜದಲ್ಲಿ ಪ್ರತಿಯೊಬ್ಬರೂ ಪರಸ್ಪರ ಸಹಕಾರ, ಸೇವಾ ಮನೋಭಾವ ಹಾಗೂ ಮಾನವೀಯತೆ ಬೆಳೆಸಿಕೊಳ್ಳಬೇಕು. ಮುಂದಿನ ಪೀಳಿಗೆಗೆ ಉತ್ತಮ ಮೌಲ್ಯಗಳು, ಸಾತ್ವಿಕ ಜೀವನ ಹಾಗೂ ಸೇವಾ ಧೋರಣೆಯನ್ನು ಬಿಟ್ಟುಹೋಗುವುದು ನಮ್ಮೆಲ್ಲರ ಕರ್ತವ್ಯ ಎಂದು ಸಂಸದ ಡಾ.ಸಿ.ಎನ್. ಮಂಜುನಾಥ್ ಹೇಳಿದರು.

ಸೀನಿಯರ್ ಚೇಂಬರ್ ಇಂಟರ್‌ನ್ಯಾಷನಲ್ (ಎಸ್‌ಸಿಐ) ಬೆಂಗಳೂರು ರೀಜನ್‌ನ 10ನೇ ವರ್ಷ ಪದಗ್ರಹಣ ಸಮಾರಂಭದಲ್ಲಿ ಮಾತನಾಡಿ, ಜೀವನದಲ್ಲಿ ನಿಜವಾದ ಯಶಸ್ಸು ಎಂದರೆ ಎಷ್ಟು ಸಂಪತ್ತು ಗಳಿಸಿದ್ದೇವೆ ಎಂಬುದಲ್ಲ, ನಮ್ಮಿಂದ ಎಷ್ಟು ಜನರ ಮುಖದಲ್ಲಿ ನಗು ಮೂಡಿಸಿದೆವು, ಎಷ್ಟು ಕುಟುಂಬಗಳಿಗೆ ಸಹಾಯವಾಗಿದ್ದೇವೆ ಎಂಬುದೇ ಮುಖ್ಯ. ಸಮಾಜದಲ್ಲಿ ಕಣ್ಣೀರಿರುವವರ ಕಣ್ಣೀರನ್ನು ಒರೆಸುವ ಕಾರ್ಯವೇ ಅತ್ಯಂತ ದೊಡ್ಡ ಸೇವೆ ಎಂದು ಅಭಿಪ್ರಾಯಪಟ್ಟರು.

ಇಂದಿನ ಸಮಾಜದಲ್ಲಿ ಹಣ, ಅಧಿಕಾರ ಮತ್ತು ಹೋಲಿಕೆಯ ಬದುಕು ಹೆಚ್ಚಾಗುತ್ತಿದೆ. ಆದರೆ ಸರಳತೆ, ಮೌನ, ಶಾಂತಿ ಹಾಗೂ ಮಾನವೀಯತೆ ಉಳಿದಾಗ ಮಾತ್ರ ಬದುಕಿಗೆ ಅರ್ಥ ಸಿಗುತ್ತದೆ. ಸಂಪತ್ತಿನಲ್ಲಿ ಸರಳತೆ, ಅಧಿಕಾರದಲ್ಲಿ ವಿನಯ, ಕೋಪದಲ್ಲಿ ಮೌನ ಇರಬೇಕು ಎಂಬ ಸಂದೇಶವನ್ನು ಅವರು ನೀಡಿದರು.

ನಾವು ನಮಗಾಗಿ ಮಾತ್ರ ಬದುಕದೆ ಸಮಾಜಕ್ಕಾಗಿ ಬದುಕಬೇಕು. ಸಮಾಜದ ಒಳಿತಿಗಾಗಿ ಕಾರ್ಯನಿರ್ವಹಿಸು ವವರನ್ನು ಸಮಾಜ ಸದಾ ಗೌರವಿಸುತ್ತದೆ ಹಾಗೂ ನೆನಪಿನಲ್ಲಿ ಇಟ್ಟುಕೊಳ್ಳುತ್ತದೆ. ನಿವೃತ್ತಿಯ ನಂತರವೂ ವ್ಯಕ್ತಿಯನ್ನು ಸಮಾಜ ಗೌರವಿಸುವುದು ಅವರು ಮಾಡಿದ ಸತ್ಕಾರ್ಯಗಳ ಆಧಾರದ ಮೇಲೆಯೇ. ಸಮಾಜದಲ್ಲಿ ಜವಾಬ್ದಾರಿಯುತ ಕೆಲಸಗಳನ್ನು ಮಾಡುತ್ತಿರುವ ಎಸ್‌ಸಿಐ ಪದಾಧಿಕಾರಿಗಳು ಹಾಗೂ ಸದಸ್ಯರ ಸೇವಾ ಮನೋಭಾವವನ್ನು ಶ್ಲಾಘಿಸಿದ ಮಾನ್ಯ ಸಂಸದರು, ಈ ರೀತಿಯ ಸಂಘಟನೆಗಳು ಸಮಾಜದಲ್ಲಿ ಉತ್ತಮ ಬದಲಾವಣೆಗೆ ರಾಯಭಾರಿಗಳಾಗಿವೆ ಎಂದು ಅಭಿನಂದಿಸಿದರು.

# ಹಟ್ಟಿ ಚಿನ್ನದ ಗಣಿ: 2025–26ರಲ್ಲಿ 1,691.50 ಕೆ.ಜಿ ಚಿನ್ನ ಉತ್ಪಾದನೆ

**ಬೆಂಗಳೂರು, ಮೇ 16:** ಹಟ್ಟಿ ಚಿನ್ನದ ಗಣಿ ಕಂಪನಿ 2025–26ನೇ ಸಾಲಿನಲ್ಲಿ ಹೊಂದಿದ್ದ 1,700 ಕೆ.ಜಿ ಚಿನ್ನ ಉತ್ಪಾದಿಸುವ ಗುರಿಗೆ ಶೇ.99.50ರಷ್ಟು ಅಂದರೆ 1,691.50 ಕೆ.ಜಿ ಚಿನ್ನ ಉತ್ಪಾದಿಸಿದೆ.

ಸದರಿ ವರ್ಷದಲ್ಲಿ ಇದೇ ಮೊದಲ ಬಾರಿಗೆ ರೂ.1,910 ಕೋಟಿ ವಹಿವಾಟು ನಡೆಸಿದ್ದು, ಇದರಿಂದ ರೂ.844 ಕೋಟಿಗಳ ನಿವ್ವಳ ಲಾಭಗಳಿಸಿದ ಹಿನ್ನೆಲೆಯಲ್ಲಿ ಹಟ್ಟಿ ಚಿನ್ನದ ಗಣಿ ಕಂಪನಿಯ ಅಧ್ಯಕ್ಷ ಜೆ.ಟಿ ಪಾಟೀಲ್ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಕಾವೇರಿ ನಿವಾಸದಲ್ಲಿ ಶನಿವಾರ ಭೇಟಿಯಾಗಿ ಪುಷ್ಪಗುಚ್ಛವನ್ನು ನೀಡಿ ಸನ್ಮಾನಿಸಿದರು. ಗೃಹ ಸಚಿವ




ಜಿ.ಪರಮೇಶ್ವರ, ವ್ಯವಸ್ಥಾಪಕ ನಿರ್ದೇಶಕ ಆರ್. ಶಿಲ್ಪ ಉಪಸ್ಥಿತರಿದ್ದರು.

ರಾಜ್ಯಪಾಲರಿಂದ ನೇಮಕಾತಿ ಆದೇಶ

# ಮಹಾರಾಣಿ ಕ್ಲಸ್ಟರ್ ವಿವಿ ಸಿಂಡಿಕೇಟ್ ಸದಸ್ಯರಾಗಿ ಡಾ. ಎ. ರಮ್ಯಾ ರಮೇಶ್

ಬೆಂಗಳೂರು, 16.ಮೇ: ಬೆಂಗಳೂರಿನ ಪ್ರತಿಷ್ಠಿತ ಶಿಕ್ಷಣ ಸಂಸ್ಥೆಗಳಲ್ಲಿ ಒಂದಾದ ಹೆಚ್‌ಎಂಆರ್ ಸಮೂಹ ಸಂಸ್ಥೆಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ (ceo) ಆಗಿರುವ ಡಾ. ಎ.ರಮ್ಯಾ ರಮೇಶ್ ಅವರನ್ನು ಬೆಂಗಳೂರಿನ ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯರನ್ನಾಗಿ ಗೌರವಾನ್ವಿತ ರಾಜ್ಯಪಾಲರು ನೇಮಕ ಮಾಡಿದ್ದಾರೆ.

ಈ ಬಗ್ಗೆ ರಾಜ್ಯದ ರಾಜ್ಯಪಾಲರ ಸಚಿವಾಲಯವು ಅಧಿಕೃತ ಪ್ರಕಟಣೆ ಹೊರಡಿಸಿದ್ದು, ಈ ನೇಮಕಾತಿಯು ಜುಲೈ 7ರಿಂದ ಜಾರಿಗೆ ಬರಲಿದ್ದು, ಮೂರು ವರ್ಷಗಳ ಅವಧಿ ಹೊಂದಿರುತ್ತದೆ ಎಂದು ವಿಶ್ವ ವಿದ್ಯಾಲಯದ ಕುಲಾಧಿಪತಿಗಳು



ಆಗಿರುವ ರಾಜ್ಯಪಾಲರ ಆದೇಶದಲ್ಲಿ ತಿಳಿಸಲಾಗಿದೆ.

ಡಾ. ರಮ್ಯಾ ರಮೇಶ್ ಅವರು ಶಿಕ್ಷಣ ಸಂಸ್ಥೆಗಳ ನೇತೃತ್ವದ ಜೊತೆಗೆ ಸಾಮಾಜಿಕ ಸೇವಾ ಚಟುವಟಿಕೆ ಗಳಲ್ಲಿಯೂ ಸಕ್ರಿಯವಾಗಿ ತೊಡಗಿಸಿ ಕೊಂಡಿದ್ದಾರೆ. ಆರೋಗ್ಯ, ನೈರ್ಮಲ್ಯ ಮುಂತಾದ ವಿಭಾಗಗಳಲ್ಲಿ ಅವರು ತಮ್ಮದೇ ಆದ ಕೊಡುಗೆ ನೀಡಿದ್ದಾರೆ. ಮಹಿಳಾ ಸಬಲೀಕರಣ, ಬಡ ಮಕ್ಕಳ ಶಿಕ್ಷಣಕ್ಕೆ ಒತ್ತು ಕೊಡುವ ನಿಟ್ಟಿನಲ್ಲಿ ಡಾ.ರಮ್ಯಾ ಅವರು ಹೆಚ್ಚು ಪ್ರಾಮುಖ್ಯತೆ ನೀಡಿ ಕೆಲಸ ಮಾಡುತ್ತಿದ್ದಾರೆ. ಅಲ್ಲದೆ ಸರ್ಕಾರಿ ಶಾಲೆಗಳನ್ನು ದತ್ತು ತೆಗೆದುಕೊಂಡು ಅವುಗಳ ಅಭಿವೃದ್ಧಿಗಾಗಿ ದುಡಿಮೆ ಮಾಡುತ್ತಿದ್ದಾರೆ.

ಈಗಾಗಲೇ ಹೆಣ್ಣೂರು ಭಾಗ ಸೇರಿದಂತೆ ಹಲವಾರು ಕಡೆ ಸರ್ಕಾರಿ ಶಾಲೆಗಳಿಗೆ ನಿವೇಶನ ಸೇರಿ ಹಲವಾರು ಮೂಲಭೂತ ಸೌಕರ್ಯಗಳನ್ನು ಎಚ್‌ಎಂಆರ್ ಸಮೂಹದಿಂದ ಒದಗಿಸಲಾಗಿದೆ ಎಂದು ಸಂಸ್ಥೆಯ ಪ್ರಕಟಣೆ ತಿಳಿಸಿದೆ.



ಬೇಸಿಗೆ ಆರಂಭವಾಗುತ್ತಿದ್ದಂತೆ ಬಾಗಲಕೋಟೆ ಜಿಲ್ಲೆಯ ಕೊರ್ತಿ ಕೊಲ್ಹಾರ ಬಳಿ ಕೃಷ್ಣಾನದಿ ಬತ್ತಿಹೋಗಿದೆ.

# 68 ಹಳ್ಳಿಗಳಲ್ಲಿ ನೀರಿನ ಸಮಸ್ಯೆ ನೀಗಿಸಲು 4 ಕೋಟಿ: ಸಚಿವ ಖಂಡ್ರೆ

**ಬೀದರ್, ಮೇ. 16:** ಜಿಲ್ಲೆಯ 38 ಗ್ರಾಮ ಪಂಚಾಯಿತಿಗಳ 68 ಹಳ್ಳಿಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಇದ್ದು, ಸಮಸ್ಯೆ ನೀಗಿಸಲು 4 ಕೋಟಿ ಬಿಡುಗಡೆಗೊಳಿಸಲಾಗಿದೆ. ಎಲ್ಲೇ ಸಮಸ್ಯೆ ಕಂಡು ಬಂದರೂ 24 ಗಂಟೆಗಳಲ್ಲಿ ಬಗೆಹರಿಸಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರು ಅಧಿಕಾರಿಗಳಿಗೆ ತಾಕೀತು ಮಾಡಿದರು.

ಮುಂಗಾರು ಹಂಗಾಮು ಆರಂಭಗೊಳ್ಳುವ ತನಕ ಅಂದರೆ ಜೂನ್ 15ರ ವರೆಗೆ ಕುಡಿಯುವ ನೀರಿನ ಸಮಸ್ಯೆ ಪರಿಹರಿಸಲು ಜಿಲ್ಲಾ, ತಾಲ್ಲೂಕು ಹಾಗೂ ಗ್ರಾಮ ಮಟ್ಟದ ಅಧಿಕಾರಿಗಳು ಜಾಗೃತರಾಗಿ ಕಾರ್ಯನಿರ್ವಹಿಸಬೇಕೆಂದು ಸೂಚಿಸಿದರು.



ಬೇಸಿಗೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಆಗದಂತೆ ಜಿಲ್ಲೆಗೆ 4 ಕೋಟಿ ಬಿಡುಗಡೆಯಾಗಿದೆ. ಔರಾದ್ ತಾಲ್ಲೂಕಿನ 22 ಗ್ರಾಮಗಳಲ್ಲಿ ಹಾಗೂ ಭಾಲ್ಕಿ ತಾಲ್ಲೂಕಿನ 18 ಗ್ರಾಮಗಳಲ್ಲಿ ನೀರಿನ ಸಮಸ್ಯೆ ಹೆಚ್ಚಾಗಿದೆ ಎಂದು ತಿಳಿದು ಬಂದಿದೆ. ಜಿಲ್ಲೆಯ ಯಾವುದೇ ನಗರ ಪ್ರದೇಶದಲ್ಲಿ ನೀರಿನ ಸಮಸ್ಯೆ ಇಲ್ಲ. **ಈ ವರ್ಷ 250 ಕೋಟಿ ಬೆಳೆ ವಿಮೆ:** ಫಸಲ್ ಬಿಮಾ ಯೋಜನೆ ಆರಂಭದ ಪ್ರಥಮ ವರ್ಷದಲ್ಲಿ ಹೆಚ್ಚಿನ ಪರಿಹಾರ ಬಂದಿತ್ತು. ನಂತರದ ವರ್ಷಗಳಲ್ಲಿ ಕಟ್ಟಿದಷ್ಟು ಬೆಳೆ ವಿಮೆ ಬಂದಿಲ್ಲ. ಬೆಲೆ ನಷ್ಟ ಆದರೂ ರೈತರಿಗೆ ಹಣ ಸಿಗುತ್ತಿರಲಿಲ್ಲ. **ಈ ವರ್ಷ ರೂ.250 ಕೋಟಿ ಬೆಳೆವಿಮೆ ಹಣ ಬಂದಿದೆ.** ಇಷ್ಟಾದರೂ ಅಧಿಕಾರಿಗಳ ಸಹಕಾರ ದಿಂದ ರೈತರಿಗೆ ಹೆಚ್ಚಿನ ಬೆಳೆ ಪರಿಹಾರವಾಗಿ ರೂ.520 ಕೋಟಿ ವರೆಗೆ ಪರಿಹಾರ ಬಂದಿದೆ ಎಂದರು.

**ಶಾಶ್ವತ ಕುಡಿಯುವ ನೀರಿಗೆ 7 ಸಾವಿರ ಕೋಟಿ :** ಬೀದರ್ ಹಾಗೂ ಕಲಬುರಗಿ ಜಿಲ್ಲೆಯ ಕೆಲ ಹಳ್ಳಿಗಳಿಗೆ ಶಾಶ್ವತ ಕುಡಿಯುವ ನೀರಿನ ಯೋಜನೆಗಾಗಿ ನಾರಾಯಣಪುರ ಜಲಾಶಯದಿಂದ ನೀರು ಸರಬರಾಜು ಮಾಡಲು 7 ಸಾವಿರ ಕೋಟಿ ಯೋಜನೆ ಸಿದ್ದಪಡಿಸಲಾಗುತಿದ್ದು, ಇದರಿಂದ ಮುಂದಿನ 25 ವರ್ಷಗಳ ವರೆಗೆ ಕುಡಿಯುವ ನೀರಿನ ಸಮಸ್ಯೆಯೆ ಉದ್ಭವಿಸುವುದಿಲ್ಲ. ಬೀದರ್ ಜಿಲ್ಲೆಯ 120 ಹಳ್ಳಿಗಳು ಹಾಗೂ ಕಲಬುರಗಿಯ 250 ಹಳ್ಳಿಗಳಿಗೆ ಈ ಯೋಜನೆಯ ಲಾಭ ಸಿಗಲಿದೆ. ಸರ್ಕಾರದ ಮಟ್ಟದಲ್ಲಿ ಇದಕ್ಕೆ ಅನುಮೋದನೆ ಸಿಕ್ಕರೆ ಯೋಜನೆಯ ಕಾಮಗಾರಿ ಆರಂಭಿಸಲಾಗುವುದು. ಈಗಾಗಲೇ ಭಾಲ್ಕಿ ತಾಲ್ಲೂಕಿನ 120 ಹಳ್ಳಿಗಳಿಗೆ ಶಾಶ್ವತ ನೀರು ಒದಗಿಸಲು ಬಹುಗ್ರಾಮ ಯೋಜನೆ ಕಾಮಗಾರಿ ನಡೆಯುತ್ತಿದ್ದು ಇದರಿಂದ 110 ರಿಂದ 120 ಹಳ್ಳಿಗಳಿಗೆ ನೀರಿನ ವ್ಯವಸ್ಥೆ ಕಲ್ಪಿಸಲಿದೆ.ಜಿಲ್ಲೆಯಲ್ಲಿ ಜೆಜೆಎಮ್ ವತಿಯಿಂದ ಕುಡಿಯುವ ನೀರಿನ ಕೆಲಸ ನಡೆಯುತ್ತಿದೆ. ಕೆಲವು ಕಡೆಗಳಲ್ಲಿ ಪೈಪ್‌ಲೈನ್ ಕಿತ್ತು ಹೋಗಿದೆ. ತಪಾಸಣೆ ಮಾಡಿ ತನಿಖೆ ಕೈಗೊಳ್ಳುತ್ತೇವೆ, ಕೇಂದ್ರ ಸರ್ಕಾರದಿಂದ ಜಲಜೀವನ್ ಮಿಷನ್ ಯೋಜನೆಗೆ ಇನ್ನೂ ರೂ.20 ಸಾವಿರ ಕೋಟಿ ಬರಬೇಕಾಗಿದೆ ಎಂದರು.

# ಯೂರಿಯಾ ಖರೀದಿಗೆ ಎಫ್‌ಐಡಿ ಕಡ್ಡಾಯ: ಚಂದ್ರಕಾಂತ ಜೀವಣಗಿ

**ಕಲಬುರಗಿ, ಮೇ. 16:** ಪ್ರಸಕ್ತ ಸಾಲಿನ ಮುಂಗಾರು ಹಂಗಾಮಿನಿಂದ ರೈತರು ಯೂರಿಯಾ ರಸಗೊಬ್ಬರವನ್ನು ಬಳಸಲು ಕೃಷಿ ಇಲಾಖೆ ಹೊಸ ಮಾರ್ಗಸೂಚಿ ಜಾರಿಗೊಳಿಸಿದ್ದು, ಅದರಂತೆ ಪ್ರತಿ ಎಕರೆಗೆ ಬೆಳೆ ಆಧಾರಿತ ಶಿಫಾರಸಿನಂತೆ ಒಂದು ಚೀಲ ಯೂರಿಯಾ ವಿತರಿಸಲಾಗುವುದು. ಯೂರಿಯಾ ಖರೀದಿಗೆ ರೈತರ ಎಫ್‌ಐಡಿ ಕಡ್ಡಾಯವಾಗಿದೆ ಎಂದು ಸಹಾಯಕ ಕೃಷಿ ನಿರ್ದೇಶಕ ಚಂದ್ರಕಾಂತ ಜೀವಣಗಿ ಹೇಳಿದರು.



ನಗರದ ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ತಾಲ್ಲೂಕು ಆಡಳಿತ ಹಾಗೂ ಕೃಷಿ ಇಲಾಖೆಯ ವತಿಯಿಂದ ಆಯೋಜಿಸಲಾಗಿದ್ದ 2026–27ನೇ ಸಾಲಿನ ಮುಂಗಾರು ಹಂಗಾಮಿನ ಕೃಷಿ ಪರಿಕರ ಮಾರಾಟಗಾರರ ಸಭೆಯಲ್ಲಿ ಭಾಗವಹಿಸಿ, ಬೆಳೆಗಳಿಗೆ ಅಗತ್ಯವಾಗಿ ಬೇಕಾಗಿರುವ ಪೋಷಕಾಂಶ ಗಳನ್ನು ಪೂರೈಸಲು ಯೂರಿಯಾ ಮಾತ್ರವಲ್ಲದೇ ಸಂಯುಕ್ತ ರಸಗೊಬ್ಬರ ಗಳಾದ 10:26:26, 20:20:0:13, 12:32:16 ಮುಂತಾದವುಗಳನ್ನು ಬಳಸಿಕೊಳ್ಳಬೇಕು. ರೈತರು ಅನಧಿಕೃತ ಮಾರಾಟಗಾರರಿಂದ ಕೃಷಿ ಪರಿಕರ ಗಳನ್ನು ಖರೀದಿಸಬಾರದು ಎಂದರು.

ಕೃತಕ ಅಭಾವದ ವದಂತಿಗಳಿಗೆ ಒಳಗಾಗಿ ಅಗತ್ಯಕ್ಕಿಂತ ಹೆಚ್ಚು ರಸಗೊಬ್ಬರ ಸಂಗ್ರಹಿಸಬಾರದು. ಮಾರಾಟಗಾರರು ಆಧಾರ್ ಪರಿಶೀಲನೆ ಇಲ್ಲದೆ ರಸಗೊಬ್ಬರ ನೀಡಬಾರದು ಮತ್ತು ಯೂರಿಯಾ ರಸಗೊಬ್ಬರವನ್ನು ಕೆ–ಕಿಸಾನ್ ತಂತ್ರಾಂಶದ ಮೂಲಕವೇ ವಿತರಿಸಬೇಕು. ತೆರಿಗೆ ಸಮೇತ ಅಸಲಿ ಬಿಲ್ ನೀಡಬೇಕು. ಅಂಗಡಿಗಳಲ್ಲಿ ದಾಸ್ತಾನು, ದರಪಟ್ಟಿ ಮತ್ತು ಪರವಾನಗಿ ವಿವರಗಳನ್ನು ಪ್ರದರ್ಶಿಸಬೇಕು. ಪ್ರತಿ ತಿಂಗಳು ರಸಗೊಬ್ಬರ ಮಾರಾಟದ ವಿವರ ಕಡ್ಡಾಯವಾಗಿ ಇಲಾಖೆಗೆ ಸಲ್ಲಿಸಬೇಕು ಎಂದು ಸೂಚಿಸಿದರು.

ಕಲಬುರಗಿ ಜಾಗೃತ ಕೋಶದ ಸಹಾಯಕ ಕೃಷಿ ನಿರ್ದೇಶಕಿ ಕವಿತಾ ಯರಗಲ್ ಮಾತನಾಡಿ, ರಸಗೊಬ್ಬರಗಳ ಅನಧಿಕೃತ ಮಾರಾಟವನ್ನು ತಡೆಯಲು ಹಾಗೂ ಎಲ್ಲಾ ರೈತರಿಗೂ ರಸಗೊಬ್ಬರ ಸಿಗುವಂತೆ ಮಾಡುವ ಉದ್ದೇಶದಿಂದ ಎಲ್ಲಾ ರೈತರು ಎಫ್‌ಐಡಿ ಹೊಂದಿರುವುದು ಕಡ್ಡಾಯವಾಗಿದೆ.

ಕೃಷಿ ಭೂಮಿಯ ವಿಸ್ತೀರ್ಣದ ಆಧಾರದ ಮೇಲೆ ರಸಗೊಬ್ಬರಗಳನ್ನು ಕೆ–ಕಿಸಾನ್ ತಂತ್ರಾಂಶದ ಮೂಲಕ ವಿತರಿಸುವುದರಿಂದ ರೈತರು ಆಧಾರ್ ಮತ್ತು ಪಹಣಿಗಳನ್ನು ಎಫ್‌ಐಡಿಗೆ ಜೋಡಣೆಯನ್ನು ರೈತ ಸಂಪರ್ಕ ಕೇಂದ್ರ ಅಥವಾ ತೋಟಗಾರಿಕೆ ಇಲಾಖೆಯ ಮೂಲಕ ಮಾಡಿಕೊಳ್ಳಬಹುದು. ತಹಶೀಲ್ದಾರ್ ಮಲ್ಲಣ್ಣ ಯಲಗೋಡ ಮಾತನಾಡಿ, ತಾಲ್ಲೂಕು ಆಡಳಿತ ರೈತರಿಗೆ ಸಮರ್ಪಕ ಬೀಜ, ರಸಗೊಬ್ಬರ ವಿತರಣೆಯಲ್ಲಿ ಯಾವುದೇ ಲೋಪ ಬಾರದಂತೆ ಸೂಕ್ತ ಕ್ರಮಕೈಗೊಳ್ಳಲಾಗುವುದು ಎಂದರು.

# ಅವಕಾಶಗಳ ತೆರೆದಿಟ್ಟ ನವೋದ್ಯಮ ಸಮಾವೇಶ




**ಕಲಬುರಗಿ, ಮೇ. 16:** ನಗರದ ನಾಗನಹಳ್ಳಿ ರಿಂಗ್ ರಸ್ತೆಯಲ್ಲಿರುವ ಜಸ್ಟ್ ಕ್ಲಬ್‌ನಲ್ಲಿ 'ರೈತರು –ಎಫ್‌ಪಿಒಗಳು –ಸ್ಟಾರ್ಟ್‌ಅಪ್‌ಗಳು –ಎಂಎಸ್‌ಎಂಇ'ಗಳ ಸಮಾವೇಶ ನಡೆಯಿತು. ನವೋದ್ಯಮಗಳು, ಎಂಎಸ್‌ಎಂಇಗೆ ಇರುವ ವಿಪುಲ ಅವಕಾಶಗಳ ಮೇಲೆ ಬೆಳಕು ಚೆಲ್ಲಿತು.

ರಾಜ್ಯ ಸರ್ಕಾರದ ಐಟಿ, ಬಿಟಿ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಗಳಡಿಯ ಅತ್ಯಾಧುನಿಕ ಜೈವಿಕ ತಂತ್ರಜ್ಞಾನ ಶ್ರೇಷ್ಠತಾ ಕೇಂದ್ರವಾದ ಬೆಂಗಳೂರು ಬಯೋ ಇನ್ನೋವೇಷನ್ ಸೆಂಟರ್ (ಬಿಬಿಸಿ) ಮತ್ತು ನಬಾರ್ಡ್ ಈ ಕಾರ್ಯಕ್ರಮಕ್ಕೆ ಸಹಯೋಗ ನೀಡಿತ್ತು.

ರೈತರು, ಎಫ್‌ಪಿಒಗಳು, ಸ್ಟಾರ್ಟ್‌ಅಪ್‌ಗಳು ಮತ್ತು ಮಾರುಕಟ್ಟೆ ವಲಯದ ನಡುವೆ ನೇರ ಸಂಪರ್ಕ ವೇದಿಕೆ ನಿರ್ಮಿಸಿ 'ಫಾರ್ಮ್ ಟು ಫೋರ್ಕ್' (ತೋಟದಿಂದ ತಟ್ಟೆಯ ವರೆಗೆ) ವ್ಯವಸ್ಥೆಯನ್ನು ಬಲಪಡಿಸುವುದು ಈ ಉಪಕ್ರಮದ ಮುಖ್ಯ ಉದ್ದೇಶವಾಗಿತ್ತು. ಕಲ್ಯಾಣ ಕರ್ನಾಟಕದ ಏಳು ಜಿಲ್ಲೆಗಳ ರೈತರು ಮತ್ತು ಎಫ್‌ಪಿಒಗಳು ಈ ಸಮಾವೇಶದಲ್ಲಿ ಭಾಗವಹಿಸಿ, ಪ್ರದೇಶದ ಸ್ಟಾರ್ಟ್‌ಅಪ್‌ಗಳು ಅಭಿವೃದ್ಧಿಪಡಿಸಿರುವ ನವೀನ ತಂತ್ರಜ್ಞಾನಗಳನ್ನು ಅರಿತುಕೊಂಡರು. ಕಾರ್ಯಕ್ರಮದಲ್ಲಿ ಕಲ್ಯಾಣ ಭಾಗದ ಏಳು ಸಾಧಕ ರೈತ ಮಹಿಳೆಯರನ್ನು ಗುರುತಿಸಿ ಸನ್ಮಾನಿಸಲಾಯಿತು. ಅದಕ್ಕೆ ಜಿಲ್ಲಾ ಕೃಷಿ ಮತ್ತು ತೋಟಗಾರಿಕೆ ಇಲಾಖೆಗಳ ಸಹಕಾರ ದೊರೆಯಿತು.

# ಅಕ್ಕ ಅನ್ನಪೂರ್ಣ ತಾಯಿ ಸೇವೆ ಅವಿಸ್ಮರಣೀಯ: ಪ್ರಭುಕುಮಾರ ಸ್ವಾಮಿಜಿ



**ಬೀದರ್, ಮೇ. 16:** ಬಸವತತ್ವ ಪ್ರಚಾರ, ಪ್ರಸಾರಕರಾಗಿದ್ದ ಅಕ್ಕ ಅನ್ನಪೂರ್ಣ ತಾಯಿ ಸೇವೆ ಅವಿಸ್ಮರಣೀಯವಾಗಿದೆ ಎಂದು ಗೋರ್ಟಾ(ಬಿ) ಲಿಂಗಾಯತ ಮಹಾಮಠದ ಪೀಠಾಧಿಪತಿ ಪ್ರಭುಕುಮಾರ ಸ್ವಾಮೀಜಿ ನುಡಿದರು.

ಬೀದರ್‌ನಲ್ಲಿ ಮೇ 23 ಮತ್ತು 24ರಂದು ನಡೆಯಲಿರುವ ಅಕ್ಕ ಅನ್ನಪೂರ್ಣ ತಾಯಿ ದ್ವಿತಿಯ ಸ್ಮರಣೋತ್ಸವದ ಬಸವೋತ್ಸವದ ಕರಪತ್ರವನ್ನು ತೊಗಲೂರ ಗ್ರಾಮದಲ್ಲಿ ವಿತರಿಸಿ ಮಾತನಾಡಿದ ಅವರು, ಜನಮನದಲ್ಲಿ ಬಸವತ್ತು ನೆಲೆಗೊಳಿಸಲು ವಾರದ ಅನುಭವ ಮಂಟಪ, ಮಾಸಿಕ ಬಸವಜ್ಯೋತಿ, ಶರಣ ಸಂಗಮದಂತಹ ಮಹತ್ವದ ಕಾರ್ಯಕ್ರಮಗಳನ್ನು ಅಕ್ಕ ಮಾಡುತ್ತಿದ್ದರು ಎಂದು ಸ್ಮರಿಸಿದರು.ಬಸವಾದಿ ಶರಣರ ಮಾನವೀಯ ಮೌಲ್ಯಗಳನ್ನು ಬಿತ್ತಿ ಬೆಳೆಸುವ ಉದ್ದೇಶದಿಂದ ಬಸವ ಸೇವಾ ಪ್ರತಿಷ್ಠಾನ, ಲಿಂಗಾಯತ ಮಹಾಮಠ, ನೀಲಮ್ಮನ ಬಳಗ, ಲಿಂಗಾಯತ ಸೇವಾದಳ ಸಂಸ್ಥೆಗಳನ್ನು ಸ್ಥಾಪಿಸಿರುವ ಕೀರ್ತಿ ಅವರಿಗೆ ಸಲ್ಲುತ್ತದೆ ಎಂದರು.

ಬಸವ ಧರ್ಮದ ತಾತ್ವಿಕ ಶ್ರದ್ಧಾ ಕೇಂದ್ರವಾಗಿ ಗುರುವಚನ ಪರುಷಕಟ್ಟೆ ಸ್ಥಾಪಿಸಿ ನಿರಂತರ ವಚನ ಪಠಣ ಯೋಜನೆ ರೂಪಿಸಿ ಕಾರ್ಯಗತಗೊಳಿಸಿದ್ದರು.

ಬೀದರ್–ಬಸವಗಿರಿಯಲ್ಲಿ 23, 24ರಂದು ನಡೆಯಲಿರುವ ಸಾಮೂಹಿಕ ವಚನ ಪಾರಾಯಣ, ವೇದಿಕೆ ಕಾರ್ಯಕ್ರಮ ಸೇರಿ ವಚನ ವಿಜಯೋತ್ಸವ ಮೆರವಣಿಗೆಯಲ್ಲಿ ತಾವೆಲ್ಲರೂ ಭಾಗವಹಿಸಬೇಕು ಎಂದು ಗ್ರಾಮಸ್ಥರಲ್ಲಿ ಮನವಿ ಮಾಡಿದರು.ಶರಣ ಸಾಹಿತ್ಯ ಪರಿಷತ್ ಜಿಲ್ಲಾಧ್ಯ ಶಂಭುಲಿಂಗ ಕಾಮಣ್ಣ ಮಾತನಾಡಿ, ಶ್ರೀ ಪ್ರಭುಕುಮಾರ ಸ್ವಾಮೀಜಿ ಅವರು ಅಕ್ಕ ಅನ್ನಪೂರ್ಣತಾಯಿ ಹಾಕಿಕೊಟ್ಟ ಮಾರ್ಗದಲ್ಲಿ ನಡೆದಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

# ಆ.2ಕ್ಕೆ 5ನೇ ಅವೃತ್ತಿ 'ಸ್ಟೀಲ್ ಸಿಟಿ ರನ್' ಆರೋಗ್ಯ ಜಾಗೃತಿ ಓಟ

**ಬಳ್ಳಾರಿ. ಮೇ.16 :** ನಗರದ ಯುವಜನತೆ ಹಾಗೂ ಸಾರ್ವಜನಿಕರಲ್ಲಿ ಆರೋಗ್ಯದ ಬಗ್ಗೆ ಜಾಗೃತಿ ಮೂಡಿಸುವ ಉದ್ದೇಶದಿಂದ ಬಳ್ಳಾರಿ ಸೈಕ್ಲಿಸ್ಟ್ಸ್ ಅಂಡ್ ರನ್ನರ್ಸ್ ಫೌಂಡೇಶನ್ ವತಿಯಿಂದ ಆಗಸ್ಟ್ 2ರಂದು 5ನೇ ಆವೃತ್ತಿಯ ಸ್ಟೀಲ್ ಸಿಟಿ ರನ್ ಆಯೋಜಿಸಲಾಗಿದೆ ಎಂದು ಫೌಂಡೇಶನ್ ಅಧ್ಯಕ್ಷ ಡಾ. ತಿಪ್ಪಾರೆಡ್ಡಿ ಎಂ. ತಿಳಿಸಿದರು.




ಅವರು ನಗರದ ಬಾಲ ಹೋಟೆಲ್‌ನಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿ, ಕಳೆದ ನಾಲ್ಕು ವರ್ಷಗಳಿಂದ ಯಶಸ್ವಿಯಾಗಿ ನಡೆಯುತ್ತಿರುವ ಈ ಓಟ ಸ್ಪರ್ಧೆಗೆ ಈ ಬಾರಿ ಇನ್ನಷ್ಟು ವೈಶಿಷ್ಟ್ಯಗಳನ್ನು ಸೇರಿಸಲಾಗಿದೆ ಓಡುವ ಅಭ್ಯಾಸದಿಂದ ದೈಹಿಕ ಹಾಗೂ ಮಾನಸಿಕ ಆರೋಗ್ಯ ಕಾಪಾಡಿಕೊಳ್ಳಲು ಸಾಧ್ಯ. ಈ ನಿಟ್ಟಿನಲ್ಲಿ ಸಾರ್ವಜನಿಕರಲ್ಲಿ ಫಿಟ್ನೆಸ್ ಅರಿವು ಮೂಡಿಸುವ ಪ್ರಯತ್ನವಾಗಿ ಸ್ಟೀಲ್ ಸಿಟಿ ರನ್ ಆಯೋಜಿಸಲಾಗುತ್ತಿದೆ. ಪ್ರತೀ ವರ್ಷ ಸ್ಪರ್ಧಿಗಳಿಂದ ಉತ್ತಮ ಸ್ಪಂದನೆ ದೊರೆಯುತ್ತಿದ್ದು, ಈ ಬಾರಿ ನಾಲ್ಕರಿಂದ ಐದು ಸಾವಿರ ಜನ ಭಾಗವಹಿಸುವ ನಿರೀಕ್ಷೆಯಿದೆ ಎಂದು ಹೇಳಿದರು.

ಈ ಬಾರಿ 3 ಕಿ.ಮೀ 'ಮಜ್ಜಾ ರನ್ ಜೊತೆಗೆ 5 ಕಿ.ಮೀ, 10 ಕಿ.ಮೀ ಹಾಗೂ ಹೊಸದಾಗಿ 16 ಕಿ.ಮೀ (10 ಮೈಲರ್) ವಿಭಾಗವನ್ನು ಪರಿಚಯಿಸಲಾಗಿದೆ. ವಿಶೇಷವಾಗಿ ಗಂಭೀರ ಓಟಗಾರರು ಹಾಗೂ ತರಬೇತಿ ಪಡೆದ ಸ್ಪರ್ಧಿಗಳನ್ನು ಗಮನದಲ್ಲಿಟ್ಟುಕೊಂಡು 16 ಕಿ.ಮೀ ವಿಭಾಗವನ್ನು ಸೇರಿಸಲಾಗಿದೆ ಎಂದರು.

ಫೌಂಡೇಶನ್ 2022ರಲ್ಲಿ ಮೊದಲ ಬಾರಿಗೆ ಆಯೋಜಿಸಿದ್ದ ಓಟದಲ್ಲಿ 1,100ಕ್ಕೂ ಹೆಚ್ಚು, ಎರಡನೇ ಆವೃತ್ತಿಯಲ್ಲಿ 2,500ಕ್ಕೂ ಹೆಚ್ಚು ಮಂದಿ ಹಾಗೂ ಮೂರನೇ ಮತ್ತು ನಾಲ್ಕನೇ ಆವೃತ್ತಿಗಳಲ್ಲಿ ಸುಮಾರು 4,200 ಮಂದಿ ಪಾಲ್ಗೊಂಡಿದ್ದರು. ಈ ಬಾರಿ ಅಂದಾಜು ಐದು ಸಾವಿರಕ್ಕೂ ಹೆಚ್ಚು ಜನರನ್ನು ಸೇರಿಸಿ ದೊಡ್ಡ ಮಟ್ಟದಲ್ಲಿ ಕಾರ್ಯಕ್ರಮ ನಡೆಸಲು ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದರು.

ನೋಂದಣಿ ಇಂದಿನಿಂದಲೇ ಆರಂಭಿಸಲಾಗಿದ್ದು ಮೇ 31ರ ಒಳಗೆ ನೊಂದಣಿ ಮಾಡಿಸುವವರಿಗೆ ವಿಶೇಷವಾದ ರಿಯಾಯಿತಿ ಇದೆ ಎಂದ ಅವರು 18 ವರ್ಷ ಮೇಲ್ಪಟ್ಟವರಿಗೆ 16 ಕಿ.ಮೀ ಓಟಕ್ಕೆ 800, 15 ವರ್ಷ ಮೇಲ್ಪಟ್ಟವರಿಗೆ 10 ಕಿ.ಮೀ ಓಟಕ್ಕೆ 600, 12 ವರ್ಷ ಮೇಲ್ಪಟ್ಟವರಿಗೆ 5 ಕಿ.ಮೀ ಓಟಕ್ಕೆ ರೂ.500 ಹಾಗೂ 3 ಕಿ.ಮೀ ಮಜ್ಜಾ ರನ್‌ಗೆ ರೂ.450 ನಿಗದಿಪಡಿಸಲಾಗಿದೆ ಎಂದರು.

16, 10 ಮತ್ತು 5 ಕಿ.ಮೀ ವಿಭಾಗಗಳಲ್ಲಿ ಪುರುಷ ಮತ್ತು ಮಹಿಳಾ ವಿಭಾಗಗಳನ್ನು ಒಳಗೊಂಡಂತೆ ರೂ.7 ಲಕ್ಷಕ್ಕೂ ಅಧಿಕ ಬಹುಮಾನಗಳನ್ನು ವಿತರಿಸಲಾಗುವುದು ನೊಂದಣಿ ಮಾಡಿಸಿಕೊಂಡು ಭಾಗವಹಿಸುವ ಎಲ್ಲರಿಗೂ ಈವೆಂಟ್ ಟಿ–ಶರ್ಟ್, ಬಿಐಬಿ ಸಂಖ್ಯೆ, ಬ್ಯಾಗ್, ಉಪಹಾರ, ಕುಡಿಯುವ ನೀರು ಹಾಗೂ ಕಾರ್ಯಕ್ರಮದ ಛಾಯಾಚಿತ್ರಗಳನ್ನು ನೀಡಲಾಗುವುದು. 16, 10 ಹಾಗೂ 5 ಕಿ.ಮೀ ವಿಭಾಗದ ಸ್ಪರ್ಧಿಗಳಿಗೆ ಚಿಪ್ ಟೈಮಿಂಗ್ ಸೌಲಭ್ಯ, ಫಿನಿಷರ್ ಪದಕ ಹಾಗೂ ಇ–ಪ್ರಮಾಣಪತ್ರ ನೀಡಲಾಗುತ್ತದೆ. ಆದರೆ 3 ಕಿ.ಮೀ ಮಜ್ಜಾ ರನ್‌ಗೆ ಈ ಸೌಲಭ್ಯ ಇರುವುದಿಲ್ಲ ಎಂದು ಹೇಳಿದರು.

ಆಸಕ್ತರು www.steelcityrun.comನಲ್ಲಿ ನೋಂದಾಯಿಸಿಕೊಳ್ಳಬಹುದು.

# ಮೇ 19ರ ಮಧ್ಯರಾತ್ರಿಯಿಂದ ರಾತ್ರಿಯಿಂದ ಬಸ್ ಬಂದ್: ಆದಿಮೂರ್ತಿ

**ಬಳ್ಳಾರಿ, ಮೇ.16:** ಸಾರಿಗೆ ನೌಕರರ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ಕೆಎಸ್‌ಆರ್‌ಟಿಸಿ ಹಾಗೂ ಇತರೆ ಸಾರಿಗೆ ನಿಗಮಗಳ ಸಿಬ್ಬಂದಿ ಮೇ 19ರಿಂದ ಅನಿರ್ದಿಷ್ಟ ಅವಧಿಗೆ ಮುಷ್ಕರವನ್ನು ಹಮ್ಮಿಕೊಳ್ಳಲಾಗಿದೆ ಎಂದು ಸಂಘದ ಅಧ್ಯಕ್ಷ ಆದಿಮೂರ್ತಿ ತಿಳಿಸಿದರು.



ಅವರು ಪತ್ರಿಕ ಭವನದಲ್ಲಿ ಸುದ್ದಿಗೋಷ್ಠಿಯನ್ನು ನಡೆಸಿ ರಾಜ್ಯ ಸರ್ಕಾರದ ನಿರ್ಲಕ್ಷ ನೀತಿಗೆ ಆಕ್ರೋಶ ವ್ಯಕ್ತಪಡಿಸಿದ ಆದಿ ಮೂರ್ತಿ . ಏಸ್ಮಾ ಕಾಯ್ದೆ ಜಾರಿಗೊಳಿಸಿದರೂ ನಾವು ಹೆದರುವ ಪ್ರಶ್ನೆಯೇ ಇಲ್ಲ. ನೌಕರರ ಹಕ್ಕುಗಳಿಗಾಗಿ ಹೋರಾಟ ಮುಂದುವರಿಯುತ್ತದೆ ಎಂದು ಹೇಳಿದರು.

ಸಾರಿಗೆ ನೌಕರರಿಗೆ 38 ತಿಂಗಳ ಬಾಕಿ ವೇತನವನ್ನು ಸರ್ಕಾರ ತಕ್ಷಣ ಬಿಡುಗಡೆ ಮಾಡಬೇಕು. ಜೊತೆಗೆ ಕನಿಷ್ಠ ಶೇ.25 ವೇತನ ಹೆಚ್ಚಳ ಮಾಡಬೇಕು. ಆದರೆ ಸರ್ಕಾರ ಕೇವಲ ಶೇ.12.5 ವೇತನ ಹೆಚ್ಚಳ ಘೋಷಣೆ ಮಾಡುವ ಮೂಲಕ ಸಿಬ್ಬಂದಿಯ ಕಣ್ಣೊರೆಸುವ ಕೆಲಸ ಮಾಡುತ್ತಿದೆ.

ಈ ಪ್ರಸ್ತಾವನೆಯನ್ನು ನಾವು ಯಾವ ಕಾರಣಕ್ಕೂ ಒಪ್ಪುವುದಿಲ್ಲ ಅಲ್ಲದೆ ವೇತನ ಹಿಂಬಾಕಿಯನ್ನು ಜನವರಿ 2024 ರಿಂದ ನೀಡಬೇಕು ಆದರೆ ರಾಜ್ಯ ಸರ್ಕಾರ ಏಪ್ರಿಲ್ ತಿಂಗಳ 2025 ರಿಂದ ನೀಡಲು ಮುಂದಾಗಿದೆ ಇದಕ್ಕೆ ನಮ್ಮ ಸಹಮತ ಇಲ್ಲ ಎಂದರು.


ಸಾರಿಗೆ ನೌಕರರು ರಾಜ್ಯದ ಜನತೆಗೆ ನಿರಂತರ ಸೇವೆ ಸಲ್ಲಿಸುತ್ತಿದ್ದು, ಸಂಕಷ್ಟದ ಸಂದರ್ಭಗಳಲ್ಲೂ ಕರ್ತವ್ಯ ನಿರ್ವಹಿಸಿದ್ದಾರೆ. ಆದರೂ ಅವರ ಪರಿಶ್ರಮಕ್ಕೆ ತಕ್ಕ ಗೌರವ ಹಾಗೂ ಸೌಲಭ್ಯ ದೊರೆಯುತ್ತಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ನಮ್ಮ ಹೋರಾಟವು ಕೇವಲ ವೇತನಕ್ಕಾಗಿ ಮಾತ್ರವಲ್ಲ; ನೌಕರರ ಬದುಕಿನ ಭದ್ರತೆ ಮತ್ತು ಗೌರವಕ್ಕಾಗಿ ನಡೆಯುತ್ತಿದೆ. ಸರ್ಕಾರ ಮಾತುಕತೆಗೆ ಮುಂದಾಗಿ ಸಮಸ್ಯೆ ಬಗೆಹರಿಸಬೇಕಿತ್ತು. ಆದರೆ ಉದ್ದೇಶಪೂರ್ವಕವಾಗಿ ವಿಳಂಬ ಮಾಡುತ್ತಿದೆ ಎಂದು ದೂರಿದರು.

ಮೇ 19ರ ರಾತ್ರಿಯಿಂದ ರಾಜ್ಯಾದ್ಯಂತ ಬಸ್ ಸಂಚಾರ ಬಂದ್ ಮಾಡಲು ನಿರ್ಧರಿಸಿರುವುದಾಗಿ ತಿಳಿಸಿದ ಅವರು, ಬಸ್ ಬಂದ್‌ನಿಂದ ಸಾರ್ವಜನಿಕರಿಗೆ ತೊಂದರೆ ಆಗಬಹುದು. ಆದರೆ ಈ ಪರಿಸ್ಥಿತಿಗೆ ಸಂಪೂರ್ಣ ಹೊಣೆ ರಾಜ್ಯ ಸರ್ಕಾರವೇ ಆಗಿದೆ ಎಂದರು.

# ನಿರುದ್ಯೋಗಿ ಯುವಜನರ ಬಗ್ಗೆ ಮುಖ್ಯ ನ್ಯಾಯಮೂರ್ತಿ ಅವಹೇಳನಕಾರಿ ಹೇಳಿಕೆಗೆ ಎಐಡಿವೈಓ ಖಂಡನೆ

**ಬಳ್ಳಾರಿ, ಮೇ.16:** ಭಾರತದ ಮುಖ್ಯ ನ್ಯಾಯಮೂರ್ತಿ ಸೂರ್ಯ ಕಾಂತ್ ಅವರು ನಿರುದ್ಯೋಗಿ ಯುವಜನರ ಬಗ್ಗೆ ಮಾಡಿದ ಅತ್ಯಂತ ಅವಮಾನಕರ ಮತ್ತು ಸಂವೇದನಾ ರಹಿತ ಹೇಳಿಕೆಯನ್ನು ನಾವು ಬಲವಾಗಿ ಖಂಡಿಸುತ್ತೇವೆ. ಅವರು ಯುವಜನರನ್ನು 'ಜಿರಳೆಗಳು' ಮತ್ತು 'ಪರಾವಲಂಬಿ'ಗಳಿಗೆ ಹೋಲಿಸಿದ್ದಾರೆ. ಉದ್ಯೋಗ ದೊರೆಯದಿದ್ದರೆ ಅವರು ವ್ಯವಸ್ಥೆಯ ಮೇಲೆ ದಾಳಿ ಮಾಡುತ್ತಾರೆ' ಎಂದಿದ್ದಾರೆ.




ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಯುವಜನರಿಗೆ ಉದ್ಯೋಗ ನೀಡುವಲ್ಲಿ ಸಂಪೂರ್ಣವಾಗಿ ವಿಫಲವಾಗಿವೆ, ಚುನಾವಣಾ ಪೂರ್ವದ ಭರವಸೆಗಳನ್ನು ಗಾಳಿಗೆ ತೂರಿವೆ. ಕರ್ನಾಟಕ ಸೇರಿದಂತೆ ಬಿಹಾರ, ಉತ್ತರ ಪ್ರದೇಶ, ಪಶ್ಚಿಮ ಬಂಗಾಳ ಮತ್ತು ಇತರ ಸ್ಥಳಗಳಲ್ಲಿ ನೇಮಕಾತಿ ಪರೀಕ್ಷೆಗಳಲ್ಲಿನ ಪ್ರಶ್ನೆ ಪತ್ರಿಕೆ ಸೋರಿಕೆ ಅಥವಾ ಇತರ ವೈಪರೀತ್ಯಗಳ ವಿರುದ್ಧ ಪ್ರತಿಭಟಿಸುತ್ತಿರುವಾಗ ಉದ್ಯೋಗಾಕಾಂಕ್ಷಿಗಳ ಮೇಲೆ ಅಲ್ಲಿನ ಸರ್ಕಾರಗಳು ಕ್ರೂರವಾಗಿ ಹಲ್ಲೆ ನಡೆಸಿವೆ ಎಂಬುದು ವಿಷಾದಕರ.

ಭಾರತವು ಈಗ ಅತಿ ಹೆಚ್ಚು ನಿರುದ್ಯೋಗಿಗಳನ್ನು ಹೊಂದಿರುವ ದೇಶವಾಗಿದೆ. ಸ್ವಾತಂತ್ರ ಯದ ನಂತರ ಪ್ರಸ್ತುತ ನಿರುದ್ಯೋಗದ ದರವು ಅತ್ಯಧಿಕವಾಗಿದೆ. ಆದರೆ ಗೌರವಾನ್ವಿತ ನ್ಯಾಯಮೂರ್ತಿಗಳು ಸರ್ಕಾರಗಳ ವೈಫಲ್ಯವನ್ನು ಟೀಕಿಸಲಿಲ್ಲ, ಬದಲಿಗೆ ವ್ಯವಸ್ಥೆಯ ಬಲಿಪಶುಗಳಾದ ನಿರುದ್ಯೋಗಿ ಯುವಜನರನ್ನು ಗುರಿಯಾಗಿಸಿಕೊಂಡಿದ್ದಾರೆ.

ಪ್ರಜಾಪ್ರಭುತ್ವದ 'ನಾಲ್ಕನೇ ಸ್ತಂಭ' ಎಂದು ಪರಿಗಣ ಸಲ್ಪಟ್ಟ ಮಾಧ್ಯಮದ ವ್ಯಕ್ತಿಗಳು, ಸಾಮಾಜಿಕ ಮಾಧ್ಯಮಗಳು ಮತ್ತು ಮಾನವ ಹಕ್ಕುಗಳ ಕಾರ್ಯಕರ್ತರ ಒಂದು ವಿಭಾಗವು ವ್ಯವಸ್ಥೆಯ ವಿರುದ್ಧ ತಮ್ಮ ಅಭಿಪ್ರಾಯಗಳನ್ನು ವ್ಯಕ್ತಪಡಿಸಿದ್ದಕ್ಕಾಗಿ ನ್ಯಾಯಮೂರ್ತಿಗಳು ಅವರನ್ನು ಟೀಕಿಸಿದ್ದು ವಿಷಾದಕರ.

ನ್ಯಾಯಮೂರ್ತಿಗಳು ತಮ್ಮ ಅವಹೇಳನಕಾರಿ ಹೇಳಿಕೆಯನ್ನು ಹಿಂತೆಗೆದುಕೊಳ್ಳಬೇಕೆಂದು ಎಐಡಿವೈಓ ಒತ್ತಾಯಿಸುತ್ತದೆ. ಉದ್ಯೋಗಗಳನ್ನು ಒದಗಿಸುವಲ್ಲಿ ವಿಫಲವಾಗಿರುವ ಶೋಷಕ ಮತ್ತು ಜನವಿರೋಧಿ ವ್ಯವಸ್ಥೆಯ ವಿರುದ್ಧ ನಿರುದ್ಯೋಗಿ ಯುವಜನರು ತಮ್ಮ ಸಂಘಟಿತ ಮತ್ತು ಪ್ರಬಲ ಹೋರಾಟವನ್ನು ಮುಂದುವರಿಸಬೇಕೆಂದು ಕರೆ ನೀಡುತ್ತದೆ.

# ವಾಸ್ತುಶಿಲ್ಪಕ್ಕಿದೆ ಸಮಾಜ ರೂಪಿಸುವ ಶಕ್ತಿ: ಉದಯಕುಮಾರ ಚಿಂಚೋಳಿ



**ಕಲಬುರಗಿ, ಮೇ. 16:** ವಾಸ್ತುಶಿಲ್ಪವೆಂದರೆ ಕೇವಲ ಕಟ್ಟಡಗಳನ್ನು ನಿರ್ಮಿಸುವ ಮತ್ತು ಸ್ಥಳಗಳನ್ನು ವಿನ್ಯಾಸಗೊಳಿಸುವ ಕ್ರಿಯೆಯಲ್ಲ. ಕಲ್ಪನೆ, ಭಾವನೆ, ಅನುಭವಗಳ ಸಮ್ಮಿಲನದಿಂದ ಉತ್ತಮ ಸಮಾಜವನ್ನು ರೂಪಿಸುವ ಶಕ್ತಿ ವಾಸ್ತುಶಿಲ್ಪಕ್ಕೆ ಇದೆ ಎಂದು ಹೈದರಾಬಾದ್ ಕರ್ನಾಟಕ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ಉದಯಕುಮಾರ ಎಸ್. ಚಿಂಚೋಳಿ ಹೇಳಿದರು.

ನಗರದ ಪಿಡಿಎ ಸ್ಯಾಕ್ ಸಭಾಂಗಣದಲ್ಲಿ ಎಚ್‌ಕೆಇ ಸಂಸ್ಥೆಯ ಪೂಜ್ಯ ಡಾ.ಶಿವಕುಮಾರ ಸ್ವಾಮೀಜಿ ಸ್ಕೂಲ್ ಆಫ್ ಆರ್ಕಿಟೆಕ್ಚರ್‌ನ 'ರಚನ ರಂಗ' ತಾಂತ್ರಿಕ–ಸಾಂಸ್ಕೃತಿಕ ಉತ್ಸವ–2026 ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿದ ಅವರು, ಸೃಜನಶೀಲ, ಸಂಸ್ಕೃತಿ, ನಾವೀನ್ಯತೆ ಬಗೆಗಿನ ಮತ್ತು ಯುವಶಕ್ತಿಯ ಆಚರಣೆಯಾದ ರಚನ ರಂಗ ಉತ್ಸವ ಕೇವಲ ಒಂದು ಕಾರ್ಯಕ್ರಮವಾಗಿರದೆ, ಪ್ರತಿಭೆಯನ್ನು ಅನಾವರಣಗೊಳಿಸಲು, ಕಲ್ಪನೆಯನ್ನು ಅಭಿವ್ಯಕ್ತಿಗೊಳಿಸಲು ತರಗತಿ ಆಚೆಗಿನ ಒಂದು ವೇದಿಕೆ ಯಾಗಿದೆ ಎಂದರು.

ಎಚ್‌ಕೆಇ ಸೊಸೈಟಿ ಆಡಳಿತ ಮಂಡಳಿ ಸದಸ್ಯ ಡಾ. ಶರಣಬಸಪ್ಪ ಆರ್.ಹರವಾಳ ಮಾತನಾಡಿ, ವಿದ್ಯಾರ್ಥಿಗಳು ಪಠ್ಯದ ಜೊತೆಗೆ ಸಾಂಸ್ಕೃತಿಕ ಉತ್ಸವ, ಸ್ಪರ್ಧೆಗಳಂತಹ ಪಠ್ಯೇತರ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕು. ಸೋಲು–ಗೆಲುವು ಇಲ್ಲಿ ಮುಖ್ಯವಲ್ಲ. ಗೆದ್ದರೆ ಮುಂದಿನ ಹಂತಕ್ಕೆ ತಲುಪುತ್ತೀರಿ. ಸೋತರೆ ಗೆಲ್ಲುವುದು ಹೇಗೆ ಎಂಬುದನ್ನು ಕಲಿಯುತ್ತೀರಿ ಎಂದು ಹೇಳಿದರು.

ನಾವು ತಂತ್ರಜ್ಞಾನದ ಮುಂದುವರಿದ ಕ್ಷೇತ್ರದಲ್ಲಿದ್ದೇವೆ. ಇಲ್ಲಿ ಎಐ ಸಹ ಮುಖ್ಯವಾಗಿದೆ. ವಿದ್ಯಾರ್ಥಿಗಳು ಉತ್ತಮ ಜ್ಞಾನ ಮತ್ತು ಕೌಶಲಗಳನ್ನು ಹೊಂದಿದ್ದರೆ ಹೆಚ್ಚಿನದನ್ನು ಸಾಧಿಸಲು ಅನುಕೂಲವಾಗುತ್ತದೆ ಎಂದು ತಿಳಿಸಿದರು.

ಸೃಷ್ಟಿ ಅಸೋಸಿಯೇಟ್ಸ್‌ನ ವೆಂಕಟ್ ಎಂ.ರಾವ್ ಮಾತನಾಡಿ, ನಾವು ಹೆಚ್ಚಾಗಿ ಶೈಕ್ಷಣಿಕ ಸಾಧನೆಗಳ ಮೇಲೆ ಗಮನ ಹರಿಸುತ್ತೇವೆ. ಆದರೆ, ಮುಂದೆ ನಿಮ್ಮ ಸೃಜನಶೀಲತೆ, ಆತ್ಮವಿಶ್ವಾಸ ನಿಮ್ಮನ್ನು ಪ್ರತ್ಯೇಕಿಸುತ್ತದೆ. ಈ ರೀತಿಯ ಉತ್ಸವದಲ್ಲಿ ಭಾಗವಹಿಸಲು ಸಮರ್ಪಣೆ, ಗಂಟೆಗಳ ಅಭ್ಯಾಸ ಮತ್ತು ವೇದಿಕೆಯಲ್ಲಿ ಪ್ರದರ್ಶನ ನೀಡುವ ಧೈರ್ಯದ ಅಗತ್ಯವಿದೆ ಎಂದು ಹೇಳಿದರು.

# ಸಾಮುದಾಯಿಕ ಸೇವೆ ಬೆಂಬಲಿಸುವ ಸಮಾಜ: ಬಸನಗೌಡ ಬುರೆಡ್ಡಿ

**ರಾಯಚೂರು, ಮೇ. 16:** ಸಾಮುದಾಯಿಕ ಸೇವಾ ಕಾರ್ಯಗಳನ್ನು ಸಮಾಜ ಯಾವತ್ತೂ ಬೆಂಬಲಿಸುತ್ತದೆ ಎಂದು ಮಟಮಾರಿಯ ವೀರಭದ್ರೇಶ್ವರ ದೇವಸ್ಥಾನ ಸಮಿತಿ ಅಧ್ಯಕ್ಷ ಬಸನಗೌಡ ಬುರೆಡ್ಡಿ ಹೇಳಿದರು.

ಜಿಲ್ಲೆಯ ಮಟಮಾರಿ ಗ್ರಾಮದಲ್ಲಿ ಆಯೋಜಿಸಿದ್ದ ರಾಯಚೂರಿನ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನ ಎನ್‌ಎಸ್‌ಎಸ್ ಘಟಕದ 2025–26ನೇ ಸಾಲಿನ ವಿಶೇಷ ಶಿಬಿರದ ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿದರು.

ಉದ್ಯೋಗ ಮತ್ತು ಆರ್ಥಿಕ ಸಂಪಾದನೆಯ ಸ್ವಾರ್ಥದ ಹಿಂದೆ ಓಡುತ್ತಿರುವ ಇಂದಿನ ಯುವ ಜನತೆಯಲ್ಲಿ ಸಾಮಾಜಿಕ ಮತ್ತು ಸಾಮುದಾಯಿಕ ಸೇವೆಯ ಪ್ರಜ್ಞೆ ಕಾಣುವುದು ಬಹಳ ಅಪರೂಪವಾಗಿದೆ ಎಂದರು.

ಗ್ರಾಮಗಳ ಶ್ರೇಯೋಭಿವೃದ್ಧಿಯು ಯುವಜನತೆಯ ಶ್ರಮ ಮತ್ತು ಭಾಗವಹಿಸುವಿಕೆಯನ್ನು ಅವಲಂಬಿಸಿದೆ. ಸಾಮಾಜಿಕ ಅಭಿವೃದ್ಧಿಯು ಸಮಾಜ ಮತ್ತು ಸಾಮುದಾಯಿಕ ಸೇವೆಗಳನ್ನು ಆಧರಿಸಿದ್ದು, ಅಂತಹ ಕಾರ್ಯಚಟುವಟಿಕೆಗಳನ್ನು ಯಾರೇ ನಿರ್ವಹಿಸಿದರೂ ಸಮಾಜ ಬೆಂಬಲಿಸುತ್ತದೆ ಎಂದು ಹೇಳಿದರು.

# ಮುನ್ನೂರು ಕಾಪು ಸಮಾವೇಶ: ಜು.27ರಂದು ಶ್ರೀಕೃಷ್ಣದೇವರಾಯ ಪಟ್ಟಾಭಿಷೇಕ

**ರಾಯಚೂರು, ಮೇ. 16:** ಜುಲೈ 27ರಂದು ಶ್ರೀಕೃಷ್ಣದೇವರಾಯರ ಪಟ್ಟಾಭಿಷೇಕದ ದಿನ, ನಗರದಲ್ಲಿ ದಕ್ಷಿಣ ಭಾರತದ ಪಂಚರಾಜ್ಯ ಬಲಿಜ, ಕಾಪು ಹಾಗೂ ಮುನ್ನೂರು ಕಾಪು ಸಮಾಜದ ಬೃಹತ್ ಸಮಾವೇಶ ನಡೆಸಲು ತೀರ್ಮಾನ ಮಾಡಲಾಗಿದೆ ಎಂದು ಮುನ್ನೂರು ಕಾಪು ಸಮಾಜದ ಹಿರಿಯ ಮುಖಂಡ ಹಾಗೂ ಮಾಜಿ ಶಾಸಕ ಎ.ಪಾಪಾರೆಡ್ಡಿ ತಿಳಿಸಿದರು.



ದಕ್ಷಿಣ ಭಾರತದ ಪಂಚ ರಾಜ್ಯಗಳ ಸಮಾವೇಶದ ಮೂಲಕ ಬಲಿಜ, ಕಾಪು ಹಾಗೂ ಮುನ್ನೂರು ಕಾಪು ಸಮಾಜದ ಜನರನ್ನು ಒಗ್ಗೂಡಿಸಲಾಗುವುದು. ಸಮಾಜದ ಸಮಗ್ರ ಅಭಿವೃದ್ಧಿಗೆ ಶಕ್ತಿ ಪ್ರದರ್ಶನ ಅಗತ್ಯ. ಈ ಹಿನ್ನೆಲೆಯಲ್ಲಿ ಸಮಾವೇಶ ಆಯೋಜಿಸಲಾಗಿದೆ ಎಂದು ಹೇಳಿದರು.

ಸಾವಿರಾರು ಸಂಖ್ಯೆಯಲ್ಲಿ ಜನರನ್ನು ಸೇರಿಸುವ ಮೂಲಕ ಸಮಾವೇಶ ಯಶಸ್ವಿಗೊಳಿಸಬೇಕು. ರಾಯಚೂರು ತಾಲ್ಲೂಕಿನ ಒಂದು ಸಾವಿರ ಜನರನ್ನು ಸೇರಿಸಲು ಪ್ರಯತ್ನ ಮಾಡಲಾಗುವುದು. ತೆಲಂಗಾಣ, ಆಂಧ್ರಪ್ರದೇಶ, ಕೇರಳ ದಲ್ಲಿರುವ ಸಮುದಾಯದ ಜನರಿಗೂ ಆಹ್ವಾನ ನೀಡಲಾಗುವುದು. ಈ ಸಮಾವೇಶದ ಸಂಪೂರ್ಣ ವೆಚ್ಚ ಭರಿಸಲಾಗುವುದು ಎಂದರು.

ಸಾಮಾಜಿಕ ನ್ಯಾಯ ಮತ್ತು ರಾಜಕೀಯ ಸ್ಥಾನಮಾನದ ಕುರಿತು ನಾವೆಲ್ಲರೂ ಆತ್ಮಾವಲೋಕನ ಮಾಡಿಕೊಳ್ಳಬೇಕು. ಈ ನಿಟ್ಟಿನಲ್ಲಿ ದಕ್ಷಿಣ ಭಾರತ ಪಂಚ ರಾಜ್ಯಗಳ ಸಮಾವೇಶ ಮಹತ್ವದ್ದಾಗಿದೆ. ಕಾಪು ಸಮಾಜದ ಪ್ರತಿಯೊಬ್ಬರೂ ಪಾಲ್ಗೊಂಡು ಒಗ್ಗಟ್ಟು ಪ್ರದರ್ಶಿಸಬೇಕು ಎಂದು ಮನವಿ ಮಾಡಿದರು.

ಸಮಾವೇಶದ ಗೌರವಾಧ್ಯಕ್ಷರನ್ನಾಗಿ ಪಾಪಾರೆಡ್ಡಿ ಅವರನ್ನು ನೇಮಕ ಮಾಡಲಾಯಿತು. ದೇಶದ ಪಂಚ ರಾಜ್ಯಗಳಿಂದ ಆಗಮಿಸಿದ ಬಲಿಜ, ಕಾಪು, ಮುನ್ನೂರು ಕಾಪು ಸಮಾಜದ ಮುಖಂಡರು ಸಮಾಜದ ಅಭಿವೃದ್ಧಿ ಹಾಗೂ ಸಾಧಕ ಬಾಧಕಗಳ ಕುರಿತು ಚರ್ಚಿಸಲಾಯಿತು.




ಇಂಧನ ಬೆಲೆ ಏರಿಕೆ ವಿರೋಧಿಸಿ ಹುಬ್ಬಳ್ಳಿಯಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಶನಿವಾರ ಪ್ರತಿಭಟನೆ ನಡೆಸಿದರು.

# ನ್ಯಾಯಬೆಲೆ ಅಂಗಡಿ ಮಾಲೀಕರಿಗೆ ಬೆದರಿಕೆ: ಪೊಲೀಸ್ ವರ್ತನೆಗೆ ಟೀಕೆ

**ಬಳ್ಳಾರಿ, ಮೇ 16.** ಸರ್ಕಾರದ ಪಡಿತರ ಧಾನ್ಯಗಳನ್ನು ನ್ಯಾಯಯುತವಾಗಿ, ಯಾವುದೇ ಗೊಂದಲಗಳಿಲ್ಲದೇ ವಿತರಿಸುತ್ತಿರುವ ನಮ್ಮ ನ್ಯಾಯಬೆಲೆ ಅಂಗಡಿಗಳಿಗೆ ಪೊಲೀಸರು ತನಿಖೆ ಮಾಡುವುದು, ಆಗಾಗ್ಗೆ ದಾಳಿ ನಡೆಸಿ ತಪಾಸಣೆ ಮಾಡುವುದು, ಕರ್ತವ್ಯ ನಿರತ ಅಂಗಡಿ ಮಾಲೀಕರನ್ನು ವಿಚಾರಣೆಗೆ ಒಳಪಡಿಸುವ ಅಧಿಕಾರ ಪೊಲೀಸರಿಗಿಲ್ಲ, ಜಿಲ್ಲೆಯಲ್ಲಿ ಇಂತಹ ಪ್ರಕರಣಗಳು ನಡೆದಿರುವುದು ಅತ್ಯಂತ ಖಂಡನೀಯ ಎಂದು ಪಡಿತರ ವಿತರಕರ ಸಂಘದ ರಾಜ್ಯಾಧ್ಯಕ್ಷ ಹಾಗೂ ರಾಷ್ಟ್ರೀಯ ಕಾರ್ಯಾಧ್ಯಕ್ಷ ಟಿ.ಕೃಷ್ಣಪ್ಪ ಅವರು ಆಕ್ರೋಶ ವ್ಯಕ್ತಪಡಿಸಿದರು.

ನಗರದ ಖಾಸಗಿ ಹೋಟೆಲ್ ಸಭಾಂಗಣದಲ್ಲಿ ಶುಕ್ರವಾರ ನಡೆದ ನ್ಯಾಯಬೆಲೆ ಅಂಗಡಿ ಮಾಲೀಕರ ಸಭೆಗೆ ಚಾಲನೆ ನೀಡಿ ಮಾತನಾಡಿದರು. ನ್ಯಾಯಬೆಲೆ ಅಂಗಡಿ ಮಾಲೀಕರ ಬಗ್ಗೆ ದೂರುಗಳು ಬಂದಾಗ ವಿಚಾರಣೆ ಮಾಡಿ, ನೋಟಿಸ್ ನೀಡಿ, ನಾವು ನಮ್ಮ ಅಂಗಡಿ ಮಾಲೀಕರ ಪರವಾಗಿದ್ದೇವೆ, ನಾವು ಅದನ್ನು ಎದುರಿಸುತ್ತೇವೆ. ಅದನ್ನು ಕೈಬಿಟ್ಟು ವಿನಾಕಾರಣ ನಮ್ಮ ನ್ಯಾಯಬೆಲೆ ಅಂಗಡಿಗಳಿಗೆ ತೆರಳಿ ಪೊಲೀಸರು ತನಿಖೆ ಮಾಡುವುದು, ವಿಚಾರಣೆಗೆ ಒಳಪಡಿಸುವುದು ಇಷ್ಟರಮಟ್ಟಿಗೆ ಸರಿ, ಇದನ್ನು ನಾವು ಖಂಡಿಸುತ್ತೇವೆ. ಈ ಕುರಿತು ಆಹಾರ ಇಲಾಖೆ ಸಚಿವರಾದ ಮುನಿಯಪ್ಪ ಅವರೊಂದಿಗೆ ಹಾಗೂ ಇಲಾಖೆ ಮೇಲಧಿಕಾರಿಗಳ ಗಮನಕ್ಕೆ ತಂದಿರುವೆ, ನಮ್ಮ ನ್ಯಾಯಬೆಲೆ ಅಂಗಡಿ ಮಾಲೀಕರು ಯಾವುದೇ ಕಾರಣಕ್ಕೂ ಅಧೈರ್ಯಕ್ಕೆ ಒಳಗಾಗಬೇಡಿ, ನಿಮ್ಮೊಂದಿಗೆ ನಾವಿದ್ದೇವೆ, ನಿಮ್ಮ ಸಂಘವಿದೆ. ಇದು ಬಡವರ ಸೇವೆ ಮಾಡುವ ಒಂದು ಸೌಭಾಗ್ಯದ ಕೆಲಸ, ನಾವೆಲ್ಲರೂ ತೃಪ್ತಿಯಾಗಿ ಕೆಲಸ ಮಾಡುತ್ತಿದ್ದೇವೆ. ಹೀಗಿರುವಾಗ ಪೊಲೀಸರು ವಿನಾಕಾರಣ ಅಂಗಡಿ ಮಾಲೀಕರಿಗೆ ಭಯ ಹುಟ್ಟಿಸುವ ಕೆಲಸ ಮಾಡುವುದು ಸರಿಯಲ್ಲ. ಬಳ್ಳಾರಿಯ ಘಟನೆ ಇಡೀ ರಾಜ್ಯದ ಗಮನಸೆಳೆದಿದೆ ಎಂದರು.

ಸರ್ವರ್ ಸಮಸ್ಯೆ ಸದ್ಯಕ್ಕೆ ಸರಿಹೋಗಿದೆ, ನಮ್ಮ ಮಾಲೀಕರು ಈ ಕುರಿತು ಗಮನಸೆಳೆದಾಗ ಸರ್ಕಾರದೊಂದಿಗೆ ಚರ್ಚಿಸಿ ಅದನ್ನು ಸರಿಪಡಿಸುವ ಪ್ರಯತ್ನ ಮಾಡಿರುವೆ. ನಮ್ಮ ಅಂಗಡಿ ಮಾಲೀಕರಿಗೆ ಪಾವತಿಯಾಗಬೇಕಿದ್ದ ಕಮಿಷನ್ ಹಣ ಏಕಕಾಲಕ್ಕೆ ಅವರವರ ಖಾತೆಗಳಿಗೆ ಜಮಾ ಆಗಿದೆ. ಆಗಾಗ್ಗೆ ಸರ್ವರ್ ಸಮಸ್ಯೆಯಿಂದ ಪಡಿತರ ವಿತರಣೆಗೆ ತೊಂದರೆಯಾಗುತ್ತಿದ್ದು, ಶಾಶ್ವತ ಪರಿಹಾರಕ್ಕಾಗಿ ಸರ್ಕಾರಕ್ಕೆ ಇದೇ ತಿಂಗಳು ಮೇ.15ಕ್ಕೆ ಗಡವು ನೀಡಲಾಗಿದೆ. ಸಮಸ್ಯೆ ಇದೆ ರೀತಿ ಮುಂದುವರೆದರೆ ಹೋರಾಟದ ಸ್ವರೂಪ ಬದಲಾಗಲಿದೆ ಎಂದು ಎಚ್ಚರಿಸಿದರು. ಈ ಹಿಂದೆ ನೀಡಿದ ಭರವಸೆಯಂತೆ ಅಂಗಡಿ ಮಾಲೀಕರ ಕಮಿಷನ್ ಹಣ 124 ರಿಂದ 150 ರೂ.ಹೆಚ್ಚಳವಾಗಿದೆ. ಇದನ್ನು 200 ರೂ.ಮಾಡಲು ಸರ್ಕಾರದೊಂದಿಗೆ ನ್ಯಾಯಯುತವಾಗಿ ಹೋರಾಟ ಮಾಡುವೆ, ಇದು ಭರವಸೆಯಲ್ಲ, ನುಡಿದಂತೆ ಕೇಂದ್ರ ಹಾಗೂ ರಾಜ್ಯ ಸರ್ಕಾರದಿಂದ 200 ರೂ. ವರೆಗೆ ಮಾಡಿಸುವೆ. 2 ರಿಂದ 3 ತಿಂಗಳು ನೆನೆಗುದಿಗೆ ಬಿದ್ದ ಕಮಿಷನ್ ಹಣ ಎಲ್ಲರಿಗೂ ಬಿಡುಗಡೆ ಮಾಡಿಸಿದೆ. ಒಗ್ಗಟ್ಟಿನಲ್ಲಿ ಬಲವಿದೆ, ಎಲ್ಲರೂ ಒಗ್ಗಟ್ಟು ಪ್ರದರ್ಶಿಸಿದರೆ ಯಾವುದೇ ಸೌಲಭ್ಯವಿರಲಿ ಸರ್ಕಾರದಿಂದ ಪಡೆಯಬಹುದು ಎಂದರು.



ಸಂಘದ ಜಿಲ್ಲಾಧ್ಯಕ್ಷ ಹಾಗೂ ರಾಜ್ಯ ಕಾರ್ಯಾಧ್ಯಕ್ಷ ಮೀನಳ್ಳಿ ತಾಯಣ್ಣ ಅವರು ಮಾತನಾಡಿ, ನಮ್ಮ ಸಂಘದ ರಾಜ್ಯಾಧ್ಯಕರಾದ ಟಿ.ಕೃಷ್ಣಪ್ಪ ಅವರು, ಅಂಗಡಿ ಮಾಲೀಕರ ಪರವಾಗಿ ಹಗಲಿರುಳು ಶ್ರಮಿಸುತ್ತಿದ್ದು, ನಾವೆಲ್ಲರೂ ಅವರ ಕೈ ಬಲಪಡಿಸಬೇಕು. ವಿತರಕರಿಗೆ ಈ ಹಿಂದೆ ನೀಡುತ್ತಿದ್ದ 18 ರೂ. ಕಮಿಷನ್ ಹಣವನ್ನು 150 ರೂ.ಗೆ ಹೆಚ್ಚಿಸಿದ್ದು, ನಮ್ಮ ಕೃಷ್ಣಪ್ಪ ಅವರ ಶ್ರಮ, ಹೋರಾಟದಿಂದ ಎನ್ನುವುದು ಮರೆಯಕೂಡದು. ಪೊಲೀಸರು ನಮ್ಮ ಅಂಗಡಿಗೆ ತೆರಳಿ ತನಿಖೆ ಮಾಡುತ್ತಿರುವುದು ಸರಿಯಲ್ಲ, ನಮಗೆ ಅವರೇನು ಸಂಬಂಧ, ಯಾರೋ ಒಬ್ಬರು ತಪ್ಪು ಮಾಡಿದರೇ ಎಲ್ಲರನ್ನೂ ಹೊಣೆಗಾರರನ್ನಾಗಿ ಮಾಡುವುದು ಸರಿಯಲ್ಲ ಎಂದರು.

ಈ ಸಂದರ್ಭದಲ್ಲಿ ಸಂಘದ ಜಿಲ್ಲಾ ಕಾರ್ಯಾಧ್ಯಕ್ಷ ವೆಂಕಟೇಶ್ ಹೆಗಡೆ, ರಾಜ್ಯ ಸಮಿತಿ ಸದಸ್ಯ ವೇಮಣ್ಣ, ಜಿಲ್ಲಾ ಉಪಾಧ್ಯಕ್ಷರಾದ ಹುಂಡೇಕರ್ ಪ್ರಕಾಶ್, ಹುಸೇನಪ್ಪ, ತಾಲೂಕು ಅಧ್ಯಕ್ಷರಾದ ಮಲ್ಲಿಕಾರ್ಜುನ ಕೊಡ್ಲಿ, ಜಗದೀಶ್ ಸ್ವಾಮಿ, ವೆಂಕಟೇಶ್, ಪಂಪಾಪತಿ, ಜಗನ್ನಾಥ ಗೌಡ್ರು, ಪಾಲಾಕ್ಷಿ ರೆಡ್ಡಿ, ಕೌಲ್ ಬಜಾರ್ ಮಾರುತಿ ಸೇರಿದಂತೆ ನ್ಯಾಯಬೆಲೆ ಅಂಗಡಿ ಮಾಲೀಕರು ಇತರರಿದ್ದರು.

## ತಪ್ಪುಗಳನ್ನು ತಿದ್ದಿಕೊಂಡು ಪಕ್ಷದಲ್ಲೇ ಉಳಿಯುವುದಾದರೆ ಅಭ್ಯಂತರವಿಲ್ಲ

# ಜನರೊಂದಿಗೆ ಜನತಾದಳ ಕಾರ್ಯಕ್ರಮಕ್ಕೂ ಮುನ್ನ ಜಿಟಿಡಿಗೆ ಸಾ.ರಾ.ಮಹೇಶ್ ತಾಕೀತು

**ಮೈಸೂರು, ಮೇ 16:** ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರದಲ್ಲಿ ಜೆಡಿಎಸ್ ಆಯೋಜಿಸಿರುವ ಪ್ರಮುಖ ಕಾರ್ಯಕ್ರಮದ ಬೆನ್ನಲ್ಲೇ, ಜಿ.ಟಿ. ದೇವೇಗೌಡ ಹಾಗೂ ಸಾ.ರಾ. ಮಹೇಶ್ ನಡುವಿನ ರಾಜಕೀಯ ಜಿದ್ದಾಜಿದ್ದಿ ಮತ್ತೆ ಮುನ್ನೆಲೆಗೆ ಬಂದಿದೆ. ಶಾಸಕ ಜಿ.ಟಿ. ದೇವೇಗೌಡರ ಇತ್ತೀಚಿನ ನಡೆಗಳ ಕುರಿತು ಮಾಜಿ ಸಚಿವ ಸಾ.ರಾ. ಮಹೇಶ್ ಶನಿವಾರ ತೀವ್ರ ವಾಗ್ದಾಳಿ ನಡೆಸಿದ್ದಾರೆ.




ಮೈಸೂರಿನಲ್ಲಿ ಪತ್ರಕರ್ತರೊಂದಿಗೆ ಮಾತನಾಡಿದ ಸಾ.ರಾ. ಮಹೇಶ್, ಪಕ್ಷದ ವತಿಯಿಂದ ಹಮ್ಮಿಕೊಳ್ಳಲಾಗಿರುವ ಜನರೊಂದಿಗೆ ಜನತಾದಳ ಕಾರ್ಯಕ್ರಮದ ಸಮಾರೋಪ ಸಮಾರಂಭವು ಭಾನುವಾರ (ಮೇ 17) ಚಾಮುಂಡೇಶ್ವರಿ ಕ್ಷೇತ್ರದಲ್ಲಿ ನಡೆಯಲಿದೆ. ಇದೇ ಕಾರಣಕ್ಕಾಗಿ ಶಾಸಕ ಜಿ.ಟಿ. ದೇವೇಗೌಡರು ಪಕ್ಷದ ವರಿಷ್ಠರಾದ ಎಚ್.ಡಿ. ದೇವೇಗೌಡರನ್ನು ಮುಂಚಿತವಾಗಿಯೇ ಭೇಟಿಯಾಗಿ ಜನ್ಮದಿನದ ಶುಭಾಶಯ ಕೋರಿದ್ದಾರೆ. ಅವರ ಈ ಎಲ್ಲಾ ರಾಜಕೀಯ ತಂತ್ರಗಳು ನಮಗೆ ಚೆನ್ನಾಗಿ ಅರ್ಥವಾಗುತ್ತವೆ, ಎಂದು ಲೇವಡಿ ಮಾಡಿದರು.

ಜಿ.ಟಿ. ದೇವೇಗೌಡರ ಉದಾಸೀನದ ನೀತಿಯಿಂದ ಜೆಡಿಎಸ್ ಪಕ್ಷಕ್ಕೆ ಈ ಭಾಗದಲ್ಲಿ ಭಾರಿ ಹಿನ್ನಡೆಯಾಗಿದೆ ಎಂದು ಆರೋಪಿಸಿದ ಮಹೇಶ್, ಅವರು ಒಂದೊಂದು ಚುನಾವಣೆಯಲ್ಲೂ ಒಂದೊಂದು ರೀತಿಯ ತೀರ್ಮಾನಗಳನ್ನು ಕೈಗೊಳ್ಳುತ್ತಾರೆ. ಅವರ ಇಂತಹ ಗೊಂದಲದ ನಿರ್ಧಾರಗಳಿಂದ ನಮ್ಮ ನಿಷ್ಠಾವಂತ ಕಾರ್ಯಕರ್ತರಿಗೆ ತೀವ್ರ ಆಘಾತವಾಗಿದೆ. ಅವರು ತಮ್ಮ ತಪ್ಪುಗಳನ್ನು ತಿದ್ದಿಕೊಂಡು ಪಕ್ಷದಲ್ಲೇ ಉಳಿಯುವುದಾದರೆ ಅಥವಾ ಅವರ ಮೇಲೆ ವರಿಷ್ಠರಿಗೆ ನಂಬಿಕೆ ಬಂದು ಉಳಿಸಿಕೊಳ್ಳುವುದಾದರೆ ನಮ್ಮದೇನೂ ಅಭ್ಯಂತರವಿಲ್ಲ, ಪಕ್ಷಕ್ಕಿಂತ ನಮಗೆ ಯಾರೂ ದೊಡ್ಡವರಲ್ಲ. ಜೆಡಿಎಸ್ ಜಿ.ಟಿ. ದೇವೇಗೌಡರಿಗೆ ಎಲ್ಲಾ ರೀತಿಯ ಅಧಿಕಾರ ಮತ್ತು ಸ್ಥಾನಮಾನಗಳನ್ನು ನೀಡಿತ್ತು. ಆದರೂ ಅವರು ಪಕ್ಷಕ್ಕೆ ದ್ರೋಹ ಬಗೆದರು. ನಮಗೆ ಇಂತಹ ನಾಯಕರ ಅನಿವಾರ್ಯತೆ ಇಲ್ಲ, ಬದಲಿಗೆ ನಿಷ್ಠಾವಂತ ಕಾರ್ಯಕರ್ತರು ಇದ್ದರೆ ಸಾಕು. ಇದೇ ಕಾರಣಕ್ಕೆ ನಾವು ಈ ಭಾಗದಲ್ಲಿ ಸಾಮೂಹಿಕ ನಾಯಕತ್ವವನ್ನು ಬಲಪಡಿಸುತ್ತಿದ್ದೇವೆ, ಎಂದು ಮಹೇಶ್ ಸ್ಪಷ್ಟಪಡಿಸಿದರು.

# ವಿಜಯಪುರ ರಾಜ್ಯಮಟ್ಟದ ಬ್ಯಾಡ್ಮಿಂಟನ್ ಪಂದ್ಯಾವಳಿ ಇಂದು ಆರಂಭ 756 ಆಟಗಾರರು ಭಾಗಿ

**ವಿಜಯಪುರ, ಮೇ.16–** ಐತಿಹಾಸಿಕ ಗುಮ್ಮಟ ನಗರಿ ವಿಜಯ ಪುರದಲ್ಲಿ ಇದೇ ಮೊದಲ ಬಾರಿಗೆ ರಾಜ್ಯಮಟ್ಟದ ಬ್ಯಾಡ್ಮಿಂಟನ್ ಪಂದ್ಯಾವಳಿಯನ್ನು ಮೇ 17 ರಿಂದ ಆಯೋಜಿಸಲಾಗಿದೆ ಎಂದು ಕರ್ನಾಟಕ ಬ್ಯಾಡ್ಮಿಂಟನ್ ಸಂಸ್ಥೆ ಅಧ್ಯಕ್ಷ ಕುಮಾರ ಬಂಗಾರಪ್ಪ ತಿಳಿಸಿದರು.



ಸುದ್ದಿಗೋಷ್ಠಿಯಲ್ಲಿ, ಕರ್ನಾಟಕ ಬ್ಯಾಡ್ಮಿಂಟನ್ ಸಂಸ್ಥೆ ಹಾಗೂ ಬಿಎಲ್‌ಡಿಇ ಸಂಸ್ಥೆಯ ಸಹಯೋಗದಲ್ಲಿ ಅನೆಕ್ಸ್ ಸನ್‌ರೈಸರ್ ಟೈಟಲ್ ಕಾರ್ಡ್‌ನಡಿ ಈ ಪಂದ್ಯಾವಳಿ ನಡೆಯಲಿದೆ ಎಂದರು. ಈಗಾಗಲೇ ರಾಜ್ಯದ ವಿವಿಧ ಭಾಗಗಳಿಂದ 756 ಕ್ರೀಡಾಪಟುಗಳು ನೋಂದಾಯಿಸಿಕೊಂಡಿದ್ದು, ರಾಜ್ಯ, ರಾಷ್ಟ್ರ ಹಾಗೂ ಅಂತಾರಾಷ್ಟ್ರೀಯ ಮಟ್ಟದ ಆಟಗಾರರು ಪಾಲ್ಗೊಳ್ಳಲಿದ್ದಾರೆ ಎಂದು ಮಾಹಿತಿ ನೀಡಿದರು.

ಪಂದ್ಯಾವಳಿಯನ್ನು ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ. ಪಾಟೀಲ ಅವರು ಉದ್ಘಾಟಿಸಲಿದ್ದು, ಶಾಸಕ ಬಸನಗೌಡ ಪಾಟೀಲ ಯತ್ನಾಳ ಅವರ ಅಧ್ಯಕ್ಷತೆಯಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ಜಿಲ್ಲೆಯ ಎಲ್ಲ ಶಾಸಕರು, ಜನ ಪ್ರತಿನಿಧಿಗಳು ಭಾಗ ವಹಿಸಲಿದ್ದಾರೆ ಎಂದು ತಿಳಿಸಿದರು.

**ಅಸೋಸಿಯೇಶನ್ ಹಿನ್ನೆಲೆ:** 1951 ರಲ್ಲಿ ಮೈಸೂರು ಬ್ಯಾಡ್ಮಿಂಟನ್ ಅಸೋಸಿಯೇಷನ್ ಆಗಿ ಆರಂಭಗೊಂಡ ಸಂಸ್ಥೆ, 1972 ರಲ್ಲಿ ಕರ್ನಾಟಕ ನಾಮಕರಣದ ಬಳಿಕ ಕರ್ನಾಟಕ ಬ್ಯಾಡ್ಮಿಂಟನ್ ಅಸೋಸಿಯೇಶನ್ ಎಂದು ಮರುನಾಮಕರಣಗೊಂಡಿತು.

ಮೈಸೂರು ಒಡೆಯರಿಂದ ಆರಂಭ ಗೊಂಡ ಈ ಸಂಸ್ಥೆ 1992 ರ ವೇಳೆಗೆ ದೊಡ್ಡ ಸಂಸ್ಥೆಯಾಗಿ ಬೆಳೆದು, ಇಂದು ದೇಶದಲ್ಲೇ ಪ್ರಮುಖ ಬ್ಯಾಡ್ಮಿಂಟನ್ ಸಂಸ್ಥೆಗಳಲ್ಲಿ ಒಂದಾಗಿದೆ ಎಂದು ಕುಮಾರ ಬಂಗಾರಪ್ಪ ವಿವರಿಸಿದರು.

# ಯೋಗೀಶ್‌ಗೌಡ ಕೊಲೆ ಪ್ರಕರಣದಲ್ಲಿ ತನಿಖಾಧಿಕಾರಿ ಚನ್ನಕೇಶವ ಟೆಂಗರಿಕರ್‌ರಿಂದ ಗಂಭೀರ ಲೋಪ

**ಧಾರವಾಡ, ಮೇ 16:** ಬಿಜೆಪಿ ನಾಯಕ ಯೋಗೀಶ್ ಗೌಡ ಕೊಲೆ ಪ್ರಕರಣದ ಆರಂಭಿಕ ತನಿಖೆ ನಡೆಸಿದ್ದ ಅಂದಿನ ತನಿಖಾಧಿಕಾರಿ ಚನ್ನಕೇಶವ ಟೆಂಗರಿಕರ್ ಕಡೆಯಿಂದ ಗಂಭೀರ ಲೋಪಗಳಾಗಿವೆ ಎಂದು ಹೈಕೋರ್ಟ್ ಈಚೆಗೆ ಮೌಖಿಕವಾಗಿ ಅಭಿಪ್ರಾಯಪಟ್ಟಿದೆ.

ಕೊಲೆ ಪ್ರಕರಣದಲ್ಲಿ ಏಳು ವರ್ಷ ಶಿಕ್ಷೆ ವಿಧಿಸಿರುವುದನ್ನು ಬದಿಗೆ ಸರಿಸಿ, ಜಾಮೀನಿನ ಮೇಲೆ ಬಿಡುಗಡೆ ಮಾಡುವಂತೆ ಕೋರಿ ಮಾಜಿ ಪೊಲೀಸ್ ಅಧಿಕಾರಿಯಾದ ಟೆಂಗರಿಕರ್ ಸಲ್ಲಿಸಿರುವ ಕ್ರಿಮಿನಲ್ ಮೇಲ್ಮನವಿಯನ್ನು ನ್ಯಾಯಮೂರ್ತಿಗಳಾದ ಎಚ್.ಪಿ. ಸಂದೇಶ್ ಮತ್ತು ಪಿ ಶ್ರೀಸುಧಾ ಅವರ ರಜಾಕಾಲೀನ ವಿಭಾಗೀಯ ಪೀಠ ನಡೆಸಿತು.

ಸಾಕ್ಷ್ಯ ನಾಶ ಮಾಡಿ ನೈಜ ಆರೋಪಿಗಳನ್ನು ರಕ್ಷಿಸಿದ ಆರೋಪಕ್ಕೆ ಸಂಬಂಧಿಸಿದಂತೆ 19ನೇ ಆರೋಪಿಯಾಗಿರುವ ಟೆಂಗರಿಕರ್‌ಗೆ ವಿಚಾರಣಾಧೀನ ನ್ಯಾಯಾಲಯವು ಏಳು ವರ್ಷ ಶಿಕ್ಷೆ ವಿಧಿಸಿದೆ. ಪೊಲೀಸ್ ಅಧಿಕಾರಿಯಾಗಿದ್ದ ಟೆಂಗರಿಕರ್ ಕೆಲಸ ಸಂತ್ರಸ್ತರಿಗೆ ನೆರವಾಗುವುದಾಗಿತ್ತೇ ವಿನಃ ಆರೋಪಿಗಳ ಜೊತೆ ಕೈಜೋಡಿಸುವುದಾಗಿರಲಿಲ್ಲ ಎಂದು ಪೀಠ ಹೇಳಿದೆ.

ಕೊಲೆಯಾದ ತಕ್ಷಣ ಸಿಸಿಟಿವಿ ತುಣುಕುಗಳನ್ನು ವಶಕ್ಕೆ ಪಡೆದು ಅವುಗಳನ್ನು ಪರಿಶೀಲಿಸಿದ್ದರೆ ಆರಂಭಿಕ ಹಂತದಲ್ಲೇ ನೈಜ ಆರೋಪಿಗಳನ್ನು ಪತ್ತೆ ಮಾಡಬಹುದಿತ್ತು ಎಂದು ನ್ಯಾಯಾಲಯ ಹೇಳಿದೆ. ಅಲ್ಲದೇ, ಕೊಲೆ ಪ್ರಕರಣದಲ್ಲಿ ಆರೋಪಿ ಅಪರಾಧಿ ಎಂದು ಸಾಬೀತಾದ ನಂತರ ಪ್ರಕರಣ ನೋಡುವುದಕ್ಕೂ ಆತನಿಗೆ ಶಿಕ್ಷೆಯಾಗುವುದಕ್ಕೂ ಮುಂಚೆ ನೋಡುವುದಕ್ಕೂ ಬೇರೆ ಮಾನದಂಡಗಳಿವೆ. ಪೊಲೀಸರು ಸಂಗ್ರಹಿಸಿರುವ ದಾಖಲೆ ಮತ್ತು ವಿಚಾರಣಾಧೀನ ಪರಿಗಣಿಸಿರುವ ದಾಖಲೆಗಳನ್ನು ನೋಡಬೇಕಾಗುತ್ತದೆ. ಶಿಕ್ಷೆಯದ ಮೇಲಿನ ಪ್ರಕರಣವೇ ಬೇರೆ. ಇದರಲ್ಲಿ ಪೂರ್ವಾಗ್ರಹದ ಪ್ರಶ್ನೆ ಇರುವುದಿಲ್ಲ. ಹೀಗಾಗಿ, ವಿಸ್ತೃತವಾಗಿ ವಿಚಾರಣೆ ನಡೆಸಬೇಕಿದೆ ಎಂದು ನ್ಯಾಯಾಲಯ ಹೇಳಿತು.



ಟೆಂಗರಿಕರ್ ಪ್ರತಿನಿಧಿಸಿದ್ದ ಹಿರಿಯ ವಕೀಲ ಪಿ ಪಿ ಹೆಗ್ಡೆ ಅವರು ಕೊಲೆಯಾದ ಎರಡು ದಿನಗಳಲ್ಲಿ ಟೆಂಗರಿಕರ್ ಸಿಸಿಟಿವಿ ದೃಶ್ಯಾವಳಿ ಸಂಗ್ರಹಿಸಿದ್ದಾರೆ. ಆದರೂ ಸರಿಯಾಗಿ ತನಿಖೆ ನಡೆಸಿಲ್ಲ ಎಂಬ ಆರೋಪ ಮಾಡಲಾಗಿದೆ ಎಂದರು. ಇದಕ್ಕೆ ಆಕ್ಷೇಪಿಸಿದ ಸಿಬಿಐ ಪ್ರತಿನಿಧಿಸಿದ್ದ ಹೆಚ್ಚುವರಿ ಸಾಲಿಸಿಟರ್ ಜನರಲ್ ಎಸ್.ವಿ. ರಾಜು ಅವರು ಮುಗ್ಧರನ್ನು ಕೊಲೆ ಪ್ರಕರಣದಲ್ಲಿ ಸಿಲುಕಿಸಿ ನೈಜ ಆರೋಪಿಗಳನ್ನು ರಕ್ಷಿಸುವ ಕೆಲಸವನ್ನು ಟೆಂಗರಿಕರ್ ಮಾಡಿದ್ದಾರೆ. ಕೊಲೆಗೆ ಬಳಸಿದ್ದ ಶಸ್ತ್ರಾಸ್ತ್ರಗಳನ್ನು ಮರೆಮಾಚಿ, ನಕಲಿ ಅಸ್ತ್ರಗಳಿಗೆ ಮರಣೋತ್ತರ ಪರೀಕ್ಷೆಯ ಬಳಿಕ ಶವದ ರಕ್ತವನ್ನು ಹಾಕಲಾಗಿದೆ. ಸತ್ಯ ನುಡಿಯದಂತೆ ಸಾಕ್ಷಿಗಳಿಗೆ ಬೆದರಿಕೆ ಹಾಕಿದ್ದಾರೆ. ಏಳು ವರ್ಷ ಶಿಕ್ಷೆಯಲ್ಲಿ 72 ದಿನ ಮಾತ್ರ ಟೆಂಗರಿಕರ್ ಶಿಕ್ಷೆ ಅನುಭವಿಸಿದ್ದಾರೆ. ಈ ಹಂತದಲ್ಲಿ ಅವರಿಗೆ ನೆರವಾಗಬಾರದು ಎಂದರು.

ಎಲ್ಲರ ವಾದ ಆಲಿಸಿದ ಪೀಠವು ಸಿಬಿಐ ಸಲ್ಲಿಸಿರುವ ಆಕ್ಷೇಪಣೆಯನ್ನು ಸ್ವೀಕರಿಸಿ, ವಿಚಾರಣೆಯನ್ನು ಮೇ 26ಕ್ಕೆ ಮುಂದೂಡಿತು.

2016ರ ಜೂನ್ 15ರಂದು ಧಾರವಾಡದಲ್ಲಿ ಯೋಗೀಶ್ ಗೌಡ ಹತ್ಯೆಯಾಗಿತ್ತು. ಆ ಸಂದರ್ಭದಲ್ಲಿ ಧಾರವಾಡ ಸಬ್‌ಅರ್ಬನ್ ಠಾಣೆಯ ಇನ್‌ಸ್ಪೆಕ್ಟರ್ ಆಗಿ ಟೆಂಗರಿಕರ್ ಕರ್ತವ್ಯನಿರ್ವಹಿಸುತ್ತಿದ್ದರು. ಕಾಂಗ್ರೆಸ್ ನಾಯಕ ವಿನಯ್ ಕುಲಕರ್ಣಿಯನ್ನು ರಕ್ಷಿಸಲು ಟೆಂಗರಿಕರ್ ಸಾಕ್ಷ್ಯ ನಾಶ ಮಾಡಿದ್ದರು. ಈ ಪ್ರಕರಣದಲ್ಲಿ ವಿನಯ್ ಕುಲಕರ್ಣಿ ಸೇರಿ 16 ಮಂದಿಗೆ ಜೀವಾವಧಿ ಶಿಕ್ಷೆಯಾಗಿದೆ.

# ಸಿಮೆಂಟ್ ಲಾರಿ, ಟ್ಯಾಂಕರುಗಳು ಹಾವಳಿ ಸಾರ್ವಜನಿಕ ಸುಗಮ ಸಂಚಾರಕ್ಕೆ ಸಂಚಕಾರ

**ಕಲಬುರಗಿ, ಮೇ. 16:** ಜಿಲ್ಲೆಯ ಸಿಮೆಂಟ್ ಸಿಟಿ ಎಂದೇ ಖ್ಯಾತಿ ಪಡೆದಿರುವ ಸೇಡಂ ನಗರವು ಎರಡು ಬೃಹತ್ ಸಿಮೆಂಟ್ ಕಾರ್ಖಾನೆಗಳನ್ನು ಹೊಂದಿರುವ ನಗರವಾಗಿದೆ. ಸಿಮೆಂಟ್ ಹೊತ್ತ ನೂರಾರು ಲಾರಿಗಳು ಮತ್ತು ಸಿಮೆಂಟ್ ಕಾಂಕ್ರಿಟ್ ಮಿಶ್ರಣಗಳನ್ನು ಹೊತ್ತ ಟ್ಯಾಂಕರುಗಳು ನಿತ್ಯ ಸಾಲು ಸಾಲು ನಿಲ್ಲುವುದರಿಂದ ಚತುಷ್ಪಥ ರಸ್ತೆ ಕಾಮಗಾರಿ ನಡುವೆ ಅಡ್ಡಾದಿಡ್ಡಿ ವಾಹನ ಪಾರ್ಕಿಂಗ್, ಸಾರ್ವಜನಿಕರ ಸುಗಮ ಸಂಚಾರಕ್ಕೆ ತೀವ್ರ ಸಂಚಕಾರ ಉಂಟಾಗಿದೆ. ಸೇಡಂ ನಗರವು ದಿನೇದಿನೇ ಬೆಳೆಯುತ್ತಿರುವ ಜನಸಂಖ್ಯೆ ಮತ್ತು ವಾಹನಗಳ ಒತ್ತಡವನ್ನು ಮನಗಂಡು, ಸಂಚಾರ ದಟ್ಟಣೆ ನಿವಾರಿಸುವ ಉದ್ದೇಶದಿಂದ ಸ್ಥಳೀಯ ಶಾಸಕರು ಹಾಗೂ ಸಚಿವರಾದ ಡಾ. ಶರಣಪ್ರಕಾಶ ಪಾಟೀಲ ಅವರು ಅತ್ಯಂತ ಮಹತ್ವಾಕಾಂಕ್ಷೆಯ ಚತುಷ್ಪಥ ರಸ್ತೆ ನಿರ್ಮಾಣ ಕಾರ್ಯಕ್ಕೆ ಚಾಲನೆ ನೀಡಿದ್ದಾರೆ. ಆದರೆ, ರಸ್ತೆಯ ಕೆಲಸ ಪ್ರಗತಿಯಲ್ಲಿರುವಾಗಲೇ ಲಾರಿ ಮತ್ತು ಬುಲ್ಡೋಜರ್‌ಗಳ ಅಸಮರ್ಪಕ ಪಾರ್ಕಿಂಗ್‌ನಿಂದಾಗಿ ಸಾರ್ವಜನಿಕರ ಸುಗಮ ಸಂಚಾರಕ್ಕೆ ಅಡ್ಡಿ ಉಂಟಾಗುತ್ತಿದೆ.

**ಪಾರ್ಕಿಂಗ್ ಕಿರಿಕಿರಿ–ಸಾರ್ವಜನಿಕರ ಆಕ್ರೋಶ :** ಸೇಡಂ ಪಟ್ಟಣದ ಪ್ರಮುಖ ರಸ್ತೆಗಳಲ್ಲಿ ಸಂಚರಿಸುವ ವಾಹನ ಸವಾರರು ಪ್ರತಿದಿನ ಹೈರಾಣಾಗುತ್ತಿದ್ದಾರೆ. ಚಿತ್ರದಲ್ಲಿ ಕಾಣುವಂತೆ, ರಸ್ತೆಯ ಒಂದು ಬದಿಯನ್ನು ಸಂಪೂರ್ಣವಾಗಿ ಬೃಹತ್ ಟ್ಯಾಂಕರ್ ಮತ್ತು ಲಾರಿಗಳು ಆಕ್ರಮಿಸಿಕೊಂಡಿವೆ.

**ಸುಗಮ ಸಂಚಾರಕ್ಕೆ ತಡೆ:** ರಸ್ತೆ ವಿಸ್ತರಣೆಯ ಉದ್ದೇಶವೇ ಸಂಚಾರ ದಟ್ಟಣೆ ಕಡಿಮೆ ಮಾಡುವುದಾಗಿದ್ದರೂ, ರಸ್ತೆಯ ಮೇಲೆಯೇ ಸಾಲುಗಟ್ಟಿ ನಿಲ್ಲುವ ಲಾರಿಗಳಿಂದಾಗಿ ಓಡಾಟಕ್ಕೆ ಜಾಗವಿಲ್ಲದಂತಾಗಿದೆ.

**ಅಪಘಾತದ ಭೀತಿ:** ರಾತ್ರಿ ವೇಳೆ ಸರಿಯಾದ ಬೆಳಕಿನ ವ್ಯವಸ್ಥೆ ಇಲ್ಲದ ಸಮಯದಲ್ಲಿ ರಸ್ತೆ ಬದಿಯಲ್ಲಿ ನಿಲ್ಲಿಸಿರುವ ಬೃಹತ್ ವಾಹನಗಳು ಸಣ್ಣ ವಾಹನ ಸವಾರರಿಗೆ ಮಾರಕವಾಗಿ ಪರಿಣಮಿಸಿವೆ.




**ಕಾಮಗಾರಿಗೆ ಅಡ್ಡಿ:** ರಸ್ತೆ ನಿರ್ಮಾಣಕ್ಕೆ ಬಳಸುವ ಬುಲ್ಡೋಜರ್ ಹಾಗೂ ಇನ್ನಿತರ ಯಂತ್ರೋಪಕರಣಗಳನ್ನು ಸಹ ರಸ್ತೆಯ ಮೇಲೆಯೇ ಅಡ್ಡಾದಿಡ್ಡಿಯಾಗಿ ಬಿಡುತ್ತಿರುವುದು ಪಾದಚಾರಿಗಳಿಗೆ ಮತ್ತು ದ್ವಿಚಕ್ರ ವಾಹನ ಸವಾರರಿಗೆ ಕಿರಿಕಿರಿ ಉಂಟುಮಾಡುತ್ತಿದೆ.

**ಶಾಸಕರ ದೂರದೃಷ್ಟಿಗೆ ಲಾರಿ ಮಾಲೀಕರ ತಣ್ಣೀರು:** ಕ್ಷೇತ್ರದ ಶಾಸಕರೂ ಆಗಿರುವ ಸಚಿವ ಡಾ. ಶರಣಪ್ರಕಾಶ ಪಾಟೀಲ ಅವರು ಪಟ್ಟಣದ ಸೌಂದರ್ಯೀಕರಣ ಮತ್ತು ಅಭಿವೃದ್ಧಿಗಾಗಿ ಕೋಟ್ಯಂತರ ರೂಪಾಯಿ ಅನುದಾನ ತಂದು ಚತುಷ್ಪಥ ರಸ್ತೆ ಮಾಡುತ್ತಿದ್ದಾರೆ. ಆದರೆ, ಈ ಅಭಿವೃದ್ಧಿ ಕೆಲಸಕ್ಕೆ ಸಹಕರಿಸಬೇಕಾದ ಲಾರಿ ಮಾಲೀಕರು ಮತ್ತು ಚಾಲಕರು ರಸ್ತೆಯನ್ನೇ ತಮ್ಮ ಖಾಸಗಿ ಪಾರ್ಕಿಂಗ್ ತಾಣವನ್ನಾಗಿ ಮಾಡಿಕೊಂಡಿರುವುದು ಸಾರ್ವಜನಿಕರ ಕೆಂಗಣ್ಣಿಗೆ ಗುರಿಯಾಗಿದೆ. ಈ ಬಗ್ಗೆ ಅಧಿಕಾರಿಗಳು ಗಮನಹರಿಸುವರೇ..? ಪೊಲೀಸ್ ಇಲಾಖೆ ಮತ್ತು ಪುರಸಭೆ ಅಧಿಕಾರಿಗಳು ಈ ಬಗ್ಗೆ ತುರ್ತು ಗಮನಹರಿಸಿ, ರಸ್ತೆ ಬದಿಯಲ್ಲಿ ಅನಧಿಕೃತವಾಗಿ ಪಾರ್ಕಿಂಗ್ ಮಾಡುವ ವಾಹನಗಳ ವಿರುದ್ಧ ದಂಡ ವಿಧಿಸಬೇಕು. ಆಗ ಮಾತ್ರ ಶಾಸಕರ ಕನಸಿನ ಸುಗಮ ಸಂಚಾರದ ಯೋಜನೆ ಯಶಸ್ವಿಯಾಗಲು ಸಾಧ್ಯ ಎಂಬುದು ಸಾರ್ವಜನಿಕರ ಆಶಯವಾಗಿದೆ. ಸೇಡಂ ನಗರದ ರಸ್ತೆಗಳು ಅಗಲವಾಗುತ್ತಿದೆ ಎಂದು ಖುಷಿ ಪಡುವಷ್ಟರಲ್ಲಿ, ಅರ್ಧ ರಸ್ತೆಯನ್ನು ಲಾರಿಗಳೇ ತಿನ್ನುತ್ತಿವೆ. ಸಂಬಂಧಪಟ್ಟ ಅಧಿಕಾರಿಗಳು ತಕ್ಷಣ ಕ್ರಮ ಕೈಗೊಂಡು ಈ ವಾಹನಗಳನ್ನು ತೆರವುಗೊಳಿಸಿ ಮುಂದೆ ಲಾರಿಗಳು ನಿಲ್ಲಿಸದಂತೆ ಎಚ್ಚರಿಕೆ ನೀಡಬೇಕು. ಆ ಮೂಲಕ ಮುಂದಾಗುವ ಅನಾಹುತ ತಪ್ಪಿಸಿದಂತಾಗುತ್ತದೆ.

# ಇಂಡಸ್ಟ್ರಿಯಲ್ ಟೌನ್‌ಶಿಪ್; ಬೀದರ್‌ಗೆ ಅವಕಾಶದ ಬಾಗಿಲು

**ಬೀದರ್, ಮೇ. 16:** ಜಿಲ್ಲೆಯ ತೆಲಂಗಾಣ ಗಡಿಗೆ ಹೊಂದಿಕೊಂಡಿರುವ ನೆರೆಯ ಸಂಗಾರೆಡ್ಡಿ ಜಿಲ್ಲೆಯ ಜಹೀರಾಬಾದ್‌ನಲ್ಲಿ 'ಇಂಡಸ್ಟ್ರಿಯಲ್ ಟೌನ್‌ಶಿಪ್' (ಇಂಡಸ್ಟ್ರಿಯಲ್ ಸ್ಮಾರ್ಟ್ ಸಿಟಿ) ನಿರ್ಮಾಣ ಚಟುವಟಿಕೆಗಳು ಗರಿಗೆದರಿದ್ದು, ಸಹಜವಾಗಿಯೇ ಬೀದರ್ ಜಿಲ್ಲೆಯ ಜನರ ಸಂತಸಕ್ಕೂ ಕಾರಣವಾಗಿದೆ. ಜಹೀರಾಬಾದ್ ಸಮೀಪದ ನ್ಯಾಲಕಲ್ ಮತ್ತು ಝರಾಸಂಗಮ ಮಂಡಲ್ ವ್ಯಾಪ್ತಿಯಲ್ಲಿ 'ಇಂಡಸ್ಟ್ರಿಯಲ್ ಟೌನ್‌ಶಿಪ್' ತಲೆ ಎತ್ತಲಿದೆ. ಈ ಸ್ಥಳಗಳು ಬೀದರ್‌ನಿಂದ 30 ರಿಂದ 40 ಕಿ.ಮೀ ವ್ಯಾಪ್ತಿಯೊಳಗೆ ಬರುತ್ತವೆ. ಎರಡು ಕಡೆಯವರ ನಡುವೆ ಆರಂಭದಿಂದಲೂ ಉತ್ತಮ ಸಂಬಂಧವಿದೆ. ಗಡಿ, ಭಾಷೆ ತಗಾದೆ ಉದ್ಭವಿಸಿರುವುದು ತೀರ ವಿರಳ. ಎರಡೂ ಕಡೆಯವರ ನಡುವೆ ಕೊಡು ಕೊಳ್ಳುವಿಕೆಗಳ ಸೌಹಾರ್ದತೆ ಇರುವುದರಿಂದ ಉತ್ತಮ ಬಾಂಧ್ಯವಿದೆ. ಬೃಹತ್ ಕೈಗಾರಿಕಾ ಟೌನ್‌ಶಿಪ್ ನಿರ್ಮಾಣದಿಂದ 2.77ಕ್ಕೂ ಲಕ್ಷಕ್ಕೂ ಅಧಿಕ ಹುದ್ದೆ ಸೃಷ್ಟಿಯಾಗುವ ಸಾಧ್ಯತೆ ಇದೆ. ಆಟೋಮೊಬೈಲ್, ಎಲೆಕ್ಟ್ರಾನಿಕ್ಸ್, ಆಹಾರ ಸಂಸ್ಕರಣೆ ಸೇರಿದಂತೆ ವಿವಿಧ ಪ್ರಕಾರದ ಉದ್ಯಮಗಳು ಬರಲಿವೆ.

ತೆಲಂಗಾಣ ರಾಜ್ಯ ಕೈಗಾರಿಕಾ ಮೂಲಸೌಕರ್ಯ ನಿಗಮವು ಕೈಗಾರಿಕಾ ಕ್ಷೇತ್ರದಲ್ಲಿ ಹೆಚ್ಚಿನ ಪ್ರಗತಿ ಸಾಧಿಸುವ ಉದ್ದೇಶದಿಂದ ಈ ಮಹತ್ವದ ಯೋಜನೆಯನ್ನು ಜಹೀರಾಬಾದ್‌ಗೆ ವಿಸ್ತರಿಸುತ್ತಿದೆ. ಇತ್ತೀಚೆಗೆ ಪ್ರಧಾನಿ ನರೇಂದ್ರ ಮೋದಿಯವರು ಈ ಯೋಜನೆಗೆ ಚಾಲನೆ ಕೊಟ್ಟಿದ್ದಾರೆ. ಇದೊಂದು ರಾಷ್ಟಮಟ್ಟದ ದೊಡ್ಡ ಯೋಜನೆ ಆಗಿರುವುದರಿಂದ ಸಹಜವಾಗಿಯೇ ಎಲ್ಲರಿಗೂ ಉದ್ಯೋಗಾವಕಾಶಗಳು ಲಭಿಸಲಿವೆ. ಆದರೆ, ಬೀದರ್ ಸಮೀಪದಲ್ಲೇ ಇರುವುದರಿಂದ ಇಲ್ಲಿನ ಯುವಕ/ಯುವತಿಯರಿಗೆ ಹೆಚ್ಚಿನ ಅವಕಾಶಗಳು ದೊರೆಯಲಿವೆ. ಅದರಲ್ಲೂ ಎಂಜಿನಿಯರಿಂಗ್, ಡಿಪ್ಲೋಮಾ, ಐಟಿಐ ಸೇರಿದಂತೆ ಇತರೆ ತಾಂತ್ರಿಕ ಪದವಿ ಕೋರ್ಸ್‌ಗಳನ್ನು ಮಾಡಿದವರಿಗೆ ಸಹಜವಾಗಿಯೇ ಬೇಡಿಕೆ ಬರಲಿದೆ. ತಮ್ಮ ಪಕ್ಕದ ಊರಿನಲ್ಲಿಯೇ ಉದ್ಯೋಗಾವಕಾಶಗಳು ಸಿಕ್ಕರೆ ದೂರದ ಬೆಂಗಳೂರು, ಮುಂಬೈ, ಪುಣೆಗೆ ವಲಸೆ ಹೋಗುವುದು ಇದರಿಂದ ತಪ್ಪಲಿದೆ. ರಾಜಧಾನಿ ಬೆಂಗಳೂರಿನ ನಂತರ ಐಟಿ ಕ್ಷೇತ್ರದಲ್ಲಿ ಹೈದರಾಬಾದ್ ಗಣನೀಯವಾಗಿ ಬೆಳೆದಿರುವುದರಿಂದ ಜಿಲ್ಲೆಯ ಅನೇಕ ಯುವಕ/ಯುವತಿಯರು ಈಗಾಗಲೇ ಅಲ್ಲಿ ಕೆಲಸ ನಿರ್ವಹಿಸುತ್ತಿದ್ದಾರೆ. ಈಗ ಇಂಡಸ್ಟ್ರಿಯಲ್ ಟೌನ್‌ಶಿಪ್‌ನಿಂದ ಮತ್ತಷ್ಟು ಮಂದಿಗೆ ನೌಕರಿಗಳು ಲಭಿಸಲಿವೆ.



ಯೋಜನೆಗೆ ಒಟ್ಟು 12,635 ಎಕರೆ ಜಮೀನು ಬೇಕು. ಆದರೆ, 2029ರ ವೇಳೆಗೆ 9 ಸಾವಿರ ಎಕರೆ ಪ್ರದೇಶದಲ್ಲಿ ಮೊದಲ ಹಂತದ ಯೋಜನೆ ಅನುಷ್ಠಾನಗೊಳಿಸಲು ನಿರ್ಧರಿಸಲಾಗಿದೆ. ತೆಲಂಗಾಣ ಮುಖ್ಯಮಂತ್ರಿ ರೇವಂತ್ ರೆಡ್ಡಿ ಅವರು ವಿಶೇಷ ಆಸ್ಥೆ ವಹಿಸಿ, ಯೋಜನೆಯ ಮೇಲೆ ವಿಶೇಷ ನಿಗಾ ವಹಿಸಿದ್ದಾರೆ. ಹೀಗಾಗಿ ಎಲ್ಲವೂ ಅಂದುಕೊಂಡಂತೆ ನಡೆದರೆ ಬೀದರ್ ಜಿಲ್ಲೆಯ ಯುವಕ/ಯುವತಿಯರ ಮಟ್ಟಿಗೆ ದೊಡ್ಡ ವಿಷಯವೇ ಸರಿ. ಕೇಂದ್ರ ಸರ್ಕಾರವು ದೇಶದ ಹತ್ತು ರಾಜ್ಯಗಳ 12 ಕಡೆಗಳಲ್ಲಿ ಈ ಯೋಜನೆ ಹಾಕಿಕೊಂಡಿದೆ. ಈ ಯೋಜನೆಯ ಅನುಷ್ಠಾನಕ್ಕಾಗಿ ಒಟ್ಟು 28 ಸಾವಿರ ಕೋಟಿ ತೆಗೆದಿರಿಸಿದೆ. ಆಯಾ ರಾಜ್ಯಗಳ ಕೈಗಾರಿಕೆಗಳ ನಿಗಮದ ಸಹಯೋಗದಲ್ಲಿ ಯೋಜನೆ ಅನುಷ್ಠಾನಗೊಳಿಸಲಾಗುತ್ತದೆ. ತೆಲಂಗಾಣದ ಜಹೀರಾಬಾದ್ ಕೂಡ ಈ ಯೋಜನೆಯಡಿ ಸೇರಿದೆ. ಕರ್ನಾಟಕ ರಾಜ್ಯವೂ ಇದಕ್ಕೆ ಸೇರ್ಪಡೆಯಾಗಿಲ್ಲ.

**ಇಂಡಸ್ಟ್ರಿ ಟೌನ್‌ಶಿಪ್ ಹೇಗಿರಲಿದೆ :** ಮುಂಬೈ–ಹೈದರಾಬಾದ್ ರಾಷ್ಟ್ರೀಯ ಹೆದ್ದಾರಿಯಲ್ಲಿರುವ ಜಹೀರಾಬಾದ್ ಸಮೀಪದ ನ್ಯಾಲಕಲ್ ಮತ್ತು ಝರಾಸಂಗಮ ಮಂಡಲ್ ವ್ಯಾಪ್ತಿಯಲ್ಲಿ ಸ್ಥಳ ಆಯ್ಕೆ 2.77 ಲಕ್ಷಕ್ಕೂ ಅಧಿಕ ಉದ್ಯೋಗ ಸೃಷ್ಟಿಸುವ ಗುರಿ, ಉತ್ಪಾದನಾ ವಲಯದ ಬಲವರ್ಧನೆ. ಆಟೊಮೊಬೈಲ್ಸ್, ಎಲೆಕ್ಟ್ರಾನಿಕ್ಸ್ ಮತ್ತು ಫಾರ್ಮಸುಟಿಕಲ್ಸ್ ಕ್ಷೇತ್ರದಲ್ಲಿ ಹೆಚ್ಚಿನ ಹೂಡಿಕೆ ಒಟ್ಟು 12,635 ಎಕರೆ ಜಮೀನಿನಲ್ಲಿ ಇಂಡಸ್ಟ್ರಿಯಲ್ ಟೌನ್‌ಶಿಪ್. ಮೊದಲ ಹಂತದಲ್ಲಿ 9 ಸಾವಿರ ಎಕರೆ ಜಮೀನು ಸ್ವಾಧೀನಪಡಿಸಿಕೊಂಡು ಕೆಲಸ ಆರಂಭ. ಆರಂಭದಲ್ಲಿ ಒಟ್ಟು 2,369 ಕೋಟಿ ಹೂಡಿಕೆ. ಒಟ್ಟು 17,300 ಕೋಟಿ ಮೊತ್ತದ ಯೋಜನೆ ಕೈಗಾರಿಕೆಗಳು, ವಸತಿ ಪ್ರದೇಶ, ವಾಣಿಜ್ಯ ಪ್ರದೇಶ ಒಳಗೊಂಡಿರಲಿದೆ. ಹುಂಡೈ ಕಂಪನಿಯಿಂದ ಅತಿ ಹೆಚ್ಚು ಹೂಡಿಕೆ. ಭವಿಷ್ಯದಲ್ಲಿ ದಕ್ಷಿಣ ಭಾರತದ ಪ್ರಮುಖ ತಯಾರಿಕಾ ಕ್ಷೇತ್ರವಾಗಿ ಮಾರ್ಪಾಡು ಸಾಧ್ಯತೆ ಇದೆ. ಜಹೀರಾಬಾದ್ ಏಕೆ ಆಯ್ಕೆ?: ತೆಲಂಗಾಣದ ಸಂಗಾರೆಡ್ಡಿ ಜಿಲ್ಲೆಯ ಜಹೀರಾಬಾದ್‌ನಲ್ಲಿ ಇಂಡಸ್ಟ್ರಿಯಲ್ ಟೌನ್‌ಶಿಪ್ ನಿರ್ಮಾಣಕ್ಕೆ ಹಲವು ಕಾರಣಗಳಿವೆ.

ಜಹೀರಾಬಾದ್, ತೆಲಂಗಾಣದ ಗಡಿ ಭಾಗದಲ್ಲಿದ್ದು, ಕರ್ನಾಟಕದ ಬೀದರ್ ಜಿಲ್ಲೆಗೆ ಹೊಂದಿಕೊಂಡಿದೆ. ಇಲ್ಲಿ ಈಗಾಗಲೇ ಮಹೀಂದ್ರಾ ಸೇರಿದಂತೆ ಹಲವು ಕೈಗಾರಿಕೆಗಳಿವೆ. ಎಲ್ಲಕ್ಕಿಂತ ಮುಖ್ಯವಾಗಿ ಜಹೀರಾಬಾದ್ ಮುಂಬೈ–ಹೈದರಾಬಾದ್ ರಾಷ್ಟ್ರೀಯ ಹೆದ್ದಾರಿ 65ರ ಮೇಲಿದೆ. ಹೈದರಾಬಾದಿನ ಅಂತರರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಕ್ರಮಿಸಲು ಎರಡು ಗಂಟೆ ಅವಧಿ ಬೇಕು. ಉತ್ತಮ ರೈಲು ಸಂಪರ್ಕವೂ ಇದೆ. ಉತ್ತಮ ಸಂಪರ್ಕ ವ್ಯವಸ್ಥೆ ಇರುವುದರಿಂದಲೇ ಜಹೀರಾಬಾದ್ ಅನ್ನು ಆಯ್ಕೆ ಮಾಡಲಾಗಿದೆ.

**ಗರಿಗೆದರಿದ ರಿಯಲ್ ಎಸ್ಟೇಟ್:** ಜಹೀರಾಬಾದ್‌ನಲ್ಲಿ ಇಂಡಸ್ಟ್ರಿಯಲ್ ಟೌನ್‌ಶಿಪ್ ನಿರ್ಮಿಸುವ ವಿಚಾರ ನಿನ್ನೆ, ಮೊನ್ನೆಯದಲ್ಲ. ದಶಕದಿಂದ ಈ ನಿಟ್ಟಿನಲ್ಲಿ ಪ್ರಯತ್ನಗಳು ನಡೆಯುತ್ತಿವೆ. ಇದನ್ನರಿತುಕೊಂಡು ರಿಯಲ್ ಎಸ್ಟೇಟ್ ಕ್ಷೇತ್ರದ ದೊಡ್ಡ ಕಂಪನಿಗಳು ಯೋಜನೆ ಜಾರಿಗೂ ಮುನ್ನವೇ ಜಹೀರಾಬಾದ್ ಸುತ್ತಮುತ್ತ ಕಾಲಿಟ್ಟಿವೆ. ಮಹೀಂದ್ರಾ, ಎಂಪೈರ್ ಸೇರಿದಂತೆ ಹಲವು ಕಂಪನಿಗಳು ದೊಡ್ಡ ದೊಡ್ಡ ಲೇಔಟ್‌ಗಳನ್ನು ನಿರ್ಮಿಸಿವೆ. ಹೊಸದಾಗಿ ಹೊಸ ಲೇಔಟ್‌ಗಳು ತಲೆ ಎತ್ತುತ್ತಿವೆ. ಇನ್ನು, ಬೀದರ್‌ನಿಂದ ಸಮೀಪದಲ್ಲಿರುವುದರಿಂದ ಜಿಲ್ಲೆಯ ಹಲವರು ಜಹೀರಾಬಾದ್ ಸುತ್ತಮುತ್ತ ಕೃಷಿ ಜಮೀನು ಖರೀದಿಸಿದ್ದಾರೆ. ಶಾಲಾ, ಕಾಲೇಜು, ಲೇಔಟ್ ಎಲ್ಲದರಲ್ಲಿ ಬೀದರ್ ಜಿಲ್ಲೆಯವರು ಹೂಡಿಕೆ ಮಾಡಿದ್ದಾರೆ. ಮಾಡುತ್ತಿದ್ದಾರೆ.

ಬದಲಾಗಲಿದೆ ಬೀದರ್ ಚಹರೆ: ಎಲ್ಲವೂ ಅಂದುಕೊಂಡಂತೆ ಇಂಡಸ್ಟ್ರಿಯಲ್ ಟೌನ್‌ಶಿಪ್ ನಿರ್ಮಾಣವಾದರೆ ಬೀದರ್ ಚಹರೆ ಬದಲಾಗಲಿದೆ. ಅದರಲ್ಲೂ ಬೀದರ್ ನಗರ ಹಾಗೂ ಜಹೀರಾಬಾದ್‌ಗೆ ಹೊಂದಿಕೊಂಡಿರುವ ಸ್ಥಳಗಳಿಗೆ ಹೆಚ್ಚಿನ ಬೇಡಿಕೆ ಸೃಷ್ಟಿಯಾಗಲಿದೆ.

# ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ

ಕಬ್ಬನ್ ಉದ್ಯಾನವನ, ಬೆಂಗಳೂರು

# ಧನ್ಯವಾದಗಳು





## ಕರ್ನಾಟಕದ ಮುಖ್ಯಮಂತ್ರಿಗಳಾದ ಶ್ರೀ ಸಿದ್ದರಾಮಯ್ಯನವರಿಗೆ ಹಾಗೂ ಉಪ ಮುಖ್ಯಮಂತ್ರಿಗಳಾದ ಶ್ರೀ ಡಿ.ಕೆ.ಶಿವಕುಮಾರ್ ಅವರಿಗೆ ಅನಂತ ಅನಂತ ಧನ್ಯವಾದಗಳು

ರಾಜ್ಯ ಸರ್ಕಾರಿ ನೌಕರರು ಹಾಗೂ ನಿವೃತ್ತರ ತುಟ್ಟಿಭತ್ಯೆಯನ್ನು 2026ರ ಜನವರಿ 1ರಿಂದಲೇ ಪೂರ್ವಾನ್ವಯವಾಗುವಂತೆ ಶೇ.1.5ರಷ್ಟು ಹೆಚ್ಚಳ ಮಾಡಿ ಆರ್ಥಿಕ ಇಲಾಖೆ ಆದೇಶ ಹೊರಡಿಸಲು ಹಾಗೂ ಶೇ.14.25ರಷ್ಟಿದ್ದ ಮೂಲ ವೇತನದ ತುಟ್ಟಿಭತ್ಯೆಯನ್ನು ಹೊಸದಾಗಿ ಶೇ.15.75ಕ್ಕೆ ಏರಿಕೆ ಮಾಡಿ ರಾಜ್ಯದ ಸುಮಾರು 5.25 ಲಕ್ಷ ಸರ್ಕಾರಿ ನೌಕರರು ಮತ್ತು ನಿಗಮ, ಮಂಡಳಿ, ಅನುದಾನಿತ ಸಂಸ್ಥೆಗಳ 3 ಲಕ್ಷ ಸಿಬ್ಬಂದಿ ಹಾಗೂ 4.50 ಲಕ್ಷ ನಿವೃತ್ತ ನೌಕರರು ಈ ಆದೇಶದ ಪ್ರಯೋಜನ ಪಡೆಯಲು ಕಾರಣಕರ್ತರಾದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮತ್ತು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೆ ಸಮಸ್ತ ಹಾಲಿ ಹಾಗೂ ನಿವೃತ್ತ ಸರ್ಕಾರಿ ನೌಕರರ ಪರವಾಗಿ ಧನ್ಯವಾದ ಸಲ್ಲಿಸುತ್ತೇನೆ.



ಧನ್ಯವಾದ ಕೋರುವವರು

**ಸಿ.ಎಸ್. ಷಡಾಕ್ಷರಿ**

ಅಧ್ಯಕ್ಷರು ಹಾಗೂ ಪದಾಧಿಕಾರಿಗಳು,
ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಬೆಂಗಳೂರು